ಸಂಪುಟ: ೦೭/ ಸಂಚಿಕೆ: ೨೦೨/ ಬುಧವಾರ ದಿನಾಂಕ : ೦೧-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491


# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 202/WEDNESDAY Date : 01-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



ನವರಾತ್ರಿ ಉತ್ಸವದ ಒಂಬತ್ತನೆಯ ದಿನವಾದ ಮಂಗಳವಾರ ಧಾರವಾಡ ಶಾಂತಿ ನಿಕೇತನ ನಗರದ ಶ್ರೀ ಕರಿಯಮ್ಮ ದೇವಿಗೆ ಶ್ರೀ ಕನ್ಯಾಕುಮಾರಿ ದೇವಿ ಅಲಂಕಾರ



ಬೈಲಹೊಂಗಲ ಪಟ್ಟಣದ ಪತ್ರಿಬಸವ ನಗರ 3ನೇ ಅಡ್ಡರಸ್ತೆಯಲ್ಲಿರುವ ಶ್ರೀ ಕರೆಮ್ಮಾದೇವಿಯ ದೇವಸ್ಥಾನದ ನೂತನ ಪಾಲಕಿ ಹಾಗೂ ದೇವಿಯ ಉತ್ಸವ ಮೂರ್ತಿ ಲೋಕಾರ್ಪಣೆ ಕಾರ್ಯಕ್ರಮ ಅ.02ರಂದು ನಡೆಯಲಿದೆ.

# ಪ್ರವಾಹದಿಂದ ಬೆಳೆ ಹಾನಿ

## 2 ಸಾವಿರ ಕೋಟಿಗೂ ಹೆಚ್ಚು ಪರಿಹಾರಕ್ಕೆ ಕ್ರಮ ಮುಖ್ಯಮಂತ್ರಿ

**ಕಲಬುರಗಿ:** ಕಲ್ಯಾಣ ಕರ್ನಾಟಕ ಸೇರಿದಂತೆ ರಾಜ್ಯದೆಲ್ಲೆಡೆ ಪ್ರಾಥಮಿಕ ಅಂದಾಜು ಪ್ರಕಾರ ಸುಮಾರು 9,60,578 ಹೆಕ್ಟೇರ್ ಬೆಳೆ ಹಾನಿಯಾಗಿದ್ದು, ಕೂಡಲೇ ಎನ್‌ಡಿಆರ್‌ಎಫ್ ಅಡಿಯಲ್ಲಿ ಸೇರಿದಂತೆ ರಾಜ್ಯದ ವಿಶೇಷ ಅನುದಾನ ಸೇರಿಸಿ ಸುಮಾರು 2000–2500 ಕೋಟಿಗೂ ಹೆಚ್ಚು ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದ್ದಾರೆ.

ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಿದ ಬಳಿಕ ಇಲ್ಲಿನ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಉತ್ತರ ಕರ್ನಾಟಕದ 8 ಜಿಲ್ಲೆಗಳಲ್ಲೇ ಶೇ.95 ರಷ್ಟು ಬೆಳೆ ಹಾನಿಗೀಡಾಗಿದೆ. ಈಗಾಗಲೇ ಪರಿಹಾರ ನೀಡುತ್ತಾ ಬಂದಿದ್ದು, ಇನ್ನುಳಿದ ನಷ್ಟದ ಕುರಿತಾಗಿ ಹಂತ ಹಂತವಾಗಿ ಪರಿಹಾರ ನೀಡಲಾಗುತ್ತದೆ ಎಂದರು.

ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಈ ವರ್ಷ ಹಿಂದೆಂದೂ ಕಾಣದ ಪ್ರಮಾಣದಲ್ಲಿ ಮಳೆಯಾಗಿದೆ. ಉತ್ತರ ಒಳನಾಡಿನಲ್ಲಿ ಸರಾಸರಿ 472 ಮಿ.ಮೀ. ಮಳೆಯಾಗಬೇಕಿತ್ತು. ಆದರೆ, ಈ ವರ್ಷ 576 ಮಿ.ಮೀ.ಗಳಷ್ಟು ಅಂದರೆ ಶೇ.22 ರಷ್ಟು ಹೆಚ್ಚಿನ ಮಳೆಯಾಗಿದೆ. ಅಲ್ಲದೆ, ಮಹಾರಾಷ್ಟ್ರದಿಂದ ವಿವಿಧ ನದಿ, ಜಲಾಶಯಗಳಿಂದ ಹೆಚ್ಚಿನ ನೀರು ಬಿಟ್ಟಿರುವುದರಿಂದ ವಿಜಯಪುರ, ಕಲಬುರಗಿ, ಯಾದಗಿರಿ ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದೆ. ಈ ಜಿಲ್ಲೆಗಳಲ್ಲಿ ಒಟ್ಟಾರೆ 117 ಗ್ರಾಮಗಳು ಪ್ರವಾಹಪೀಡಿತವಾಗಿದ್ದು, 80 ಕಾಳಜಿ ಕೇಂದ್ರಗಳನ್ನು ಸ್ಥಾಪಿಸಿ, 10,576 ಮಂದಿಯನ್ನು ಆರೈಕೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

NDRF ನಿಯಮದ ಪ್ರಕಾರ ಕುಷ್ಕಿ ಜಮೀನಿಗೆ ಹೆಕ್ಟೇರ್ ಗೆ 8,500 ರೂ., ನೀರಾವರಿ ಜಮೀನಿಗೆ ಹೆಕ್ಟೇರ್ ಗೆ 17 ಸಾವಿರ ರೂ., ಬಹು ವಾರ್ಷಿಕ ಬೆಳೆಗೆ 22,500 ರೂ. ಇದೆ. ಈ ಓಆಖಈ ಹಣದ ಜೊತೆಗೆ ರಾಜ್ಯ ಸರ್ಕಾರ ಹೆಚ್ಚುವರಿಯಾಗಿ ಪ್ರತೀ ಹೆಕ್ಟೇರ್ ಗೆ 8,500 ರೂ. ಪರಿಹಾರ ಕೊಡಲಿದೆ. ಕುಷ್ಕಿ ಜಮೀನಿಗೆ ಹೆಕ್ಟೇರ್ ಗೆ 8,500ರೂ.+8,500 ರೂ. ಸೇರಿ ಒಟ್ಟು 17,000 ರೂ., ನೀರಾವರಿ ಜಮೀನಿಗೆ 17,000 ರೂ. + 8,500 ರೂ. ಸೇರಿ ಒಟ್ಟು 25,500 ರೂ., ಬಹುವಾರ್ಷಿಕ ಬೆಳೆಗೆ ಹೆಕ್ಟೇರ್ ಗೆ 22,500 ರೂ. + 8,500 ರೂ. ಸೇರಿ ಒಟ್ಟು 31,000 ಸಾವಿರ ರೂ. ರೈತರಿಗೆ ನೀಡಲಾಗುತ್ತದೆ ಎಂದು ಹೇಳಿದರು. ರಾಜ್ಯದಲ್ಲಿ 10 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿರುವ ಅಂದಾಜಿದೆ. ಈ ಪ್ರಮಾಣ ಇನ್ನೂ ಹೆಚ್ಚು ಆಗಬಹುದು. ಜಂಟಿ ಸಮೀಕ್ಷೆ ಪೂರ್ಣ ಆದ ಬಳಿಕ ಸ್ಪಷ್ಟವಾಗಿ ಗೊತ್ತಾಗುತ್ತದೆ. ಸದ್ಯ 5 ಲಕ್ಷ ಹೆಕ್ಟೇರ್ ನಲ್ಲಿ ಮಾತ್ರ ಜಂಟಿ ಸಮೀಕ್ಷೆ ಮುಗಿದಿದ್ದು, ಸಮೀಕ್ಷೆ ಪೂರ್ಣಗೊಂಡ ತಕ್ಷಣ ಹಣ ಅವರ ಖಾತೆಗಳಿಗೆ ವರ್ಗಾವಣೆ ಮಾಡಲಾಗುತ್ತದೆ. ಪರಿಹಾರ ಹಣ ಇದಕ್ಕಿಂತಲೂ ಮುಂದೆ ಹೆಚ್ಚಳ ಕೂಡ ಆಗಬಹುದು ಎಂದು ಹೇಳಿದ್ದಾರೆ.



> ರಾಜ್ಯದಲ್ಲಿ ಪ್ರವಾಹ ಪೀಡಿತರಿಗೆ ಹೆಚ್ಚಿನ ಪರಿಹಾರಕ್ಕಾಗಿ ಕೇಂದ್ರ ಸರ್ಕಾರಕ್ಕೆ ಮಾನವಿ ಸಲ್ಲಿಸಲಾಗುತ್ತದೆ. ಇದಕ್ಕೆ ಕೇಂದ್ರ ಸ್ಪಂದಿಸಲೇಬೇಕಾಗುತ್ತದೆ. ಸುಮಾರು 2,000 ಕೋಟಿ ರೂ. ಪರಿಹಾರಕ್ಕೆ ಮನವಿ ನೀಡಲು ಸರ್ಕಾರದಿಂದ ನಿಯೋಗ ಹೊರಡಲಿದ್ದು, ಅನುದಾನ ಬಿಡುಗಡೆಗೆ ಪ್ರಧಾನ ಮಂತ್ರಿ, ಕೃಷಿ, ಹಣಕಾಸು ಸಚಿವರನ್ನು ಭೇಟಿಯಾಗಿ ಒತ್ತಾಯಿಸಲಾಗುವುದು.
>
> **ಸಿದ್ದರಾಮಯ್ಯ**
> **ಮುಖ್ಯಮಂತ್ರಿ**

ರಾಜ್ಯದಲ್ಲಿ ಜೂ.1ರಿಂದ ಈವರೆಗೆ ಮಳೆ ಹಾನಿಯಿಂದಾಗಿ 52 ಮಂದಿ ಮೃತಪಟ್ಟಿದ್ದಾರೆ. ಸೆ.8 ರವರೆಗಿನ ಮೃತಪಟ್ಟವರಿಗೆ ಪರಿಹಾರ ನೀಡಲಾಗಿದೆ. ಗೋಡೆ ಕುಸಿದು 15 ಮಂದಿ, ನೀರಿನಲ್ಲಿ ಮುಳಗಿ ಅಥವಾ ಕೊಚ್ಚಿ ಹೋಗಿ 23 ಮಂದಿ ನಿಧನರಾಗಿದ್ದಾರೆ. ಅಲ್ಲದೆ, ರಾಜ್ಯದಲ್ಲಿ ಒಟ್ಟು 422 ಜಾನುವಾರುಗಳು ಮರಣ ಹೊಂದಿವೆ. ಇದರಲ್ಲಿ ಯಾದಗಿರಿ ಜಿಲ್ಲೆ ಒಂದರಲ್ಲೇ 245 ಜಾನುವಾರುಗಳು ಮೃತಪಟ್ಟಿದ್ದು, ಕಲಬುರಗಿ 27, ವಿಜಯಪುರದಲ್ಲಿ 3, ಬೀದರ್ ನಲ್ಲಿ 38 ಜಾನುವಾರುಗಳು ಮರಣ ಹೊಂದಿವೆ. ಈ ಪೈಕಿ 407 ಜಾನುವಾರುಗಳ ಮಾಲಕರಿಗೆ ಪರಿಹಾರ ನೀಡಲಾಗಿದೆ ಎಂದು ವಿವರಿಸಿದರು.

547 ಮನೆಗಳು ಪೂರ್ಣ ಪ್ರಮಾಣದಲ್ಲಿ ಹಾನಿಗೊಳಗಾಗಿವೆ. ಇವುಗಳಿಗೆ ತಲಾ 1.20 ಲಕ್ಷ ರೂ. ಪರಿಹಾರ ನೀಡಲಾಗಿದೆ. ಅನಧಿಕೃತವಾಗಿ ನಿರ್ಮಿಸಿದ್ದ 62 ಮನೆಗಳಿಗೆ ತಲಾ ಒಂದು ಲಕ್ಷ ರೂ., ಭಾಗಶಃ ಹಾನಿಯಾದ ಮನೆಗಳು (ಶೇ.50 ರಿಂದ 75). ಇವುಗಳಿಗೆ ತಲಾ 50 ಸಾವಿರ ರೂ.ಗಳ ಪರಿಹಾರ ವಿತರಿಸಲಾಗಿದೆ ಎಂದರು.

ಶೇ.15ರಿಂದ 20ರಷ್ಟು ಹಾನಿಯಾಗಿದ್ದ 3,881 ಮನೆಗಳಿಗೆ 6,500 ರೂ. ಪ್ರಕಾರ ಪರಿಹಾರ ನೀಡಲಾಗಿದ್ದು, ಒಟ್ಟಾರೆ ಇದುವರೆಗೆ 23.12 ಕೋಟಿ ರೂ. ಗಳನ್ನು ಪರಿಹಾರವಾಗಿ ಮನೆಗಳನ್ನು ಕಳೆದುಕೊಂಡವರಿಗೆ ಕೊಡಲಾಗಿದೆ ಎಂದರು.

ಪ್ರವಾಹದ ಪರಿಣಾಮವಾಗಿ ಬಟ್ಟೆ ಮತ್ತು ಗೃಹ ಬಳಕೆ ವಸ್ತುಗಳನ್ನು ಕಳೆದುಕೊಂಡ 4,858 ಕುಟುಂಬಗಳಿಗೆ ಈವರೆಗೆ 2.42 ಕೋಟಿ ರೂ. ಗಳ ಪರಿಹಾರ ನೀಡಲಾಗಿದ್ದು, ರಸ್ತೆ, ಸೇತುವೆ ಮುಂತಾದವುಗಳ ಸಮೀಕ್ಷೆ ಕಾರ್ಯ ನಡೆಯುತ್ತಿದೆ. ಸಮೀಕ್ಷೆ ಪೂರ್ಣಗೊಂಡು ವರದಿ ಬಂದ ಕೂಡಲೇ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುವುದು. ಈಗಾಗಲೇ ಪ್ರತಿ ಕ್ಷೇತ್ರಕ್ಕೆ ವಿಶೇಷ ಅನುದಾನದ ರೂಪದಲ್ಲಿ 25 ರಿಂದ 50 ಕೋಟಿ ರೂ. ನೀಡಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕಂದಾಯ ಸಚಿವ ಕೃಷ್ಣ ಭೈರೇಗೌಡ, ಕೃಷಿ ಸಚಿವ ಚೆಲುವರಾಯ್ ಸ್ವಾಮಿ, ಕಲಬುರಗಿ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಶರಣಪ್ರಕಾಶ್ ಪಾಟೀಲ್, ಶರಣಬಸಪ್ಪ ದರ್ಶನಾಪುರ, ಎಂ.ಬಿ.ಪಾಟೀಲ್, ಈಶ್ವರ್ ಖಂಡ್ರೆ, ರಹೀಮ್ ಖಾನ್, ಕೆಕೆ ಆರ್ ಡಿಬಿ ಅಧ್ಯಕ್ಷ ಅಜಯ್ ಸಿಂಗ್, ಅಲ್ಲಮಪ್ರಭು ಪಾಟೀಲ್, ತಿಪ್ಪಣ್ಣಪ್ಪ ಕಮಕನೂರ್, ಜಗದೇವ ಗುತ್ತೇದಾರ್, ಚಂದ್ರಶೇಖರ್ ಪಾಟೀಲ್, ಜಿಲ್ಲಾಧಿಕಾರಿ ಫೌಝಿಯಾ ತರನ್ನುಮ್, ಇತರೆ ಜಿಲ್ಲೆಗಳ ಜಿಲ್ಲಾಧಿಕಾರಿ ಸೇರಿದಂತೆ ಅನೇಕ ಅಧಿಕಾರಿಗಳು ಇದ್ದರು.

### ವೈಮಾನಿಕ ಸಮೀಕ್ಷೆ ನಡೆಸಿದ ಸಿದ್ದರಾಮಯ್ಯ

# ಕಲ್ಯಾಣ ಕರ್ನಾಟಕ ಪ್ರವಾಹ



**ಬೆಂಗಳೂರು:** ಮಹಾರಾಷ್ಟ್ರದಲ್ಲಿ ಭಾರಿ ಮಳೆಯಿಂದಾಗಿ ಉತ್ತರ ಕರ್ನಾಟಕ ಭಾಗದ 6–7 ಜಿಲ್ಲೆಗಳು ಜಲಾವೃತವಾಗಿದ್ದು, ಭಾರೀ ಪ್ರಮಾಣದ ನಷ್ಟ ಸಂಭವಿಸಿದೆ. ಪರಿಹಾರ ಕಾರ್ಯಗಳಿಗೆ ತತ್ವಾರ ಎದುರಾಗಿದೆ. ಗಡಿ ಜಿಲ್ಲೆಗಳಾದ ಬೆಳಗಾವಿ, ಬೀದರ್, ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟೆಗಳಲ್ಲಿ ಜಲ ಪ್ರಳಯದಿಂದಾಗಿ ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

ರಸ್ತೆ ಸಂಪರ್ಕ ಕಡಿತಗೊಂಡಿದ್ದು, ಗ್ರಾಮಗಳು ಜಲ ದಿಗ್ಬಂಧನ ಕ್ಕೊಳಗೊಂಡಿವೆ. ಊರು ಕೆರೆಯಂತಾಗಿದ್ದು, ಸುಮಾರು 50 ಸಾವಿರಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ. ಮನೆಯಲ್ಲಿದ್ದ ದವಸ ಧಾನ್ಯಗಳು, ಎಲೆಕ್ಟ್ರಾನಿಕ್ ಸಲಕರಣೆಗಳು ನೀರಿನಿಂದ ಹಾನಿಗೊಳಗಾಗಿವೆ.

ಕಳೆದ ನಾಲ್ಕೈದು ದಿನಗಳಿಂದಲೂ ನೆರೆ ಹಾವಳಿ ನಿರಂತರವಾಗಿದೆ. ಭೀಮಾ ನದಿ ಪಾತ್ರದಲ್ಲಿ ಜನ ಪರದಾಡುವಂತಾಗಿದೆ. ಜೊತೆಗೆ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ, ಪರಿಹಾರ ಕಾರ್ಯಗಳಿಗೂ ಕಷ್ಟವಾಗಿದೆ. ಬೆಳೆಗಳು ಪ್ರವಾಹದಲ್ಲಿ ಕೊಚ್ಚಿ ಹೋಗಿವೆ. ಇನ್ನೂ ಕೆಲವು ಕಡೆ ನೀರು ನಿಂತು ಕೊಳೆಯಲಾರಂಭಿಸಿವೆ. ರಸ್ತೆ ಸೇತುವೆಗಳು ಹಾನಿಗೊಳಗಾಗಿವೆ. ಜಿಲ್ಲಾಡಳಿತಗಳು ಪುನರ್ವಸತಿ ಕೇಂದ್ರಗಳನ್ನು ತೆರೆದು ಜನರಿಗೆ ನೀರು, ಆಹಾರ, ವೈದ್ಯಕೀಯ ನೆರವು ಒದಗಿಸುತ್ತಿವೆ. ಶಾಲಾ ಕಾಲೇಜುಗಳಿಗೆ ರಜೆ ನೀಡಲಾಗಿದೆ. ಮಹಾರಾಷ್ಟ್ರದ ಜಲಾಶಯಗಳಿಂದ ಲಕ್ಷಾಂತರ ಕ್ಯೂಸೆಕ್ಸ್ ನೀರನ್ನು ಹರಿಯ ಬಿಟ್ಟಿರುವುದರಿಂದಾಗಿ ಮತ್ತಷ್ಟು ಪ್ರವಾಹಪರಿಸ್ಥಿತಿ ಎದುರಾಗಿದೆ. ಜನ ಜಾನುವಾರುಗಳ ಪ್ರಾಣ ರಕ್ಷಣೆಗೆ ಸವಾಲಿನ ಪರಿಸ್ಥಿತಿ ನಿರ್ಮಾಣವಾಗಿದೆ. ವೈಮಾನಿಕ ಸಮೀಕ್ಷೆಯಲ್ಲಿ ಕಂದಾಯ ಸಚಿವ ಕೃಷ್ಣಭೈರೇಗೌಡ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ ಖರ್ಗೆ, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸೇರಿದಂತೆ ಹಲವು ಸಚಿವರು ಉಪಸ್ಥಿತರಿದ್ದರು.

ನೆರೆ ಸಂತ್ರಸ್ಥ ಪ್ರದೇಶಗಳಿಗೆ ರಾಜ್ಯಸರ್ಕಾರವೇ ತ್ವರಿತ ಸ್ಪಂದನೆ ನೀಡಿದ್ದು, ಮತ್ತಷ್ಟು ಸಹಾಯಕ್ಕಾಗಿ ಜನ ಯಾಚಿಸುತ್ತಿದ್ದಾರೆ. ಮಹಾರಾಷ್ಟ್ರ ಸರ್ಕಾರ ಏಕಾಏಕಿ ಹೆಚ್ಚುವರಿ ನೀರು ಹರಿಯ ಬಿಟ್ಟಿರುವುದರಿಂದ ಕರ್ನಾಟಕದಲ್ಲಿ ಸಮಸ್ಯೆಗಳಾಗುತ್ತಿವೆ ಎಂಬ ಅಸಮಾಧಾನ ನಾಯಕರಿಂದ ಕೇಳಿ ಬರುತ್ತಿವೆ.

# ಹೈಡ್ರಾಲಿಕ್ ವೈಫಲ್ಯ

## ಲಖನೌಗೆ ತುರ್ತು ವಾಪಸ್

**ಲಖನೌ:** ಲಖನೌನ ಚೌಧರಿ ಚರಣ್ ಸಿಂಗ್ ವಿಮಾನ ನಿಲ್ದಾಣದಿಂದ ಸೋಮವಾರ ರಾತ್ರಿ, ಬ್ಯಾಂಕಾಕ್‌ಗೆ ತೆರಳುತ್ತಿದ್ದ ಏರ್‌ಏಷ್ಯಾ ವಿಮಾನ ಈಆ 147, ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ತಾಂತ್ರಿಕ ದೋಷ ಕಾಣಿಸಿಕೊಂಡಿದ್ದು, ತಕ್ಷಣ ಲಖನೌಗೆ ವಾಪಸ್ ಬಂದು ತುರ್ತು ಭೂಸ್ಪರ್ಶ ಮಾಡಿದೆ. ವಿಮಾನ ನಿಲ್ದಾಣದ ಮೂಲಗಳ ಪ್ರಕಾರ, 132 ಪ್ರಯಾಣಿಕರು ಮತ್ತು ಆರು ಸಿಬ್ಬಂದಿಯನ್ನು ಹೊತ್ತ ವಿಮಾನವು ರಾತ್ರಿ 10:50 ಕ್ಕೆ ಟೇಕ್ ಆಫ್ ಆಯಿತು. ಆದರೆ ಆಕಾಶದಲ್ಲಿದ್ದಾಗ ಹೈಡ್ರಾಲಿಕ್ ವೈಫಲ್ಯ ಕಾಣಿಸಿಕೊಂಡಿದೆ. ಕ್ಷಿಪ್ರವಾಗಿ ಕಾರ್ಯನಿರ್ವಹಿಸಿದ ಪೈಲಟ್‌ಗಳು ಲಖನೌನ ವಾಯುಪ್ರದೇಶದಲ್ಲಿ 21 ನಿಮಿಷಗಳ ಕಾಲ ಸುತ್ತುವರೆದು ವಿಮಾನವನ್ನು ಸುರಕ್ಷಿತವಾಗಿ ಲ್ಯಾಂಡಿಂಗ್ ಮಾಡಲಾಗಿದೆ.

# ಶಾಲಾ ಕಟ್ಟಡ ಕುಸಿತ

## ಮೂವರ ಸಾವು, ೩೮ ಮಂದಿ ಕಣ್ಮರೆ


**ಸಿಡೋರ್ಜೊ:** ಇಂಡೋನೇಷ್ಯಾದಲ್ಲಿ ಶಾಲಾ ಕಟ್ಟಡ ಕುಸಿದು ಮೂವರು ವಿದ್ಯಾರ್ಥಿಗಳು ಜೀವಂತ ಸಮಾಧಿಯಾಗಿದ್ದು, 38ಕ್ಕೂ ಹೆಚ್ಚು ಮಂದಿ ಕಣರೆಯಾಗಿದ್ದಾರೆ ಎಂದು ತಿಳಿದುಬಂದಿದೆ.ಇಂದು ಬೆಳಿಗ್ಗೆ ಏಕಾಏಕಿ ಕಟ್ಟಡ ಕುಸಿದು ಈ ಘಟನೆಯಲ್ಲಿ ನೂರಕ್ಕೂ ಹೆಚ್ಚು ಜನರು ಅವಶೇಷಗಳಲ್ಲಿ ಹೂತುಹೋಗಿದ್ದರು. ಪೂರ್ವ ಜಾವಾ ಪಟ್ಟಣದ ಸಿಡೋರ್ಜೊದಲ್ಲಿರುವ ಅಲ್ ಖೋಜಿನಿ ಇಸ್ಲಾಮಿಕ್ ಬೋರ್ಡಿಂಗ್ ಶಾಲೆಯಲ್ಲಿ ಕುಸಿದು ಎಂಟು ಗಂಟೆಗಳಿಗಿಂತ ಹೆಚ್ಚು ಕಾಲ ರಕ್ಷಣಾ ಕಾರ್ಯಕರ್ತರು, ಪೊಲೀಸರು ಮತ್ತು ಸೈನಿಕರು ರಾತ್ರಿಯಿಡೀ ಅಗೆದು ಗಾಯಗೊಂಡ ಬದುಕುಳಿದವರನ್ನು ಹೊರತೆಗೆದರು. ಘಟನೆಯಲ್ಲಿ ಮೂವರು ವಿದ್ಯಾರ್ಥಿಗಳು ಸಾವನ್ನಪ್ಪಿರುವುದು ದೃಢಪಟ್ಟಿದೆ. ವಿದ್ಯಾರ್ಥಿಗಳ ಕುಟುಂಬಗಳು ಆಸ್ಪತ್ರೆಗಳಲ್ಲಿ ಅಥವಾ ಕುಸಿದ ಕಟ್ಟಡದ ಬಳಿ ಜಮಾಯಿಸಿ, ತಮ್ಮ ಮಕ್ಕಳ ಸುದ್ದಿಗಾಗಿ ಆತಂಕದಿಂದ ಕಾಯುತ್ತಿದ್ದರು.ಬೋರ್ಡಿಂಗ್ ಶಾಲಾ ಸಂಕೀರ್ಣ ದಲ್ಲಿ ಸ್ಥಾಪಿಸಲಾದ ಕಮಾಂಡ್ ಪೋಸ್ಟ್‌ನಲ್ಲಿರುವ ಸೂಚನಾ ಫಲಕವು ಮಂಗಳವಾರ ಬೆಳಿಗ್ಗೆ 65 ವಿದ್ಯಾರ್ಥಿಗಳು ಕಾಣೆಯಾಗಿದ್ದು ಅವರಲ್ಲಿ 38 ಮಂದಿಯನ್ನು ಪತ್ತೆಹಚ್ಚಲು ಪಟ್ಟಿ ಮಾಡಲಾಗಿದೆ.

# ಯುಕೆಪಿ ೩ನೇ ಹಂತದ ಯೋಜನೆ ೩ ವರ್ಷದಲ್ಲಿ ರೈತರಿಗೆ ಪರಿಹಾರ

**ಜಮಖಂಡಿ:** ಉತ್ತರಕರ್ನಾಟಕದ ಬಹುದೊಡ್ಡ ಯೋಜನೆಯಾದ ಕೃಷ್ಣಾ ಮೇಲ್ದಂಡೆ ಯೋಜನೆಯ 3ನೇ ಹಂತಕ್ಕೆ ಸರ್ಕಾರ ಒಪ್ಪಿಗೆ ನೀಡಿದ್ದು, ಮೂರು ವರ್ಷದಲ್ಲಿ ಭೂಮಿ ಕಳೆದುಕೊಳ್ಳುವ ರೈತರಿಗೆ ಪರಿಹಾರ ನೀಡಲಾಗುವದು ಎಂದು ಪ್ರವಾಸೋದ್ಯಮ, ಕಾನೂನು ಮತ್ತು ಸಂಸದಿಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ ಹೇಳಿದರು.

ತಾಲೂಕಿನ ತುಂಗಳ ಗ್ರಾಮದಲ್ಲಿ ಮಂಗಳವಾರ ಶ್ರೀ ಲಕ್ಷ್ಮೀಮೇವೆಂಕಟೇಶ್ವರ ದೇವಸ್ಥಾನದ ಕಳಸಾರೋಹಣ ಕರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪಂಚಗ್ಯಾರಂಟಿ ಯೋಜನೆಗಳಂತೆ ಯುಕೆಪಿ ಮೂರನೇ ಹಂತದ ಯೋಜನೆ ಜಾರಿಗೊಳಿಸಲಾಗುವದು. 75 ಸಾವಿರ ಎಕರೆ ಭೂಸ್ವಾಧೀನಕ್ಕೆ 30 ಸಾವಿರ ಕೋಟಿ ಮತ್ತು ಎಡ–ಬಲದಂಡೆ ಕಾಲುವೆಗಳ ನಿರ್ಮಾಣಕ್ಕೆ 50 ಸಾವಿರ ಎಕರೆ ಜಮೀನು ಸ್ವಾಧೀನ ಪಡಿಸಿಕೊಳ್ಳಲಾಗುತ್ತದೆ. ಅದಕ್ಕಾಗಿ 25 ಸಾವಿರ ಕೋಟಿಗಳನ್ನು ಮೂರು ವರ್ಷಗಳ ಅವಧಿಯಲ್ಲಿ ರೈತರಿಗೆ ಮುಟ್ಟಿಸುವ ಕೆಲಸ ಮಾಡುತ್ತೇವೆ ಎಂದರು.

ಯುಕೆಪಿ ಮೂರನೇ ಹಂತದ ಯೋಜನೆಯಿಂದ ಸಾವಿರಾರು ಹೆಕ್ಟೇರ್ ಪ್ರದೇಶ ನೀರಾವರಿ ಸೌಲಭ್ಯ ಲಭಿಸಲಿದೆ. ಅಂದರೆ 12 ಲಕ್ಷ ಎಕರೆ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಿಕೊಡುವ ಯೋಜನೆಗೆ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. 519 ಮೀ ನೀರು ಸಂಗ್ರಹಣೆಯಿಂದ 524.265 ಮೀಟರ ನೀರು ನಿಲ್ಲಿಸಲು ಕೇಂದ್ರ ಸರ್ಕಾರ ರಾಜ್ಯ ಪತ್ರದಲ್ಲಿ ಅವಾರ್ಡ ಮಾಡುವ ಮೂಲಕ ಪರವಾನಿಗೆ ನೀಡಬೇಕಿದೆ. ಅದಕ್ಕಾಗಿ 2.5 ವರ್ಷಗಳ ಕಾಲಾವಧಿ ಬೇಕಾಗುತ್ತದೆ. ಇಲ್ಲವಾದಲ್ಲಿ ಸರ್ವೋಚ್ಚ ನ್ಯಾಯಾಲಯಕ್ಕೆ ಹೋಗಬೇಕಾಗುತ್ತದೆ. ನೀರಾವರಿಯಿಂದ ಜನರ ಬದುಕು ಹಸನಾಗಲಿದೆ. ಪ್ರಸಕ್ತ ಪಂಚ ಗ್ಯಾರಂಟಿಗಳಿಂದ ಪ್ರತಿ ಬಡಕುಟುಂಬಗಳಿಗೆ ತಿಂಗಳಿಗೆ ತಲಾ 5 ಸಾವಿರ ಮುಟ್ಟುತ್ತಿದ್ದು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕು ಎಂದರು.



ಜಿಲ್ಲಾ ಉಸ್ತುವಾರಿ ಹಾಗೂ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ಮಾತನಾಡಿ, ಸಚಿವ ಎಚ್.ಕೆ.ಪಾಟೀಲರು ತುಂಗಳ ಗ್ರಾಮದ ಬೀಗರು ಅವರು ಶ್ರಮ ಪಟ್ಟು ಸಾವಳಗಿ–ತುಂಗಳ ಏತ ನೀರಾವರಿ ಯೋಜನೆ ಜಾರಿಗೆ ತರುವ ಮೂಲಕ ನೀರು ತಂದುಕೊಟ್ಟಿದ್ದಾರೆ. ಇಂಥಹ ಬೀಗರಿದ್ದರೇ ನಮ್ಮೆಲ್ಲ ಸಮಸ್ಯೆಗಳು ಪರಿಹಾರವಾಗಲಿವೆ. ಸಾವಳಗಿ ತುಂಗಳ ಏತನೀರಾವರಿ ಯೋಜನೆ ನಿರ್ವಹಣೆಗೆ ಪ್ರಯತ್ನಿಸಲಾಗುವದು. ಸರ್ಕಾರದ ಯೋಜನೆಗಳಿಂದ ಬಡವರಿಗೆ ಸಾಕಷ್ಟು ಅನುಕೂಲವಾಗಿದೆ ಎಂದರು.

ಬೀಳಗಿ ಶಾಸಕ, ಹಟ್ಟಿ ಚಿನ್ನದ ಗಣಿ ನಿಗಮ ಅಧ್ಯಕ್ಷ ಜೆ.ಟಿ.ಪಾಟೀಲ ಮಾತನಾಡಿದರು.ಮಾಜಿ ಶಾಸಕರಾದ ಶ್ರೀಕಾಂತ ಕುಲಕರ್ಣಿ, ಆನಂದ ನ್ಯಾಮಗೌಡ ಮಾತನಾಡಿದರು. ವೇಮನ ವಿವಿ ಸಂಯೋಜಕ ಎಚ್.ಬಿ.ನಿಲಗುಂದ, ಪ್ರಾಚರ್ಯ ಟಿ.ಪಿ.ಗಿರಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯಲ್ಲಿ ಕೊಕಟನೂರಿನ ಗುರುಶಾಂತಲಿಂಗ ಸ್ವಾಮಿಗಳು, ಸಿದ್ಧಲಿಂಗ ಆಶ್ರಮದ ಅನುಸೂಯಾತಾಯಿ, ಈಶ್ವರಿ ವಿವಿಯ ವೈಷ್ಣವಿಅಕ್ಕ, ದೇವಸ್ಥಾನದ ಅರ್ಚಕ ಶಂಕರ ಕುಲಕರ್ಣಿ, ಏಗಪ್ಪ ಸವದಿ, ಅರ್ಬನ ಬ್ಯಾಂಕಅಧ್ಯಕ್ಷ ರಾಹುಲ ಕಲೂತಿ, ನಿರ್ದೇಶಕ ರಾದ ಅರುಣಕುಮಾರ ಶಹಾ, ಫಕ್ಕೀರಸಾಬ ಬಾಗವಾನ, ಶ್ರೀಶೈಲ ದಳವಾಯಿ, ವರ್ಧಮಾನ ನ್ಯಾಮಗೌಡ, ಅರ್ಜುನ ದಳವಾಯಿ, ಮುತ್ತಣ್ಣ ಹಿಪ್ಪರಗಿ, ಸುಶೀಲಕುಮಾರ ಬೆಳಗಲಿ, ಎಲ್.ಆರ್.ಉದಪುಡಿ, ತುಕಾರಾಮ ಹಾಜವ್ವಗೋಳ, ಕಲ್ಲಪ್ಪ ಗಿರಡ್ಡಿ, ವಿಜಯಲಕ್ಷ್ಮೀ ಹೊಸೂರು, ಪಿಡಿಓ ಅಶೋಕ ಜನಗೌಡ, ಬಸವಂತಣ್ಣ ಕನಾಳ ಸಹಿತ ಹಲವರು ಇದ್ದರು.

# ಬೆಂಗಳೂರು-ಮೈಸೂರು ಬಸ್ ಪ್ರಯಾಣ ದರ ಹೆಚ್ಚಳಕ್ಕೆ ಕಿಡಿ

**ನವದೆಹಲಿ:** ಕರ್ನಾಟಕ ಸರ್ಕಾರ ದಸರಾ ಹಬ್ಬದಲ್ಲಿ ಬೆಂಗಳೂರು – ಮೈಸೂರು ಪ್ರಯಾಣಿಕರಿಗೆ ಪ್ರಯಾಣ ದರ ಹೆಚ್ಚಿಸುವ ಮೂಲಕ "ಮಹಿಷಾಸುರ ಟ್ಯಾಕ್ಸ್" ಹಾಕಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರ ಸಚಿವ ಪ್ರಲ್ಹಾದ ಜೋಶಿ ಕಿಡಿ ಕಾರಿದ್ದಾರೆ.



ಬೆಂಗಳೂರು–ಮೈಸೂರು ಬಸ್ ಪ್ರಯಾಣ ದರ ಹೆಚ್ಚಿಸಿ ಜನರ ಪಾಲಿಗೆ ಮಹಿಷಾಸುರ ಸರ್ಕಾರವಾಗಿದೆ. ಈಗಾಗಲೇ 48ಕ್ಕೂ ಹೆಚ್ಚು ವಸ್ತುಗಳ ಬೆಲೆ ಹೆಚ್ಚಿಸಿದೆ. ಇದೀಗ ದಸರಾ ಹಬ್ಬಕ್ಕೂ ಮೊದಲೇ ಬೆಂಗಳೂರು–ಮೈಸೂರು ಬಸ್ ಪ್ರಯಾಣ ದರವನ್ನೂ ಬರೋಬ್ಬರಿ ?20–30 ಹೆಚ್ಚಿಸುವ ಮೂಲಕ ಜನಸಾಮಾನ್ಯರನ್ನು ಕಿತ್ತು ತಿನ್ನುತ್ತಿದೆ ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಒಂದು ರೀತಿ ಹಗಲು ದರೋಡೆಗೆ ಇಳಿದಿದೆ. ದುರಾಡಳಿತದ ಪರಮಾವಧಿ ಎಲ್ಲೆ ಮೀರಿದೆ. ಭರವಸೆಗಳನ್ನು ನಂಬಿ ಅಧಿಕಾರ ಕೊಟ್ಟ ಶ್ರೀಸಾಮಾನ್ಯರು ಇದೀಗ ಅಡಕತ್ತರಿಯಲ್ಲಿ ಸಿಲುಕಿದ್ದಾರೆ ಎಂದು ಟೀಕಿಸಿದ್ದಾರೆ.ಪ್ರಧಾನಿ ನರೇಂದ್ರ ಮೋದಿ ಅವರು ಉಖಖ ತಗ್ಗಿಸಿ ಪ್ರತಿಯೊಂದು ವಸ್ತುಗಳ ಬೆಲೆ ಇಳಿಕೆಗೆ ಕ್ರಮ ಕೈಗೊಂಡಿದ್ದರೆ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಮಾತ್ರ ಒಂದಿಲ್ಲೊಂದು ವಸ್ತುಗಳ ಬೆಲೆ ಏರಿಸಿ ಜನಸಾಮಾನ್ಯರನ್ನು ಗೋಳು ಹೋಯ್ದುಕೊಳ್ಳುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಶ್ರೀಸಾಮಾನ್ಯರ ಏಳಿಗೆ ಬಯಸಿ ಉಖಖ ಇಳಿಸಿದರು. ತರುವಾಯ ಪ್ರತಿಯೊಂದು ವಸ್ತುಗಳನ್ನೂ ಜನರಿಗೆ ಕೈಗೆಟುಕುವ ದರದಲ್ಲಿ ಲಭ್ಯವಾಗುವಂತೆ ಮಾಡಿದ್ದಾರೆ. ಆದರೆ, ಇತ್ತ ರಾಜ್ಯ ಕಾಂಗ್ರೆಸ್ ಸರ್ಕಾರ ಜನರನ್ನು ಬೆಲೆ ಏರಿಕೆಯಿಂದ ಬೀದಿಗೆ ತಳ್ಳುತ್ತಿದೆ ಎಂದು ಆರೋಪಿಸಿದ್ದಾರೆ.

### ನಟ ದರ್ಶನ್‌ಗೆ ಜೈಲಿನಲ್ಲಿ ಹಾಸಿಗೆ, ದಿಂಬು ನೀಡದ ಆರೋಪ

# ಅ.೨ಕ್ಕೆ ಆದೇಶ ಕಾಯ್ದಿರಿಸಿದ ಕೋರ್ಟ್

**ಬೆಂಗಳೂರು:** ರೇಣುಕಾಸ್ವಾಮಿ ಹತ್ಯೆ ಪ್ರಕರಣದ ಆರೋಪಿ ನಟ ದರ್ಶನ್ ಅವರಿಗೆ ಜೈಲಿನಲ್ಲಿ ಹೆಚ್ಚುವರಿ ಹಾಸಿಗೆ ಹಾಗೂ ದಿಂಬುಗಳನ್ನ ನೀಡದ ಆರೋಪ ಕುರಿತ ಅರ್ಜಿಯ ಆದೇಶವನ್ನ 57ನೇ ಸೆಷನ್ಸ್ ನ್ಯಾಯಾಲಯ ಅಕ್ಟೋಬರ್ 9ಕ್ಕೆ ಕಾಯ್ದಿರಿಸಿದೆ. ಇಂದು ಅರ್ಜಿಯ ವಿಚಾರಣೆ ಆರಂಭವಾಗುತ್ತಿದ್ದಂತೆ ಖುದ್ದು ಹಾಜರಾದ ಜೈಲು ಅಧೀಕ್ಷಕ ಸುರೇಶ್ ಅವರು ದರ್ಶನ್‌ಗೆ ನೀಡಿರುವ ಸೌಲಭ್ಯಗಳ ಕುರಿತು ನ್ಯಾಯಾಲಯಕ್ಕೆ ವರದಿ ಸಲ್ಲಿಸಿದರು.

ಜೈಲಾಧಿಕಾರಿಗಳ ಪರ ವಾದ ಆರಂಭಿಸಿದ ಪ್ರಸನ್ನ ಕುಮಾರ್, 'ಜೈಲಿನ ನಿಯಮಗಳ ಪ್ರಕಾರ ಸೌಲಭ್ಯಗಳನ್ನು ನೀಡಲಾಗಿದೆ. ಮಲಗಲು ಪಲ್ಲಂಗ ಕೊಡಿ ಎಂದರೆ ಹೇಗೆ ಕೊಡಲು ಸಾಧ್ಯ ಆರೋಪಿಗೆ ಬೆಳಗ್ಗೆ ಮತ್ತು ಸಾಯಂಕಾಲ ತಲಾ 1 ಗಂಟೆ ವಾಕಿಂಗ್ ಮಾಡಲು ಅವಕಾಶ ನೀಡಲಾಗಿದೆ. ಆದರೆ ಆರೋಪಿ ಹೊರಗಡೆ ಹೋಗಬೇಕು, ಇದೇ ಬ್ಯಾರಕ್‌ನಲ್ಲಿಯೇ ಇರಬೇಕು ಎಂದರೆ ಆಗುವುದಿಲ್ಲ. ಅವರಿಗೆ ಬಿಸಿಲು ಬರುತ್ತಿಲ್ಲ ಎಂದರೆ ಜೈಲಾಧಿಕಾರಿಗಳು ಹೊಣೆಯಾಗಲು ಸಾಧ್ಯವಿಲ್ಲ. ಮೂಲಭೂತ ಹಕ್ಕು ಇರಬಹುದು. ಆದರೆ ಜೈಲಿನ ನಿಯಮಗಳ ಪ್ರಕಾರವೇ ನಡೆದುಕೊಳ್ಳಬೇಕಾಗುತ್ತದೆ' ಎಂದರು.

ಪ್ರತಿಯಾಗಿ ದರ್ಶನ್ ಪರ ವಾದ ಮಂಡಿಸಿದ ವಕೀಲ ಸುನೀಲ್ ಅವರು ಜೈಲಾಧಿಕಾರಿಗಳ ವಿರುದ್ಧ ಸಾಲು ಸಾಲು ಆರೋಪಗಳನ್ನು ಮಾಡಿದರು. ಈ ಹಿಂದೆ ನ್ಯಾಯಾಲಯ ನೀಡಿರುವ ಸೂಚನೆಗಳನ್ನು ಗಾಳಿಗೆ ತೂರಲಾಗಿದೆ. ನ್ಯಾಯಾಲಯ ನೀಡಿದ್ದ ಸೂಚನೆಗಳು ಜೈಲಧಿಕಾರಿಗಳಿಗೆ ಅರ್ಥವಾದಂತಿಲ್ಲ, ಬಹುಶಃ ಅವರಗೆ ಇಂಗ್ಲಿಷ್ ಅರ್ಥವಾದಂತಿಲ್ಲ ಎಂದು ಆರೋಪಿಸಿದರು.



ಇದಕ್ಕೆ ಸರ್ಕಾರಿ ವಕೀಲರು ಆಕ್ಷೇಪ ವ್ಯಕ್ತಪಡಿಸಿದಾಗ, ನ್ಯಾಯಾಲಯದ ಘನತೆಗೆ ತಕ್ಕಂತೆ ವಾದ ಮಂಡಿಸುವಂತೆ ನ್ಯಾಯಾಧೀಶರು ಸೂಚಿಸಿದರು. ಮುಂದುವರೆದು ವಾದ ಮಂಡಿಸಿದ ದರ್ಶನ್ ಪರ ವಕೀಲರು, ಆರೋಪಿಗಾಗಿ ಚಿನ್ನದ ಮಂಚವನ್ನೇನೂ ಕೇಳಿಲ್ಲ, ಅವರ ಆರೋಗ್ಯದ ದೃಷ್ಟಿಯಿಂದ ಕೆಲವು ಸಾಮಾನ್ಯ ವ್ಯವಸ್ಥೆಗಳನ್ನು ಕಲ್ಪಿಸುವಂತೆ ಕೋರಲಾಗಿದೆ. ಯಾವ ಕೈದಿಗೆ ಯಾವ ಸೆಲ್ ನೀಡಬೇಕೆಂದು ಜೈಲಿನ ಕೈಪಿಡಿಯಲ್ಲಿದೆ. ಆದರೆ ಜೈಲಾಧಿಕಾರಿಗಳು ಆ ಮಾರ್ಗಸೂಚಿಗಳನ್ನೂ ಸಹ ಪಾಲಿಸುತ್ತಿಲ್ಲ. ದರ್ಶನ್ ಅವರಿಗಾಗಿಯೇ ಜೈಲಿನಲ್ಲಿ ಪ್ರತ್ಯೇಕ ರಿಜಿಸ್ಟಾರ್ ಇರಿಸಲಾಗಿದೆ.

ಅತ್ಯಾಚಾರ ಪ್ರಕರಣದ ಆರೋಪಿಗೆ ನೀಡಿರುವಂತಹ ಸವಲತ್ತುಗಳನ್ನೂ ಸಹ ದರ್ಶನ್ ಅವರಿಗೆ ನೀಡಿಲ್ಲ. ಆರೋಪಿಯನ್ನು 14 ದಿನ ಮಾತ್ರ ಕ್ವಾರಂಟೈನ್ ಸೆಲ್‌ನಲ್ಲಿರಿಸಬೇಕು. ಆದರೆ 45ದಿನಗಳಿಂದಲೂ ಕ್ವಾರಂಟೈನ್ ಸೆಲ್‌ನಲ್ಲಿ ದರ್ಶನ್ ಅವರನ್ನು ಇರಿಸಲಾಗಿದೆ. ಕ್ವಾರಂಟೈನ್ ಸೆಲ್‌ನಿಂದ ಬೇರೆ ಬ್ಯಾರಕ್‌ಗೆ ವರ್ಗಾಯಿಸಲಿ ಎನ್ನುವುದು ಸದ್ಯದ ನಮ್ಮ ಮನವಿ' ಎಂದು ವಾದ ಮಂಡಿಸಿದರು.

# ಧರ್ಮಸ್ಥಳ ಪ್ರಕರಣ

## ತನಿಖೆಯನ್ನು ಬೇಗ ಪೂರ್ಣಗೊಳಿಸುವಂತೆ ನಿರ್ದೇಶನ

**ಬೆಂಗಳೂರು:** ಧರ್ಮಸ್ಥಳ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡಕ್ಕೆ (ಎಸ್‌ಐಟಿ) ಸರ್ಕಾರವು ತನಿಖೆಯನ್ನು ಆದಷ್ಟು ಬೇಗ ಪೂರ್ಣಗೊಳಿಸುವಂತೆ ನಿರ್ದೇಶಿಸಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ ಮಂಗಳವಾರ ಹೇಳಿದ್ದಾರೆ.



ಪ್ರಕರಣಕ್ಕೆ ಸಂಬಂಧಿಸಿದಂತೆ ವಿಧಿವಿಜ್ಞಾನ ವಿಜ್ಞಾನ ಪ್ರಯೋಗಾಲಯ (ಎಫ್‌ಎಸ್‌ಎಲ್) ವರದಿಗಳು ಬಾಕಿ ಉಳಿದಿವೆ ಎಂದು ಅವರು ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಎಸ್‌ಐಟಿ ತನ್ನ ಕೆಲಸ ಮಾಡುತ್ತಿದೆ. ಎಫ್‌ಎಸ್‌ಎಲ್ ವರದಿಗಳು ಬರಬೇಕು. ಇತ್ತೀಚೆಗೆ ಪತ್ತೆಯಾದ ವಸ್ತುಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿದೆ. ಈ ಹಿಂದೆ ಪತ್ತೆಯಾದ ವಿಷಯಗಳ ಕುರಿತು ವರದಿಗಳನ್ನು ಅಂತಿಮಗೊಳಿಸಿ ಕಳುಹಿಸಲು ನಾವು ಅವರನ್ನು ಕೇಳಿದ್ದೇವೆ. ತನಿಖೆಯನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಎಸ್‌ಐಟಿಗೆ ಸೂಚಿಸಲಾಗಿದೆ' ಎಂದು ಹೇಳಿದರು. 'ತನಿಖೆಗೆ ಸಂಬಂಧಿಸಿದಂತೆ ಒಬ್ಬರ ನಂತರ ಒಬ್ಬರು ಅರ್ಜಿಗಳನ್ನು ಸಲ್ಲಿಸಲು ಬರುವುದು ಮುಂದುವರಿಯಲು ಸಾಧ್ಯವಿಲ್ಲ; ಇದಕ್ಕೆ ಒಂದು ಅಂತ್ಯ ಇರಬೇಕು. ಎಸ್‌ಐಟಿಗೆ ನಾಳೆ ಅಥವಾ ಮರುದಿನವೇ ತನಿಖೆಯನ್ನು ಪೂರ್ಣಗೊಳಿಸಲು ಹೇಳಲು ಸಾಧ್ಯವಿಲ್ಲ. ತನಿಖೆಯನ್ನು ಮುಕ್ತಾಯಗೊಳಿಸಲು ಅವರಿಗೆ ಮಾಹಿತಿ ಅಥವಾ ಸಾಮಗ್ರಿಗಳು ಬೇಕಾಗುತ್ತವೆ. ಎಫ್‌ಎಸ್‌ಎಲ್ ವರದಿ ಬರಬೇಕು; ಆ ವರದಿಗಳನ್ನು ಅಂತಿಮಗೊಳಿಸಬೇಕು. ಆ ಎಲ್ಲ ವಿಷಯಗಳನ್ನು ಪರಿಗಣಿಸಿ, ಎಸ್‌ಐಟಿ ಕಾರ್ಯನಿರ್ವಹಿಸುತ್ತದೆ' ಎಂದು ಅವರು ಹೇಳಿದರು. ದೂರುದಾರರು ಮತ್ತು ಇತರರು ಸಲ್ಲಿಸಿದ್ದ ರಿಟ್ ಅರ್ಜಿಯನ್ನು ಮೇ ತಿಂಗಳಲ್ಲಿ ವಜಾಗೊಳಿಸಿದ ಸುಪ್ರೀಂ ಕೋರ್ಟ್ ಆದೇಶಕ್ಕೆ ಸಂಬಂಧಿಸಿದ ಪ್ರಶ್ನೆಗೆ, ಎಸ್‌ಐಟಿ ತಮ್ಮ ವರದಿಯಲ್ಲಿ ಆ ಅಂಶವನ್ನು ಪರಿಗಣಿಸಬಹುದು ಎಂದು ಪರಮೇಶ್ವರ ಹೇಳಿದರು.

### ವಿಶ್ವ ರೇಬಿಸ್ ದಿನಾಚರಣೆ

# ರೇಬಿಸ್ ನಿಯಂತ್ರಣ ಕುರಿತು ತಾಂತ್ರಿಕ ಕಾರ್ಯಾಗಾರ

**ಧಾರವಾಡ::** ವಿಶ್ವ ರೇಬಿಸ್ ದಿನಾಚರಣೆಯ ಪ್ರಯುಕ್ತ ಇಂದು (ಸೆ.29) ಧಾರವಾಡ ಪಶು ಆಸ್ಪತ್ರೆ ಆವರಣದಲ್ಲಿ ಸಾರ್ವಜನಿಕ ಆರೋಗ್ಯಕ್ಕಾಗಿ ರೇಬಿಸ್ ನಿಯಂತ್ರಣ ಕುರಿತಾದ ತಾಂತ್ರಿಕ ಕಾರ್ಯಾಗಾರವನ್ನು ಜಿಲ್ಲಾ ಆರೋಗ್ಯಧಿಕಾರಿ ಡಾ.ಎಸ್.ಎಮ್. ಹೊನಕೇರಿ ಅವರು ಉದ್ಘಾಟಿಸಿ, ಮಾತನಾಡಿದರು.

ರೇಬಿಸ್ ರೋಗವನ್ನು ಒಂದು ಪ್ರಾಣಿಜನ್ಯ ರೋಗವಾಗಿದ್ದು, ಪ್ರಾಣಿ ಕಡಿತದ ನಂತರ ಲಸಿಕೆಯನ್ನು ಸರಿಯಾಗಿ ತೆಗೆದುಕೊಳ್ಳುವ ಮೂಲಕ ಮಾನವರ ರೇಬಿಸ್ ರೋಗವನ್ನು ಸಂಪೂರ್ಣವಾಗಿ ತಡೆಯಬಹುದು. ರೋಗ ನಿಯಂತ್ರಣ ಸಲುವಾಗಿ ಕಾರ್ಯ ಸಾಧಕ ಪರಿಹಾರ ಮಾರ್ಗಗಳನ್ನು ಹುಡುಕಲು ಕರೆ ನೀಡಿದರು.

ಕಾರ್ಯಾಗಾರದ ಅದ್ಯಕ್ಷತೆ ವಹಿಸಿದ್ದ ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ.ಎಸ್.ವಿ.ಸಂತಿ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಪಶುವೈದ್ಯರು ಸೆಪ್ಟೆಂಬರ ತಿಂಗಳಿನಲ್ಲಿ ಶಾಲಾ-ಕಾಲೇಜುಗಳಲ್ಲಿ ನಡೆಸಿದ ರೇಬೀಸ್ ಜಾಗೃತಿ ಕಾರ್ಯಕ್ರಮದ ಬಗ್ಗೆ ತಿಳಿಸಿದರು.

ರೋಗದ ನಿಯಂತ್ರಣಕ್ಕಾಗಿ ಒಂದು ತಿಂಗಳವರೆಗೆ ಎಲ್ಲ ಸರ್ಕಾರಿ ಪಶು




ಚಿಕಿತ್ಸಾಲಯಗಳಲ್ಲಿ ಸಾಕು ಪ್ರಾಣಿಗಳಾದ ನಾಯಿ ಮತ್ತು ಬೆಕ್ಕುಗಳಿಗೆ ಉಚಿತವಾಗಿ ನಾಯಿ ಹುಚ್ಚು ರೋಗದ ವಿರುದ್ದ ಲಸಿಕೆ ಹಾಕಲಾಗುವುದು ಎಂದು ತಿಳಿಸಿದರು. ಮತ್ತು ರೇಬಿಸ್ ರೋಗ ತಡೆಗಟ್ಟುವ ಮಾಹಿತಿಯ ಭಿತ್ತಿ ಪತ್ರಗಳನ್ನು ಸಭೆಯಲ್ಲಿ ಬಿಡುಗಡೆಗೊಳಿಸಿದರು.

ಡಾ. ಸುನಿಲ್ ಕುಮಾರ ಕೆ.ಎಮ್. ಅವರು ರೇಬಿಸ್ ರೋಗನಿರ್ಣಾಯ (ಡಯಗ್ನೋಸಿಸ್) ಮತ್ತು ರೋಗದ ನಿಯಂತ್ರಣದಲ್ಲಿ (ಕಂಟ್ರೋಲ್) ಆದ ಹೊಸ ವೈಜ್ಞಾನಿಕ ಬೆಳವಣಿಗೆಗಳ ಬಗ್ಗೆ ತರಬೇತಿ ನೀಡಿದರು.

ಕಾರ್ಯಾಗಾರದಲ್ಲಿ ಭಾಗವಹಿಸಿದ ಎಲ್ಲ ಪಶುವೈದ್ಯರುಗಳಿಗೆ, ಸಿಬ್ಬಂದಿಗಳಿಗೆ ಸಭೆಯಲ್ಲಿ ರೇಬಿಸ್ ರೋಗ ನಿರೋದಕ ಲಸಿಕೆಯನ್ನು ಹಾಕಿಸಲಾಯಿತು.

ಮುಖ್ಯ ಅತಿಥಿಗಳಾಗಿ ಇಲಾಖೆಯ ಜಂಟಿ ನಿರ್ದೇಶಕ ಡಾ.ಬಿ.ಎಲ್.ಪರಮೇಶ್ವರ ನಾಯಕ ರವರು ಹಾಗೂ ಉಪನಿರ್ದೇಶಕ ಡಾ.ಪ್ರಮೋದ ಮೂಡಲಗಿ, ಡಾ.ಆರ್.ಎ.ಪಾಟೀಲ, ಡಾ.ಎಮ್.ಎನ್.ಪಾಟೀಲ, ಪಶುವೈದ್ಯಕೀಯ ಅಧ್ಯಕ್ಷ ಡಾ.ಕೃಷ್ಣಪ್ಪ ರಾಥೋಡ ಮತ್ತು ಇತರ ಸದಸ್ಯರು ಹಾಗೂ ಜಿಲ್ಲೆಯ ಎಲ್ಲಾ ಪಶುವೈದ್ಯರು ಉಪಸ್ಥಿತರಿದ್ದರು.

# ಶ್ರೀದೇವಿ ಪುರಾಣ ಕೇಳುವುದರಿಂದ ಮೋಕ್ಷ ಪ್ರಾಪ್ತಿ

**ಗದಗ:** ಶ್ರೀದೇವಿ ಪುರಾಣ ಕೇಳುವುದರಿಂದ ಮೋಕ್ಷ ಪ್ರಾಪ್ತಿಯಾಗುತ್ತದೆ. ಮನೆಯಲ್ಲಿ ಸಿರಿ-ಸಂಪತ್ತು ಅಧಿಕವಾಗುತ್ತದೆ. ಜೀವನದಲ್ಲಿ ನೀತಿ, ಧರ್ಮ, ಆಚಾರ, ವಿಚಾರದಿಂದ ನಡೆಯದಿದ್ದರೆ ಕಷ್ಟ ಬರುತ್ತದೆ. ಪರಮಾತ್ಮನ ಚಿಂತನೆ ಮಾಡಿದರೆ ಮುಕ್ತಿ ದೊರೆಯುತ್ತದೆ ಎಂದು ದತ್ತಾ ಪ್ರಾಪರ್ಟಿಸ್ ನಿರ್ದೇಶಕರಾದ ಶಂಕರಗೌಡ ಹ. ಶಿವನಗೌಡ್ರ ಹೇಳಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮನುಕುಲದ ಸರ್ವಾಂಗೀಣ ಏಳ್ಗೆಗಾಗಿ ಶ್ರೀದೇವಿ ಆರಾಧನೆ ಮುಖ್ಯವಾಗಿದೆ. ಹೀಗಾಗಿ ಪೂರ್ವಜರು ಪರಂಪರಾಗತವಾಗಿ ಶ್ರೀದೇವಿ ಆರಾಧನೆ, ದೇವಿ ಪೂಜಾ ಕಾರ್ಯಗಳನ್ನು ನೆರವೇರಿಸಿಕೊಂಡು ಬರುತ್ತಿದ್ದಾರೆ. ಇಂತಹ ಸಂಸ್ಕೃತಿ ಮುಂದಿನ ಪೀಳಿಗೆಗೂ ಮುಂದುವರೆದುಕೊಂಡು ಸಾಗಬೇಕು ಎಂದು ಎಸ್.ಎಚ್. ಶಿವನಗೌಡ್ರ ಹೇಳಿದರು.

ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಮಾತನಾಡಿ, ದುಷ್ಟರಿಗೆ ಶಿಕ್ಷೆ ಶಿಷ್ಟರ ಪರಿಪಾಲನೆಗೈಯುವ ಶಕ್ತಿ ಸ್ವರೂಪಳಾದ ಮಾತಾ ದುರ್ಗಾದೇವಿಯ ಆರಾಧನೆಯ ಹಬ್ಬವೇ ನವರಾತ್ರಿ. ಈ ಹಬ್ಬದಲ್ಲಿ ದೇವಿಯನ್ನು




ಶಕ್ತಿಯ ನಾನಾ ರೂಪದಲ್ಲಿ ಆರಾಧಿಸಲಾಗುತ್ತದೆ. ದೇವಿ ಮಹಿಷಾಸುರನನ್ನು ವಧೆಗೈದಿದ್ದು, ದುಷ್ಟಗುಣಗಳನ್ನು ದೂರ ಮಾಡಿ ಸಾತ್ವಿಕತೆ ರೂಢಿಸಿಕೊಳ್ಳಬೇಕು ಎಂಬ ಸಂಕೇತ ನೀಡುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಸುಮಾ ಶಿವನಗೌಡ್ರ, ಗಣ್ಯ ವ್ಯಾಪಾರಸ್ಥರಾದ, ಶೈಲೇಂದ್ರಕುಮಾರ ಶಹಾ, ಶ್ರೀಮತಿ ದೀಪ್ತಿ ಶಹಾ, ಡಾ.ಶಶಿಕಾಂತ ಡಿ. ಹಿರೇಮಠ, ಡಾ.ಸ್ಪರ್ಷಾ ಶಶಿಕಾಂತ ಹಿರೇಮಠ ಪಾಲ್ಗೊಂಡಿದ್ದರು. ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷರಾದ ಎಸ್.ಪಿ. ಸಂಶಿಮಠ, ಅಧ್ಯಕ್ಷರಾದ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು. ಶ್ರೀಅನ್ನಪೂರ್ಣೇಶ್ವರ ಸನ್ನಿಧಿಯಲ್ಲಿ ಡಾ.ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು. ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ. ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಸಮಾರಂಭದಲ್ಲಿ ವಿವಿಧ ಭಕ್ತಿಸೇವೆ ವಹಿಸಿದ್ದ ಗಣ್ಯರನ್ನು ಸನ್ಮಾನಿಸಲಾಯಿತು. ಬಿ.ಬಿ. ತೋಟಗೇರ ಸ್ವಾಗತಿಸಿದರು. ವಿ.ಎಂ, ಕುಂದ್ರಾಳ ಹಿರೇಮಠ ನಿರೂಪಿಸಿದರು. ಉಮಾಪತಿ ಭೂಸನೂರಮಠ ವಂದಿಸಿದರು.

## ಭಾಗ್ಯಲಕ್ಷ್ಮೀ ಯೋಜನೆ: ಅರ್ಜಿ ಆಹ್ವಾನ

**ಧಾರವಾಡ:** ಧಾರವಾಡ ಶಹರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಗೆ ಒಳಪಡುವ ಭಾಗ್ಯಲಕ್ಷ್ಮೀ ಯೋಜನೆಯ ಫಲಾನುಭವಿಗಳು ಭಾಗ್ಯಲಕ್ಷ್ಮೀ ಯೋಜನೆಯಡಿ ಪರಿಪಕ್ವ ಮೊತ್ತ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಧಾರವಾಡ ತಾಲ್ಲೂಕಿನಲ್ಲಿ 2006-07 ನೇ ಸಾಲಿನಲ್ಲಿ ಜನಿಸಿ, 18 ವರ್ಷ ಪೂರ್ಣಗೊಂಡ ಭಾಗ್ಯಲಕ್ಷ್ಮೀ ಯೋಜನೆಯಡಿ ಪರಿಪಕ್ವ ಮೊತ್ತ ಪಡೆಯುವ ಫಲಾನುಭವಿಗಳು ಅರ್ಜಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 30, 2025 ರೊಳಗಾಗಿ ಹುಬ್ಬಳ್ಳಿ ಧಾರವಾಡ ಶಹರ ಯೋಜನಾ ವ್ಯಾಪ್ತಿಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಖುದ್ದಾಗಿ ಬಂದು ಮೂಲ ದಾಖಲಾತಿಗಳನ್ನು ಸಲ್ಲಿಸಬೇಕು.

ಅವಧಿ ಮುಗಿದ ಮೇಲೆ ಬಂದ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಅಳವಡಿಸಲು ಸಾಧ್ಯವಾಗದ ಕಾರಣ ಪರಿಗಣಿಸುವುದಿಲ್ಲ ಎಂದು ಹುಬ್ಬಳ್ಳಿ ಧಾರವಾಡ ಶಹರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

**ಕೊಪ್ಪಳ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಪ್ರಧಾನ ಮಂತ್ರಿ ಜನ ಜಾತಿ ಆದಿವಾಸಿ ನ್ಯಾಯ ಮಹಾಭಿಯಾನ(PM-JANMAN) ದರ್ತಿ ಅಭಾ-ಜನ ದುರ್ಗಮ ಗ್ರಾಮ ಉತ್ಕರ್ಷ ಅಭಿಯಾನ(DA-JGUA) ಯೋಜನೆ ವ್ಯಾಪ್ತಿಯ ಮತ್ತು ದುರ್ಗಮ ಹಾಗೂ ಸಂಪರ್ಕ ರಹಿತ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಸೇವೆಯನ್ನು ನೀಡುವ ಕಾರ್ಯಕ್ರಮದಡಿ ಗುತ್ತಿಗೆ ಆಧಾರದ ವಿವಿಧ ಹುದ್ದೆಗಳ ಅರ್ಹತಾ ಪಟ್ಟಿ, ತಿರಸ್ಕೃತ ಪಟ್ಟಿ ಹಾಗೂ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಈ ಬಗ್ಗೆ ಆಕ್ಷೇಪಣೆಗಳನ್ನು ಆಹ್ವಾನಿಸಿದೆ. ಪಟ್ಟಿಗಳನ್ನು ಕಚೇರಿಯ ಸೂಚನಾ ಫಲಕಕ್ಕೆ ಪ್ರಕಟಿಸಲಾಗಿದ್ದು, ಈ ಕುರಿತು ಆಕ್ಷೇಪಣೆಗಳಿದ್ದಲ್ಲಿ ಅಭ್ಯರ್ಥಿಗಳು ಅಕ್ಟೋಬರ್ 3 ರೊಳಗೆ(ರಜಾ ದಿನಗಳನ್ನು ಹೊರತು ಪಡಿಸಿ) ಲಿಖಿತವಾಗಿ ಕಚೇರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಟಿ.ಬಿ. ವಿಭಾಗದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾಗ್ಯಲಕ್ಷ್ಮೀ ಯೋಜನೆ: ಗಮನಕ್ಕೆ

**ಬೆಳಗಾವಿ:** 2006-07ನೇ ಸಾಲಿನಲ್ಲಿ ಜನಿಸಿದ ಭಾಗ್ಯಲಕ್ಷ್ಮೀ ಯೋಜನೆ ಫಲಾನುಭವಿಗಳಿಗೆ 18 ವರ್ಷ ಪೂರ್ಣಗೊಂಡಿದ್ದು, ಫಲಾನುಭವಿಗಳಿಗೆ ಪರಿಪಕ್ವ ಮೊತ್ತವನ್ನು ಪಡೆಯಲು 30 ಅಕ್ಟೋಬರ್ 2025 ಅಂತಿಮ ದಿನಾಂಕ ನಿಗಧಿಪಡಿಸಲಾಗಿದೆ.

ಅರ್ಹ ಫಲಾನುಭವಿಗಳು ಯೋಜನೆಗೆ ಸಂಬಂಧಿಸಿದ ಎಲ್ಲ ದಾಖಲಾತಿಗಳೊಂದಿಗೆ 31 ಅಕ್ಟೋಬರ್ 2025 ರ ಒಳಗಾಗಿ ಬೈಲಹೊಂಗಲ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಮಿನಿ ವಿಧಾನ ಸೌಧ 1ನೇ ಮಹಡಿ ಧಾರವಾಡ ರೋಡ್ ಬೈಲಹೊಂಗಲ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಬೈಲಹೊಂಗಲ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೇಬಿಸ್ ಅತ್ಯಂತ ಅಪಾಯಕಾರಿ ಮಾರಣಾಂತಿಕ ರೋಗ

**ಜಮಖಂಡಿ:** ರೇಬಿಸ್ ಅಂದರೆ ಸಾಮಾನ್ಯವಾಗಿ ಹುಚ್ಚು ನಾಯಿರೋಗ ಎಂದು ಕರೆಯಲ್ಪಡುವ ಒಂದು ಅತ್ಯಂತ ಅಪಾಯಕಾರಿ ಮಾರಣಾಂತಿಕ ರೋಗವಾಗಿದೆ. ರೋಗವು ವೈರಸ್ಸಿನಿಂದ ಉಂಟಾಗುತ್ತದೆ ಎಂದು ಮುಖ್ಯ ಪಶು ವೈದ್ಯಾಧಿಕಾರಿ ಡಾ. ಪ್ರಕಾಶ ಗೂಳಪ್ಪಗೋಳ ಹೇಳಿದರು.

ನಗರದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರ ಸಭಾಭವನದಲ್ಲಿ ರೆಡ್‌ಕ್ರಾಸ್ ಘಟಕ, ಎನ್.ಎಸ್.ಎಸ್. ಘಟಕ, ಐ.ಕ್ಯೂ.ಎ.ಸಿ ಹಾಗೂ ಪಶುವೈದ್ಯಕೀಯ ಆಸ್ಪತ್ರೆ ಜಮಖಂಡಿ ಸಹಯೋಗದಲ್ಲಿ ರೇಬೀಸ್ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸೋಂಕಿತ ನಾಯಿಗಳ ಕಡಿತದಿಂದ, ಅಂದರೆ ಅದರ ಜೊಲ್ಲುದಿಂದ, ಮನುಷ್ಯರಿಗೆ ಹರಡುತ್ತದೆ. ಕೇವಲ ನಾಯಿಗಳಿಂದ ಮಾತ್ರವಲ್ಲದೆ, ಬೆಕ್ಕು, ಕಾಡು ಪ್ರಾಣಿ, ಕೋತಿ ಮೊದಲಾದವುಗಳಿಂದಲೂ ಈ ವೈರಸ್ ಹಬ್ಬುವ ಸಾಧ್ಯತೆ ಇದೆ. ಸೋಂಕು



ಒಂದು ಬಾರಿ ತೀವ್ರವಾಗಿ ಕಾಣಿಸಿಕೊಂಡರೆ ಅದರ ಚಿಕಿತ್ಸೆ ಸಾಧ್ಯವಿಲ್ಲ. ಕಾರಣ ಇದನ್ನು ಮಾರಣಾಂತಿಕ ರೋಗ ಎಂದು ಕರೆಯುತ್ತಾರೆ. ಇಂದು ಭಾರತ ಸಹಿತ ವಿವಿಧ ದೇಶಗಳಲ್ಲಿ ರೇಬಿಸ್ ಬಗ್ಗೆ ಜಾಗೃತಿ ಮೂಡಿಸಲು ವಿಶೇಷ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಗ್ರಾಮ-ನಗರಗಳಲ್ಲಿ ಪಶುವೈದ್ಯರು, ಸ್ವಯಂಸೇವಾ ಸಂಘಟನೆಗಳು ಲಸಿಕೆ ಕಾರ್ಯಕ್ರಮದ ಜೊತೆಗೆ ಜಾಗೃತಿ ಶಿಬಿರಗಳನ್ನು ನಡೆಸುತ್ತಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯೆ ಡಾ. ಸುನಂದಾ ಶಿರೂರ ಮಾತನಾಡಿ, ರೇಬೀಸ್ ಎಂಬ ಕಾಯಿಲೆ ಕೇವಲ ಒಂದು ವೈದ್ಯಕೀಯ ವಿಷಯವಲ್ಲ, ಅದು ಜೀವಮರಣದ ಪ್ರಶ್ನೆಯಾಗಿದೆ. ಸಮಾಜದಲ್ಲಿ ಬಹಳಷ್ಟು ಜನರು ಈ ರೋಗದ ಬಗ್ಗೆ ಸರಿಯಾದ ಅರಿವು ಹೊಂದಿಲ್ಲ. ಯಾರಾದರೂ ಪ್ರಾಣಿಯೊಂದು ಕಡಿದಾಗ ಅದು ಕೇವಲ ಸಾಮಾನ್ಯ ಗಾಯವೆಂದು ಭಾವಿಸಿ ನಿರ್ಲಕ್ಷ್ಯ ಮಾಡಬಾರದು. ಆರೋಗ್ಯವೇ ನಮ್ಮ ಆಸ್ತಿ, ಅದನ್ನು ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿ. ನೀವು ವಿದ್ಯಾರ್ಥಿಗಳು ನಾಳೆಯ ಶಕ್ತಿ, ನಾಳೆಯ ಸಮಾಜವನ್ನು ಕಟ್ಟುವವರು. ನಿಮ್ಮ ಮನೆಯವರಲ್ಲಿ, ನಿಮ್ಮ ಸ್ನೇಹಿತರಲ್ಲಿ, ನಿಮ್ಮ ಗ್ರಾಮದ ಜನರಲ್ಲಿ ಈ ರೋಗದ ಬಗ್ಗೆ ಅರಿವು ಮೂಡಿಸುವ ಹೊಣೆಗಾರಿಕೆ ನಿಮ್ಮದಾಗಿದೆ ಎಂದರು.

ವೇದಿಕೆಯಲ್ಲಿ ಡಾ.ಎಮ್.ಎಮ್.ಮಂಟೂರ, ಎ.ಎಸ್.ಪೂಜಾರಿ, ಆರ್.ಎಸ್.ಜಾಧವ, ಆರ್.ಬಿ.ಶಿತೋಳೆ, ಪುಷ್ಪಾ ಹುಣಶ್ಯಾಳ, ಡಾ.ಬಿ.ಎನ್.ಜಾಧವ, ಉಮೇಶ ದೇಸಾಯಿ ಸಹಿತ ಹಲವರು ಇದ್ದರು.

# ದಿನದಿಂದ ದಿನಕ್ಕೆ ಹೆಚ್ಚಿದ ಬೀದಿ ನಾಯಿ, ದನಗಳ ಕಾಟ

**ವರದಿ ಮಲ್ಲಿಕಾರ್ಜುನ ತುಂಗಳ**

**ರಬಕವಿ-ಬನಹಟ್ಟಿ:** ನಗರದಲ್ಲಿ ಬಿಡಾಡಿ ದನಗಳು ಹಾಗೂ ಬೀದಿ ನಾಯಿಗಲ ಹಾವಳಿ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಜನರ ನಿದ್ರೆಗೆಡಿಸುವದರ ಜೊತೆಗೆ ಆತಂಕವನ್ನು ಹೆಚ್ಚಿಸಿದೆ.

ಒಂದೆಡೆ ಹಗಲಿನಲ್ಲಿ ದನಗಳು ವಾಹನ ಸಂಚಾರಕ್ಕೆ ತೊಂದರೆಯುಂಟು ಮಾಡಿದರೆ, ರಾತ್ರಿ ಸಂದರ್ಭದ ಬೀದಿ ನಾಯಿಗಳು ನಗರ ಪ್ರದೇಶದ ಜನರ ನಿದ್ರೆಯನ್ನು ಕಸಿಯುತ್ತಿದೆ.

ನಗರದ ಮುಖ್ಯ ರಸ್ತೆಗಳಲ್ಲಿ ಬಿಡಾಡಿ ದನಗಲ ಸಂಚಾರವು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ದೊಡ್ಡ ಸಮಸ್ಯೆ ತಂದೊಡ್ಡಿದೆ. ದನಗಳು ಬೆಳಗ್ಗಿನಿಂದ ಸಂಜೆವರೆಗೆ ಆಹಾರ ಅರಸುತ್ತ ಮುಖ್ಯ ರಸ್ತೆಗಳಲ್ಲಿ ಸಂಚರಿಸುತ್ತವೆ. ಇದರಿಂದ ಕೆಲವು ಸಂದರ್ಭ ದನಗಲ ಸಮೂಹ ಸಾಲಾಗಿ ಮುಖ್ಯ ರಸ್ತೆಯನ್ನು ದಾಟುವದರಿಂದ ಅಥವಾ ಕೆಲವು ದನಗಳು ರಸ್ತೆ ನಡುವೆ ನಿಂತುಕೊಳ್ಳುವದರಿಂದ ಹಾಗು ಅಲ್ಲೇ ಕುಂತು ವಿಶ್ರಾಂತಿಯಾಗುವದರಿಂದ ವಾಹನ ಸವಾರರಿಗೆ ಇವುಗಳನ್ನು ದಾಟಿ ಮುಂದೆ ಸಾಗುವದೇ ಸವಾಲಿನ ಸಂಗತಿಯಾಗಿದೆ.

ಕೆಲ ಸಂದರ್ಭ ಪರಸ್ಪರ ಗುದ್ದಿಗೊಂಡು ದನಗಳು ರಸ್ತೆಯಲ್ಲೆಲ್ಲ ಸಂಚರಿಸಿ ವಾಹನ, ಜನರ ಮೇಲೆ ಎರಗುವ ಸನ್ನಿವೇಶವೂ ಸೃಷ್ಟಿಯಾಗುತ್ತಿದೆ. 5 ರಿಂದ 10 ನಾಯಿಗಳ ಸಮೂಹ ಕಾಣಿಸುತ್ತವೆ. ರಾತ್ರಿಯಲ್ಲಂತೂ ನಾಯಿಗಳು ಬೊಗಳುವದರಿಂದ ಜನರು ನೆಮ್ಮದಿಯಿಂದ ನಿದ್ರೆಯೂ ಸವಾಲಾಗಿದೆ.



'ಈಗಾಗಲೇ ಕೆಲವು ನಾಯಿ, ಬಿಡಾಡಿ ದನಗಳನ್ನು ಹಿಡಿದು ಬೇರೆಡೆ ಸ್ಥಳಾಂತರಿಸಲಾಗಿದೆ. ಇನ್ನಷ್ಟು ಕಡೆಗಳಲ್ಲಿ ಇದ್ದು, ತಕ್ಷಣವೇ ಸಿಬ್ಬಂದಿಗಳನ್ನು ನೇಮಿಸಿ ಸಾರ್ವಜನಿಕರ ಅನುಕೂಲಕ್ಕಾಗಿ ಕಾರ್ಯ ನಡೆಸಲಾಗುವದು.'

**ರಮೇಶ ಜಾಧವ,**
**ಪೌರಾಯುಕ್ತ, ರಬಕವಿ-ಬನಹಟ್ಟಿ.**

'ಅವಳಿ ನಗರದ ಸಂತೆ ಸಮಯದಲ್ಲಂತೂ ನಾಯಿ, ಕತ್ತೆ ಹಾಗು ದನಗಳ ಗುಂಪು ಜನರ ನೆಮ್ಮದಿ ಕಸಿದುಕೊಳ್ಳಲು ಕಾರಣವಾಗಿದೆ. ತಕ್ಷಣವೇ ನಗರಸಭಾ ಸದಸ್ಯರು ಹಾಗು ಅಧಿಕಾರಿಗಳು ತಂಡವನ್ನು ರಚಿಸಿ ಸಾರ್ವಜನಿಕರ ಅನುಕೂಲಕ್ಕೆ ಮುತುವರ್ಜಿ ವಹಿಸಬೇಕು'.

**ಮಹಾಶಾಂತ ಶೆಟ್ಟಿ,**
**ಸಮಾಜ ಸೇವಕ, ಬನಹಟ್ಟಿ.**

**ಭಯದ ವಾತಾವರಣ:**

ಪಾದಚಾರಿ, ವಿದ್ಯಾರ್ಥಿ, ವಯೋವೃದ್ಧರು ಸಂಚರಿಸುವಾಗ ದನ ಹಾಗು ನಾಯಿಗಲ ಸಮೂಹ ಎದುರಾಗುತ್ತದೆ. ಇದರಿಂದ ಹೆದರಿ ಸಂಚರಿಸುವ ಸ್ಥಿತಿ ಸಾರ್ವಜನಿಕರದ್ದು.

# ಸರ್ಕಾರಿ ಹಣ ದುರುಪಯೋಗ

## ಅಪರಾಧಿಗೆ ದಂಡ ಸಹಿತ 7ವರ್ಷಗಳ ಜೈಲು ಶಿಕ್ಷೆ

**ಕೊಪ್ಪಳ:** ಸರ್ಕಾರಿ ಹಣವನ್ನು ದುರುಪಯೋಗ ಪಡಿಸಿಕೊಂಡ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಕೊಪ್ಪಳ ಭಾಗ್ಯನಗರ ಶಾಖೆಯ ಜೂನಿಯರ್ ಅಸಿಸ್ಟೆಂಟ್ ಅಧಿಕಾರಿ ಜಿ.ಮಂಜುನಾಥ ತಂದೆ ಗುಂಡಪ್ಪ ಎಂಬುವವರಿಗೆ ಕೊಪ್ಪಳ ಸಿಜೆಎಂ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರಾದ ಮಲ್ಕಾರಿ ರಾಮಪ್ಪ ಒಡೆಯರ್ ಅವರು ಅಪರಾಧಿಗೆ 7 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ.10 ಸಾವಿರಗಳ ದಂಡವನ್ನು ವಿಧಿಸಿ ಸೆ.27 ರಂದು ತೀರ್ಪು ಪ್ರಕಟಿಸಿದ್ದಾರೆ.

2002-03 ನೇ ಸಾಲಿನಲ್ಲಿ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಕೊಪ್ಪಳ ಭಾಗ್ಯನಗರ ಶಾಖೆಯಲ್ಲಿ ಜೂನಿಯರ್ ಅಸಿಸ್ಟೆಂಟ್ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಹಾಸನ ಜಿಲ್ಲೆಯ ಗೋರೂರಿನ ಜಿ.ಮಂಜುನಾಥ ತಂದೆ ಗುಂಡಪ್ಪ ಎಂಬುವವರು ತಮ್ಮ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ರೂ.2,66,100/- ಮೌಲ್ಯದ 20 ಬೇಲ್ಸ್‌ಗಳ ಪೈಕಿ 4 ಬೇಲ್ಸ್‌ಗಳನ್ನು ಮರಳಿ ಒಪ್ಪಿಸಿದ್ದು, ಉಳಿದ 16 ಬೇಲ್ಸ್‌ಗಳನ್ನು ಇತರರಿಗೆ ಮಾರಾಟ ಮಾಡಿ, ಅದರಿಂದ ರೂ.2,12,100/- ಗಳನ್ನು ಪಡೆದು ಅದನ್ನು ಸರ್ಕಾರಕ್ಕೆ ಭರಿಸದೇ ಸ್ವಂತಕ್ಕೆ ಬಳಕೆ ಮಾಡಿಕೊಂಡಿದ್ದರು. ಈ ಕುರಿತು ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 150/2005 ರಡಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ತನಿಖೆ ನಡೆಸಿದ ಆಗಿನ ತನಿಖಾಧಿಕಾರಿಯಾಗಿದ್ದ ಪಿಐ ಪಿ.ಶಿವಲಿಂಗ ರಾದ್ಯ ಅವರು ಆರೋಪಿಯ ವಿರುದ್ದ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದರು. ನ್ಯಾಯಾಲದ ವಿಚಾರಣೆಯಲ್ಲಿ ಆರೋಪಿಯ ವಿರುದ್ಧದ ಆರೋಪಗಳು ಸಾಬೀತಾದ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ನಂಬಿಕೆ ದ್ರೋಹ ಹಾಗೂ ವಂಚನೆ ಮಾಡಿದ ಅಪರಾಧಕ್ಕೆ ಭಾ.ದಂ.ಸಂ. ಕಲಂ 409 ಅಡಿಯಲ್ಲಿನ ಅಪರಾಧಕ್ಕೆ 7 ವರ್ಷಗಳ ಸಾದಾ ಕಾರಾಗೃಹ ಶಿಕ್ಷೆ ಮತ್ತು ರೂ.10,000/- ಗಳ ದಂಡವನ್ನು ವಿಧಿಸಿ ನ್ಯಾಯಾಧೀಶರು ತೀರ್ಪು ನೀಡಿದ್ದಾರೆ.

ಪ್ರಕರಣದಲ್ಲಿ ಸರ್ಕಾರದ ಪರವಾಗಿ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಾದ ವಸಂತ ಅವರು ವಾದ ಮಂಡಿಸಿದ್ದರು. ಕೊಪ್ಪಳ ನಗರ ಪೊಲೀಸ್ ಠಾಣೆಯ ಸಿಬ್ಬಂದಿ ಸಿ.ಎಚ್.ಸಿ 15 ಲತೀಫ್, ಸಿ.ಎಚ್.ಸಿ 183 ಸೂರ್ಯಕಾಂತ, ಪಿಸಿ 156 ಗವಿಸಿದ್ದಪ್ಪ ಹಾಗೂ ಪಿಸಿ 605 ಮಂಜುನಾಥ ಕಡಗತ್ತಿ ಅವರು ಸಮಯಕ್ಕೆ ಸರಿಯಾಗಿ ಸಾಕ್ಷಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದಾರೆ ಎಂದು ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಕಾರ್ಯಾಲಯದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಪ್ಪರಗಿ ಬ್ಯಾರೇಜ್: 82 ಸಾವಿರ ಕ್ಯುಸೆಕ್ ನೀರು ಒಳಹರಿವು

**ರಬಕವಿ-ಬನಹಟ್ಟಿ:** ಮಳೆರಾಯ ಕಡಿಮೆಯಾಗಿದ್ದರ ಕಾರಣ ಬಾಗಲಕೋಟೆ ಜಿಲ್ಲೆಯ ರಬಕವಿ-ಬನಹಟ್ಟಿ ಸಮೀಪದ ಹಿಪ್ಪರಗಿ ಬ್ಯಾರೇಜ್‌ನ ಎಲ್ಲ 22 ಗೇಟ್‌ಗಳನ್ನು ಬಂದ್ ಮಾಡಿ ಒಟ್ಟು 524.2 ರಷ್ಟು ನೀರು ಶೇಖರಣೆಯಾಗಿತ್ತು. ಕಳೆದೆರಡು ದಿನಗಳ ರಾಜ್ಯ ಹಾಗು ಮಹಾರಾಷ್ಟ್ರದಲ್ಲಿ ಸುರಿದ ಭಾರಿ ಮಳೆಯಿಂದಾಗಿ ರವಿವಾರ ಮತ್ತು ಸೋಮವಾರ 82 ಸಾವಿರ ಕ್ಯುಸೆಕ್‌ನಷ್ಟು ನೀರು ಹರಿವಿನ ಪ್ರಮಾಣವಿರುವ ಕಾರಣ ಬಂದಷ್ಟೇ ನೀರನ್ನು 10 ಗೇಟ್‌ಗಳ ಮೂಲಕ ಹೊರಕ್ಕೆ ಹಾಕಲಾಗುತ್ತಿದೆ.

ಬರುವ ಬೇಸಿಗೆ ದಿನಗಳಿಗಾಗಿ ಮುಂಜಾಗ್ರತಾ ಕ್ರಮವಾಗಿ ಮಳೆಗಾಲ ಮುಗಿಯುತ್ತಿದ್ದಂತೆ ಹಿಪ್ಪರಗಿ ಬ್ಯಾರೇಜ್‌ನ ಎಲ್ಲ ಗೇಟ್‌ಗಳನ್ನು ಮುಚ್ಚುವದು ಸಾಮಾನ್ಯ. ನಿರ್ದಿಷ್ಠ ಪ್ರಮಾಣದಲ್ಲಿ ನೀರನ್ನು ಹಿಡಿದುಕೊಟ್ಟುಕೊಂಡು ಹೆಚ್ಚುವರಿ ನೀರನ್ನು ಆಗಾಗ್ಗೆ ಹೊರಹಾಕುವಲ್ಲಿ ಅಧಿಕಾರಿಗಳ ತಂಡ ನಿಯಂತ್ರಣದಲ್ಲಿತ್ತು. ಇದೀಗ ಒಮ್ಮೆಲೆ 10 ಗೇಟ್‌ಗಳ ಮೂಲಕ ಭಾರಿ ಪ್ರಮಾಣದ ನೀರನ್ನು ಹೊರ ಹಾಕಲಾಗುತ್ತಿದೆ.

ಈಗಷ್ಟೇ ಮಹಾರಾಷ್ಟ್ರದಲ್ಲಿ ಮಳೆರಾಯನ ಅಬ್ಬರ ಕಡಿಮೆಯಾಗಿರುವ ಕಾರಣ, ಇನ್ನಷ್ಟು ಕಾಯ್ದು ಗೇಟ್‌ಗಳನ್ನು ಬಂದ್ ಮಾಡುವ ವಿಚಾರ ಅಧಿಕಾರಿಗಳದ್ದಾಗಿದೆ.

# ನಿಧಾನ ಗತಿಯಲ್ಲಿ ಸಾಗಿದ ಬಾಗಲಕೋಟೆ-ಕುಡಚಿ ರೈಲ್ವೆ ಯೋಜನೆ




**ಜಮಖಂಡಿ:** ಶತಮಾನದ ಹಿಂದಿನಿಂದಲೂ ಜನತೆಯ ಬಹುದಿನದ ಕನಸಾಗಿರುವ ಬಾಗಲಕೋಟೆ-ಕುಡಚಿ ರೈಲ್ವೆ ಯೋಜನೆ 2017 ರಲ್ಲೇ ಪೂರ್ಣಗೊಳ್ಳಬೇಕಿತ್ತು. ಆದರೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ನಿರ್ಲಕ್ಷತೆಯಿಂದಾಗಿ ಈ ಯೋಜನೆ ಇನ್ನೂ ಪೂರ್ಣವಾಗಿಲ್ಲ ಎಂದು ರೈಲ್ವೆ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಕುತಬುದ್ದಿನ ಖಾಜಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ರಮಾ ನಿವಾಸದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಾಗಲಕೋಟೆಯಿಂದ ಲೋಕಾಪೂರದವರೆಗೆ ಕಾಮಗಾರಿ ಪೂರ್ಣಗೊಂಡಿದೆ. ಆದರೆ ಲೋಕಾಪೂರ-ಯಾದವಾಡ-ಮುಧೋಳ ಮಾರ್ಗದಲ್ಲಿ ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿದೆ. ಮುಧೋಳ-ಜಮಖಂಡಿ ಭಾಗದಲ್ಲಿ ಕಾಮಗಾರಿ ಇನ್ನೂ ಪ್ರಾರಂಭವಾಗಿಲ್ಲ. ಭೂಸ್ವಾಧೀನದ ಸಮಸ್ಯೆ ಬಾಕಿಯಿದ್ದು, 10-15 ಎಕರೆ ಪ್ರದೇಶದ ರೈತರಿಗೆ ಪರಿಹಾರ ನೀಡಬೇಕು, ಜಮಖಂಡಿ-ಕುಡಚಿ ಮಾರ್ಗದ ಸ್ವಚ್ಛತೆಗಾಗಿ 6.5 ಕೋಟಿ ರೂಪಾಯಿಯ ಟೆಂಡರ್ ಪ್ರಕಟಿಸಲಾಗಿದೆ. 74 ಎಕರೆ ಭೂಮಿಯ ರೈತರು ಹೊಸ ಭೂಸ್ವಾಧೀನ ಕಾಯ್ದೆಯಡಿ ಪರಿಹಾರಕ್ಕಾಗಿ ಹೈಕೋರ್ಟ್ ಮೊರೆ ಹೋಗಿದ್ದಾರೆ. ಸರ್ಕಾರ ಪರಿಹಾರ ನೀಡಲು ಒಪ್ಪಿಗೆ ನೀಡಿದರೂ, ನ್ಯಾಯಾಲಯದ ನಿರ್ಧಾರ ಬಾಕಿಯಿದೆ ಎಂದು ಖಾಜಿ ವಿವರಿಸಿದರು. ಸುದ್ದಿಗೋಷ್ಠಿಯಲ್ಲಿ ರೈಲ್ವೆ ಹೋರಾಟಗಾರರು ಸುಭಾಸ ಶಿರಬೂರ, ಡಾ. ರವಿ ಜಮಖಂಡಿ, ಕಾಡಪ್ಪಾ ಹೊಸಮನಿ, ಮೈನೂದ್ದಿನ ಖಾಜಿ ಭಾಗವಹಿಸಿದ್ದರು.

### ಉಗ್ರ ಹೋರಾಟದ ಎಚ್ಚರಿಕೆ

"ಇನ್ನು ಮುಂದೆ ಜನಪ್ರತಿನಿಧಿಗಳು ತಕ್ಷಣ ಕ್ರಮ ಕೈಗೊಳ್ಳದಿದ್ದರೆ, ತೀವ್ರ ಹೋರಾಟ ನಡೆಸಬೇಕಾಗುತ್ತದೆ," ಎಂದು ಖಾಜಿ ಎಚ್ಚರಿಸಿ . ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕೆಂದು ಸ್ಥಳೀಯ ಜನಪ್ರತಿನಿಧಿಗಳಿಗೆ ಮನವಿ ಮಾಡಿದರು

## 3 ವರ್ಷಗಳ ಸಡಿಲಿಕೆ

**ಕಾರವಾರ:** ರಾಜ್ಯದಲ್ಲಿ ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ, ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ, ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 3 ವರ್ಷಗಳ ಸಡಿಲಿಕೆ ನೀಡಿ ಸರ್ಕಾರ ಆದೇಶಿಸಿದೆ.

# ಯಲ್ಲಟ್ಟಿ ಪಿಕೆಪಿಎಸ್‌ಗೆ 15.35 ಲಕ್ಷ ಲಾಭ

**ರಬಕವಿ-ಬನಹಟ್ಟಿ:** ರೈತರ ಸಹಕಾರದೊಂದಿಗೆ ಬೆಳೆಯುತ್ತಿರುವ ಯಲ್ಲಟ್ಟಿ ಪಿಕೆಪಿಎಸ್ ಸೊಸೈಟಿಯು ಪ್ರಸಕ್ತ ವರ್ಷ 15.35 ಲಕ್ಷ ರೂ.ಗಳಷ್ಟು ಲಾಭದೊಂದಿಗೆ ಮುನ್ನಡೆಯುತ್ತಿರುವದು ಹೆಮ್ಮೆಯಾಗಿದೆಯೆಂದು ಸಂಘದ ಅಧ್ಯಕ್ಷ ಬಸಪ್ಪ ಶೇಗುಣಸಿ ತಿಳಿಸಿದರು.

ಯಲ್ಲಟ್ಟಿಯ ಸಂಘದ ಆವರಣದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಿರಂತರ ರೈತರ ಏಳ್ಗೆಗೆ ಶ್ರಮಿಸುವ ಮೂಲಕ ಬೆಳೆ ಸಾಲ ಹಾಗು ಕೃಷಿಯೇತರ ಸಾಲ ಒದಗಿಸುವ ನಿಟ್ಟಿನಲ್ಲಿ ಗ್ರಾಮದ ಏಳ್ಗೆಗೆ ಶ್ರಮಿಸುವಲ್ಲಿ ಸಂಘದ ಪಾತ್ರ ಹಿರಿದಾಗಿದೆಯೆಂದರು.

14.2 ಕೋಟಿ ರೂ.ಗಳಷ್ಟು ದುಡಿಯುವ ಬಂಡವಾಳ ಹೊಂದಿರುವ ಸಂಘದಿಂದ ಪ್ರತಿ ರೈತರಿಗೂ ಶೂನ್ಯ ಬಡ್ಡಿ ದರದಲ್ಲಿ ಸಾಲ ಒದಗಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಕಾರ್ಯ ಮಾಡಿದೆಯೆಂದರು.

ವೇದಿಕೆ ಮೇಲೆ ಈರಯ್ಯ ಮಠಪತಿ, ಬಸಪ್ಪ ಝುಳಕಿ, ಭೂಪೇಶ ಡೋರ್ಲೆ, ಲಕ್ಷ್ಮಣ ಹನಗಂಡಿ, ಸಂಘದ ಉಪಾಧ್ಯಕ್ಷ ಸದಾಶಿವ ಮಾಂಗ, ನಿರ್ದೇಶಕರಾದ ಗುರುಪಾದ ಕಿತ್ತೂರ, ಮಲ್ಲಪ್ಪ ಹುಣಸಿಕಟ್ಟಿ, ಪರಪ್ಪ ಗಲಗಲಿ, ಗುರುಪಾದ ಮೋಪಗಾರ, ಬಸವರಾಜ ಪಾಟೀಲ, ಕರೆಪ್ಪ ಅಮ್ಮಜವ್ವಗೋಳ, ಗಿರಮಲ್ಲ ಹಳಮನಿ, ಶ್ರೀಮತಿ ಬಾಗವ್ವ ಮಠಪತಿ, ಶ್ರೀಮತಿ ಶಾರದಾ ಶಿ. ಮಗದುಮ್, ಸದಾಶಿವ ಘಾಟನವರ, ಕ್ಷೇತ್ರ ಸಿಬ್ಬಂದಿ ಮಹೇಶ ಪಾಟೀಲ, ಮುಖ್ಯ ಕಾರ್ಯನಿರ್ವಾಹಕ ಮಲ್ಲಿಕಾರ್ಜುನ ಸಂತಿ ಸೇರಿದಂತೆ ಅನೇಕರಿದ್ದರು.




# ನವರಾತ್ರಿ ದಾಂಡಿಯಾ ನೃತ್ಯ ಸ್ಪರ್ಧೆ




**ದಾಂಡಿಯಾ ನೃತ್ಯ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಸ್ಯಾನಿಡೋ ತಂಡ ಪ್ರಶಸ್ತಿ ಸ್ವಿಕರಿಸುತ್ತಿರುವದು.**

**ಗೋಕಾಕ:** ನವರಾತ್ರಿ ಹಬ್ಬದ ನಿಮಿತ್ಯ ಇಲ್ಲಿಯ ಲಯನ್ಸ್ ಸಂಸ್ಥೆಯಿಂದ ದಾಂಡಿಯಾ ನೃತ್ಯ ಸ್ಪರ್ಧೆಯನ್ನು ರವಿವಾರದಂದು ನಗರದ ಸ್ಪೈಸ್ ಗಾರ್ಡನನಲ್ಲಿ ಆಯೋಜಿಸಲಾಗಿತ್ತು.

ಈ ಸ್ಪರ್ಧೆಯಲ್ಲಿ ಸ್ಯಾನಿಡೋ ತಂಡ ಪ್ರಥಮ, ಐಎಮ್‌ಎ ತಂಡ ದ್ವಿತೀಯ, ಗೊಲ್ಲರ ತಂಡ ತೃತೀಯ ಸ್ಥಾನ ಪಡೆದವು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಜಿ ಎಸ್ ಸಿದ್ಧಾಪೂರಮಠ, ಡಾ.ಎಸ್ ಎಸ್ ತೆರದಾಳ, ಅಶೋಕ ದೆಯನ್ನವರ, ಅಶೋಕ ಪಾಟೀಲ, ಆಶಾಲತಾ ತೆರದಾಳ, ಶೋಭಾ ರಾಠೋಡ, ಮಹೇಂದ್ರ ಪೋರವಾಲ, ಪ್ರಶಾಂತ ಅಂಕದವರ, ನರೇಂದ್ರ ಪರಮಾರ, ಪ್ರೇಮಚಂದ ರಾಠೋಡ, ಡಾ. ಆರ್ ಬಿ ಪಡಗುಂದಿ, ಎಚ್ ಬಿ ಪಾಟೀಲ, ಸುರೇಶ ಶಿಂಧಿಹಟ್ಟಿ, ಎಸ್ ಜಿ ದೊಡಮನಿ, ವಿಜಯಕುಮಾರ ಭಾಫನಾ, ಪುರುಷೋತ್ತಮ ಭಾಫನಾ ಸೇರಿದಂತೆ ಅನೇಕರು ಇದ್ದರು.

# ಭತ್ತ ಖರೀದಿಗೆ ನೊಂದಣಿ ಕೇಂದ್ರ ತೆರೆಯಲು ಸೂಚನೆ

**ಕಾರವಾರ:** ಪ್ರಸಕ್ತ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜಿಲ್ಲೆಯ ರೈತರಿಂದ ಭತ್ತವನ್ನು ಖರೀದಿಸಲು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ರೈತರನ್ನು ನೊಂದಣಿ ಮಾಡಲು ನೊಂದಣಿ ಕೇಂದ್ರಗಳನ್ನು ತೆರೆಯುವಂತೆ ಆಹಾರ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಬೆಂಬಲ ಬೆಲೆಯಲ್ಲಿ ಭತ್ತ ಖರೀದಿಸುವ ಬಗ್ಗೆ ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರ್ಕಾರವು ಪ್ರಸಕ್ತ ಸಾಲಿಗೆ ಬೆಂಬಲ ಬೆಲೆ ಯೋಜನೆಯಡಿ ಸಾಮಾನ್ಯ ಭತ್ತ ಪ್ರತೀ ಕ್ವಿಂಟಾಲ್ ಗೆ 2369 ಮತ್ತು ಗ್ರೇಢ್ ಎ ಭತ್ತಕ್ಕೆ 2389 ರೂ ಗಳನ್ನು ನಿಗಧಿಪಡಿಸಿದ್ದು, ಜಿಲ್ಲೆಯ ರೈತರಿಂದ ಹೆಚ್ಚಿನ ಪ್ರಮಾಣದಲ್ಲಿ ಭತ್ತವನ್ನು ಖರೀದಿಸಲು ಅನುಕೂಲವಾಗುವಂತೆ ಎಲ್ಲಾ ತಾಲೂಕುಗಳಲ್ಲಿ ನೊಂದಣಿ



ಕೇಂದ್ರಗಳನ್ನು ತೆರೆಯುವಂತೆ ತಿಳಿಸಿದರು.

ಟಿಎಪಿಸಿಎಂಎಸ್ ಕೇಂದ್ರಗಳ ಮುಖಾಂತರ ಭತ್ತ ಖರೀದಿಸಲು ಅನುಕೂಲವಾಗುವಂತೆ ನೊಂದಣಿ ಕೇಂದ್ರಗಳನ್ನು ತೆರೆಯಬೇಕು, ಖರೀದಿ ಕೇಂದ್ರಗಳು ಸೂಕ್ತ ಗೋದಾಮು ಮತ್ತು ಅಗತ್ಯ ಮೂಲ ಸೌಕರ್ಯಗಳನ್ನು ಹೊಂದಿರುವ ಬಗ್ಗೆ ಪರಿಶೀಲನೆ ನಡೆಸಬೇಕು. ಎಫ್ಎಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಪ್ರತೀ ಕೇಂದ್ರದಲ್ಲಿ ಗುಣಮಟ್ಟ ಪರೀಕ್ಷಕರನ್ನು ನೇಮಿಸಬೇಕು ಮತ್ತು ಖರೀದಿ ಅಧಿಕಾರಿಗಳನ್ನು ನೇಮಿಸಬೇಕು ಎಂದರು.

ರೈತರಿಂದ ಪ್ರತೀ ಎಕರೆಗೆ 25 ಕ್ವಿಂಟಾಲ್ ನಂತೆ ಗರಿಷ್ಠ 50 ಕ್ವಿಂಟಾಲ್ ಭತ್ತವನ್ನು ಖರೀದಿಸಬಹುದಾಗಿದ್ದು, ರೈತರಿಂದ ಖರೀದಿಸಿದ ಭತ್ತದ ಹಣವನ್ನು ಡಿಬಿಟಿ ಮೂಲಕ ನೇರವಾಗಿ ರೈತರ ಬ್ಯಾಂಕ್ ಖಾತೆಗಳಿಗೆ ಪಾವತಿಸಲಾಗುವುದು ಎಂದ ಅವರು, ಖರೀದಿ ಕೇಂದ್ರಗಳಲ್ಲಿ ಸಂಗ್ರಹವಾದ ಭತ್ತವನ್ನು ಹಲ್ಲಿಂಗ್ ಮಾಡಲು ಗಿರಣಿ ಮಾಲೀಕರನ್ನು ಗುರುತಿಸಬೇಕು ಎಂದರು.

ಕೃಷಿ ಇಲಾಖೆಯ ಮಾಹಿತಿಯಂತೆ ಜಿಲ್ಲೆಯಲ್ಲಿ 40626.30 ಹೆಕ್ಟೇರ್ ಪ್ರದೇಶದಲ್ಲಿ ಭತ್ತವನ್ನು ಬೆಳೆಯಲಾಗಿದ್ದು, ಅಂದಾಜು 10,95058 ಕ್ವಿಂಟಾಲ್ ಭತ್ತದ ಇಳುವರಿಯ ನಿರೀಕ್ಷೆಯಿದ್ದು ಇದಕ್ಕೆ ಅನುಗುಣವಾಗಿ ನೊಂದಣಿ ಕೇಂದ್ರ ಮತ್ತು ಖರೀದಿ ಕೇಂದ್ರಗಳನ್ನು ತೆರೆಯಲು ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವ ಪ್ರಸಾದ್ ಗಾಂವಕರ್, ಆಹಾರ ಇಲಾಖೆ ಉಪ ನಿರ್ದೇಶಕ ಮಂಜುನಾಥ್ ರೇವಣ್ಕರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತಿತರರು ಹಾಜರಿದ್ದರು.

# ಪೌರ ಕಾರ್ಮಿಕರಿಗೆ ಸೌಲಭ್ಯ ಒದಗಿಸಿ

**ಕಾರವಾರ:** ಜಿಲ್ಲೆಯಲ್ಲಿ ನಗರಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಇಲಾಖೆಯಿಂದ ದೊರೆಯುವ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಸಫಾಯಿ ಕರ್ಮಚಾರಿಗಳ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಎಲ್ಲಾ ಪೌರ ಕರ್ಮಚಾರಿಗಳಿಗೆ ನಿಗಧಿತ ಸಮಯಕ್ಕೆ ಸರಿಯಾಗಿ ಕಾರ್ಮಿಕ ಇಲಾಖೆಯಿಂದ ನಿಗಧಿಪಡಿಸಿರುವ ವೇತನವನ್ನು ನೀಡಬೇಕು, ಇ.ಎಸ್.ಐ ಮತ್ತು ಪಿ.ಎಫ್ ನಿಗಧಿತಾಗಿ ಕಡಿತ ಮಾಡಿರುವ ಬಗ್ಗೆ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಪರಿಶೀಲಿಸಬೇಕು, ಕೆಲಸದ ಅವಧಿಯಲ್ಲಿ ಸೂಕ್ತ ಸುರಕ್ಷತಾ ಉಪಕರಣಗಳನ್ನು ನೀಡುವುದರ ಜೊತೆಗೆ ಅವುಗಳನ್ನು ಬಳಸುವ ಬಗ್ಗೆ ತಿಳಿಸಬೇಕು.

ಕೆಲಸದ ನಂತರ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕ ವಿಶ್ರಾಂತಿ ಕೊಠಡಿಯ ಸೌಲಭ್ಯ ಒದಗಿಸಬೇಕು. ನಿಯಮಿತವಾಗಿ ಅವರ ಆರೋಗ್ಯ ತಪಾಸಣೆ ಮತ್ತು



ಮಾಸ್ಟರ್ ಹೆಲ್ತ್ ಚೆಕಪ್‌ಗಳನ್ನು ಮಾಡಿಸಬೇಕು ಎಂದರು. ಜಿಲ್ಲೆಯ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಪದ್ದತಿ ಕಂಡು ಬಾರದಂತೆ ಎಚ್ಚರವಹಿಸಬೇಕು. ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಸಕ್ಕಿಂಗ್ ಯಂತ್ರಗಳ ಮೂಲಕವೇ ಶೌಚಗುಂಡಿಗಳ ಸ್ವಚ್ಚತೆ ಮಾಡಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಉಮೇಶ್, ಜಿಲ್ಲೆಯ ಎಲ್ಲಾ ನಗರಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಮತ್ತು ಜಾಗೃತ ಸಮಿತಿಯ ಸದಸ್ಯರು ಇದ್ದರು.



# ಸಬ್‌ಜೈಲ್, ಗುಲಗಂಜಿಕೊಪ್ಪ ಸಮೀಕ್ಷೆ ಕಾರ್ಯ ಆಯೋಜನೆ

**ಧಾರವಾಡ:** ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಪ್ರಗತಿಯಲ್ಲಿದ್ದು, ಸಬ್‌ಜೈಲ್ ಸುತ್ತಲಿನ ಪ್ರದೇಶಗಳಲ್ಲಿ ಸಮೀಕ್ಷೆಗೆ ತಾಂತ್ರಿಕ ಅಡಚಣೆ ಆಗುತ್ತಿದೆ. ಸಬ್‌ಜೈಲ್‌ದಲ್ಲಿ ಜಾಮರ್ ಅಳವಡಿಸಿರುವುದರಿಂದ ಸಮೀಕ್ಷೆದಾರರಿಗೆ ನೆಟವರ್ಕ್ ಸಮಸ್ಯೆಯಾಗಿ ಗುಲಗಂಜಿಕೊಪ್ಪ ಸಬ್‌ಜೈಲ್ ಹತ್ತಿರದ ಪ್ರದೇಶಗಳಲ್ಲಿ ಮನೆಮನೆ ಸಮೀಕ್ಷೆಗೆ ತೊಂದರೆ ಆಗಿದೆ.

ಈ ಹಿನ್ನೆಲೆಯಲ್ಲಿ ಸೋಮವಾರ ಮಧ್ಯಾಹ್ನ ಜಿಲ್ಲಾ ಪಂಚಾಯತ್ ಸಿಇಒ ಭುವನೇಶ ಪಾಟೀಲ ನೇತೃತ್ವದಲ್ಲಿ ಹಿರಿಯ ಅಧಿಕಾರಿಗಳ ತಂಡ ಸಬ್‌ಜೈಲ್ ಪ್ರದೇಶಕ್ಕೆ ಭೇಟಿ ಪರಿಶೀಲಿಸಿತು.

ನೆಟವರ್ಕ ಸಮಸ್ಯೆ ಇರುವ ಪ್ರದೇಶಗಳ ಕುಟುಂಬಗಳಿಗೆ ಕುಮಾರೇಶ್ವರ ನಗರ ಹಾಗೂ ಕಮಲಾಪುರ ಭಾಗದಲ್ಲಿ ಕೇಂದ್ರ ಗುರುತಿಸಿ, ಅಭಿಯಾನದ ರೀತಿಯಲ್ಲಿ ಸಮೀಕ್ಷೆ ಮಾಡಲು ಕ್ರಮ ವಹಿಸುವಂತೆ ಸಿಇಒ ಭುವನೇಶ ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಪ್ರೋಬೆಷನರಿ ಐಎಎಸ್ ಅಧಿಕಾರಿ ರಿತೀಕಾ ವರ್ಮಾ, ಹಿಂದುಳಿದ ವರ್ಗಗಳ ಜಿಲ್ಲಾ ಅಧಿಕಾರಿ ಬಾನುಮತಿ ಎಚ್., ತಹಶೀಲ್ದಾರ್ ಡಾ. ಡಿ.ಎಚ್. ಹೂಗಾರ, ತಾಲೂಕು ಪಂಚಾಯತ ಇಓ ಗಂಗಾಧರ ಕಂದಕೂರ, ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಸಿಂದಗಿ, ರಾಮಕೃಷ್ಣ ಸದಲಗಿ, ಮಹಾನಗರ ಪಾಲಿಕೆ ವಲಯ 12 ರ ಸಹಾಯಕ ಆಯುಕ್ತ ಶಂಕರ ಪಾಟೀಲ ಸೇರಿದಂತೆ ಇತರರು ಇದ್ದರು.

### ವಿಶ್ವ ರೇಬಿಸ್ ದಿನಾಚರಣೆ: ಪ್ರಚಾರದ ಕರಪತ್ರ ಬಿಡುಗಡೆ

# ರೇಬಿಸ್ ಲಸಿಕಾ ಅಭಿಯಾನಕ್ಕೆ ಚಾಲನೆ

**ಬಾಗಲಕೋಟೆ:** ವಿಶ್ವ ರೇಬಿಸ್ ದಿನಾಚರಣೆ ಅಂಗವಾಗಿ ನಗರದ ಜಿಲ್ಲಾ ಪಶು ಆಸ್ಪತ್ರೆಯಲ್ಲಿ ಹುಚ್ಚು ನಾಯಿ ರೋಗ ವಿರುದ್ದ ಹಮ್ಮಿಕೊಂಡ ಲಸಿಕಾ ಅಭಿಯಾನಕ್ಕೆ ಜಿಲ್ಲಾಧಿಕಾರಿ ಸಂಗಪ್ಪ ಹಾಗೂ ಜಿ.ಪಂ ಸಿಇಓ ಶಶಿಧರ ಕುರೇರ ಸೋಮವಾರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡ ರೇಬಿಸ್ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ ಅವರು ರೇಬಿಸ್ ರೋಗವು ಮಾರಣಾಂತಿಕ ರೋಗವಾಗಿದ್ದು ಹುಚ್ಚು ಪ್ರಾಣಿಗಳ ಕಡಿತದಿಂದ ಲಿಸ್ಸಾ ಎಂಬ ವೈರಾಣುವಿನಿಂದ ಹರಡುವ ಮಾರಣಾಂತಿಕ ರೋಗವಾಗಿದ್ದು ಒಮ್ಮೆ ರೋಗ ಬಂದರೆ ಸಾವು ಖಚಿತ, ಆದ್ದರಿಂದ ರೋಗ ತಡೆಗಟ್ಟುವುದು ಮೂಲ ಉದ್ದೇಶ ಆದ್ದರಿಂದ ಎಲ್ಲ ಸಾಕು ನಾಯಿಗಳಿಗೆ ರೇಬಿಸ ವಿರುದ್ದ ಲಸಿಕೆ ಹಾಕಬೇಕೆಂದು ಹಾಗೂ ಸಾರ್ವಜನಿಕರಲ್ಲಿ ರೋಗದ ಕುರಿತು ಜಾಗ್ರತೆ ಮೂಡಿಸಲು ಕರೆ ನೀಡಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಸಾಕು ನಾಯಿ ಮಾಲಿಕರು ನಾಯಿ ಮತ್ತು ಬೆಕ್ಕು ಮರಿಗಳಿಗೆ ಮುಂಜಾಗ್ರತೆಗಾಗಿ 3 ತಿಂಗಳೊಳಗಾಗಿ



ಪ್ರಥಮ ಲಸಿಕೆ, ಒಂದು ತಿಂಗಳ ನಂತರ ಬೂಸ್ಟರ್ ಲಸಿಕೆ ಹಾಕಿಸಿ ಪ್ರತಿ ವರ್ಷ ನಿಗದಿತ ದಿನದಂದು ತಪ್ಪದೇ ರೇಬಿಸ್ ಲಸಿಕೆಯನ್ನು ಹಾಕಿಸಬೇಕು. ಈ ಬಗ್ಗೆ ದೃಡೀಕರಣ ಪುಸ್ತಕ ನಿರ್ವಹಣೆಯಾಗಬೇಕು. ಯಾವುದೇ ಮಾಟ, ಮಂತ್ರ ಮತ್ತು ಮೂಡನಂಬಿಕೆಗಳಿಗೆ ಮಾರು ಹೋಗಬಾರದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಲಸಿಕಾ ಅಭಿಯಾನದ ಪ್ರಚಾರದ ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಪಶು ಇಲಾಖೆಯ ಉಪನಿರ್ದೇಶಕ ಎಸ್.ಎಚ್.ಕರಡಿಗುಡ್ಡ, ಪಶು ಜಿಲ್ಲಾ ಆಸ್ಪತ್ರೆಯ ಉಪನಿರ್ದೇಶಕ ಶಿವಕುಮಾರ ಹೊಳೆಪ್ಪಗೋಳ, ಮುಖ್ಯ ಪಶು ವೈದ್ಯಾಧಿಕಾರಿ ಡಾ.ಆರ್.ಎಸ್.ಪದರಾ, ವೈದ್ಯಾಧಿಕಾರಿಗಳಾದ ಡಾ.ಪ್ರಶಾಂತ ಸವದಿ, ಡಾ.ಪಚ್ಚಪ್ಪನ್ನವರ, ಡಾ.ಎಸ್.ಎಚ್.ಗುಡದಿನ್ನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಲಸಿಕಾ ಅಭಿಯಾನದಲ್ಲಿ 60 ನಾಯಿಗಳಿಗೆ ಹುಚ್ಚು ನಾಯಿ ರೋಗ ನಿರೋಧಕ ಲಸಿಕೆಯನ್ನು ಹಾಕಲಾಯಿತು. ಈ ಅಭಿಯಾನ ಅಕ್ಟೋಬರ 28 ವರೆಗೆ ನಡೆಯಲಿದ್ದು, ಜಿಲ್ಲೆಯ ಎಲ್ಲ ಪಶು ವೈದ್ಯ ಸಂಸ್ಥೆಗಳಲ್ಲಿ ಲಸಿಕೆ ಹಾಕಲಾಗುತ್ತದೆ.

# ವಿಶ್ವ ಹೃದಯ ದಿನಾಚರಣೆ

**ವಿಜಯಪುರ:** ಎನ್‌ಸಿಪಿ–ಎನ್‌ಸಿಡಿ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ ಎನ್‌ಸಿಡಿ ಘಟಕ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ವಿಜಯಪುರ, ಡಾ.ಎಲ್‌ಎಚ್‌ಬಿದರಿ ಅವರ ಅಶ್ವಿನಿ ಹಾರ್ಟ್ ಫೌಂಡೇಶನ್ ಇವರ ಸಹಯೋಗದಲ್ಲಿ ಅಶ್ವಿನಿ ಇನ್ಸಿಟ್ಯೂಟ್ ಆಫ್ ನರ್ಸಿಂಗ್ ಸಾಯಿನ್ಸ್ ಕಾಲೇಜ್‌ನಲ್ಲಿ ಸೋಮವಾರ ವಿಶ್ವ ಹೃದಯ ದಿನಾಚರಣೆ ಅಂಗವಾಗಿ ಹೃದಯ ರೋಗದ ಕುರಿತು ಜಾಗೃತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಹೃದ್ರೋಗ ಬರಲು ಕಾರಣಗಳು, ಗುಣಲಕ್ಷಣಗಳು ಹಾಗೂ ಚಿಕಿತ್ಸಾ ವಿಧಾನಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಪ್ರಾತ್ಯಕ್ಷಿಕೆ ಮೂಲಕ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಅಪ್ಪಾಸಾಹೇಬ ಇನಾಮದಾರ, ಕಾರ್ಡಿಯಾಲಾಜಿಸ್ಟ್ ಡಾ.ಗೌತಮ ವಗ್ಗರ, ಡಾ.ಶಂಕರಗೌಡ ಪಾಟೀಲ, ನರ್ಸಿಂಗ್ ಕಾಲೇಜಿನ ಪ್ರಾಂಶುಪರಾದ ಡಾ.ರಜನಿದೇವಿ ಹಿರೇಮಠ, ಆರೋಗ್ಯ ಇಲಾಖೆಯ ಜಾನ್ ಕಟವಟಿ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಗಂಗಾಧರ ಕೋಳೂರ, ಡಾ.ಪ್ರಿಯದರ್ಶಿನಿ ಕೆಂಚರಡ್ಡಿ, ಡಾ. ಸುರೇಶ ಪಾಶ್ಚಾಪುರ, ಆರ್.ವಿ.ಹೊನವಾಡ ಸೇರಿದಂತೆ ಆರೋಗ್ಯ ಇಲಾಖೆ ವಿವಿಧ ಅಧಿಕಾರಿಗಳು, ಕಾಲೇಜಿನ ಬೋಧಕ ಸಿಬ್ಬಂದಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು. ಶ್ರೀಕಾಂತ ಪೂಜಾರಿ ಕಾರ್ಯಕ್ರಮ ನಿರೂಪಿಸಿದರು. ಎನ್.ಆರ್.ಬಾಗವಾನ್ ವಂದಿಸಿದರು.



# ವಿಶ್ವ ರೇಬಿಸ್ ದಿನಾಚರಣೆ ಜಾಗೃತಿ ಕಾರ್ಯಕ್ರಮ

**ವಿಜಯಪುರ:** ದೇಶದಲ್ಲಿ ಪ್ರತಿವರ್ಷ ದಿನದಿಂದ ದಿನಕ್ಕೆ ಹೆಚ್ಚು ಜನ ರೇಬಿಸ್ ಮಹಾಮಾರಿಗೆ ಬಲಿಯಾಗುತ್ತಿದ್ದು, ನಾಯಿ ಸೇರಿದಂತೆ ಯಾವುದೇ ಪ್ರಾಣಿ ಕಚ್ಚಿದಾಗ ನಿರ್ಲಕ್ಷಿಸದೇ ಲಸಿಕೆ ಹಾಕಿಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸಂಪತ್ ಗುಣಾರಿ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಸರ್ವೇಕ್ಷಣಾ ಘಟಕದಿಂದ ರಾಷ್ಟ್ರೀಯ ರೇಬಿಸ್ ನಿಯಂತ್ರಣ ಕಾರ್ಯಕ್ರಮದಡಿ ಅಶ್ವಿನಿ ಇನ್ಸಿಟ್ಯೂಟ್ ಆಫ್ ನರ್ಸಿಂಗ್ ಸಾಯಿನ್ಸ್ ಕಾಲೇಜ್‌ನಲ್ಲಿ ಸೋಮವಾರ ಏರ್ಪಡಿಸಿದ್ದ ವಿಶ್ವ ರೇಬಿಸ್ ದಿನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಜನವರಿಯಿಂದ ಈವರೆಗೆ ನಾಯಿ ಕಡಿತಕ್ಕೆ ತುತ್ತಾದ 23 ಸಾವಿರ ಜನರಿಗೆ ಚಿಕಿತ್ಸೆ ನೀಡಲಾಗಿದೆ. ಸಾರ್ವಜನಿಕರು ನಾಯಿ ಸೇರಿದಂತೆ ಯಾವುದೇ ಪ್ರಾಣಿ ಕಚ್ಚಿದ್ದಲ್ಲಿ ಲಸಿಕೆ ಪಡೆದುಕೊಳ್ಳಬೇಕು ಎಂದು ಅವರು ಹೇಳಿದರು.

ಡಾ. ಅಪ್ಪಾಸಾಹೇಬ ಇನಾಮದಾರ ಅವರು ಮಾತನಾಡಿ, ರೇಬಿಸ್ ಅನ್ನುವುದು




ಸಸ್ತನಿಗಳಲ್ಲಿ ವೈರಾಣುವಿನಿಂದ ಹರಡುವ ಕಾಯಿಲೆಯಾಗಿದೆ. ನೇರವಾಗಿ ನರಮಂಡಲದ ಮೇಲೆ ಬೀರಿ, ಮಿದುಳಿಗೆ ಘಾಸಿಯಾಗಿ ಸಾವು ಸಂಭವಿಸುತ್ತದೆ. ನಾಯಿ ಕಡಿತದ ಪರಿಣಾಮ ಕುರಿತು ಅರಿವು ಮೂಡಿಸುವುದು ಅತ್ಯವಶ್ಯಕವಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ.ಎಲ್.ಎಚ್. ಬಿದರಿ ವಹಿಸಿದ್ದರು. ಜಿಲ್ಲಾ ಆಸ್ಪತ್ರ ವೈದ್ಯರಾದ ಡಾ.ಅಚ್ಯುತ ಪತ್ತಾರ, ನರ್ಸಿಂಗ್ ಕಾಲೇಜಿನ ಪ್ರಾಂಶುಪರಾದ ಡಾ.ರಜನಿದೇವಿ ಹಿರೇಮಠ, ಡಾ.ಎಂ.ಬಿ.ಬಿರಾದಾರ, ಆರೋಗ್ಯ ಇಲಾಖೆಯ ಜಾನ್ ಕಟವಟಿ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಗಂಗಾಧರ ಕೋಳೂರ, ಡಾ.ಪ್ರಿಯದರ್ಶಿನಿ ಕೆಂಚರಡ್ಡಿ, ಡಾ. ಸುರೇಶ ಪಾಶ್ಚಾಪುರ, ಆರ್.ವಿ.ಹೊನವಾಡ ಸೇರಿದಂತೆ ಆರೋಗ್ಯ ಇಲಾಖೆ ವಿವಿಧ ಅಧಿಕಾರಿಗಳು, ಕಾಲೇಜಿನ ಬೋಧಕ ಸಿಬ್ಬಂದಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು. ಶ್ರೀಕಾಂತ ಪೂಜಾರಿ ಕಾರ್ಯಕ್ರಮ ನಿರೂಪಿಸಿದರು. ಎನ್. ಆರ್.ಬಾಗವಾನ್ ವಂದಿಸಿದರು.

# ದೌರ್ಜನ್ಯ ಪ್ರರಣಗಳ ಸಂತ್ರಸ್ತರಿಗೆ ತಕ್ಷಣ ಪರಿಹಾರ ನೀಡಿ

**ಕಾರವಾರ:** ಜಿಲ್ಲೆಯಲ್ಲಿ ದಾಖಲಾಗುವ ದೌರ್ಜನ್ಯ ಪ್ರಕರಣಗಳಲ್ಲಿನ ಸಂತ್ರಸ್ಥರಿಗೆ ಪರಿಹಾರ ವಿತರಣೆಯಲ್ಲಿ ಅನಾವಶ್ಯಕ ವಿಳಂಬವಾಗುವುದನ್ನು ತಪ್ಪಿಸಿ, ಆದಷ್ಟು ಶೀಘ್ರದಲ್ಲಿ ಪರಿಹಾರ ವಿತರಣೆಗೆ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಜಿಲ್ಲಾ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ 2022 ರಿಂದ ಇದುವರೆಗೆ ಒಟ್ಟು 168 ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು, ಅವುಗಳಲ್ಲಿ 4 ಪ್ರಕರಣಗಳು ಇತರೆ ಜಿಲ್ಲೆಗೆ ವರ್ಗಾವಣೆಯಾಗಿದ್ದು, ಎಫ್.ಐ.ಆರ್ ದಾಖಲಾಗಿರುವ 153 ಪ್ರಕರಣಗಳಲ್ಲಿ 117.01 ಲಕ್ಷ ರೂ ಪರಿಹಾರ ವಿತರಿಸಿದ್ದು, ಚಾರ್ಜ್ ಶೀಟ್ ಸಲ್ಲಿಕೆಯಾಗಿರುವ 108 ಪ್ರಕರಣಗಳಲ್ಲಿ 127.99 ಲಕ್ಷ ರೂ ಪರಿಹಾರ ವಿತರಿಸಿದ್ದು, ದೌರ್ಜನ್ಯ ಪ್ರಕರಣಗಳು ದಾಖಲಾದ ಕೂಡಲೇ ಸಂತ್ರಸ್ಥರಿಂದ ಸಂಬಂಧಪಟ್ಟ ಅಗತ್ಯ ದಾಖಲೆಗಳನ್ನು ಪಡೆದು ಆದಷ್ಟು ಶೀಘ್ರದಲ್ಲಿ



ಪರಿಹಾರ ವಿತರಣೆ ಮಾಡುವಂತೆ ಸೂಚಿಸಿದರು.

ಜಿಲ್ಲೆಯ ಎಲ್ಲಾ ಉಪವಿಭಾಗಗಳ ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಿಯಮಿತವಾಗಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಗಳನ್ನು ನಡೆಸುವ ಮೂಲಕ ಜಿಲ್ಲೆಯಲ್ಲಿನ ಅನುಸೂಚಿತ ಜಾತಿ ಮತ್ತು ಬುಡಕಟ್ಟುಗಳ ಜನತೆಯ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸಬೇಕು. ದೌರ್ಜನ್ಯ ಪ್ರಕರಣಗಳ ಕುರಿತಂತೆ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳು ಶೀಘ್ರವಾಗಿ ವಿಚಾರಣೆಯಾಗಿ ಸಂತ್ರಸ್ಥರಿಗೆ ಆದಷ್ಟು ತ್ವರಿತವಾಗಿ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದರು.

ಸಭೆಯಲ್ಲಿ ಉಪಸ್ಥಿತರಿದ್ದ ಜಾಗೃತ ಸಮಿತಿಯ ಸದಸ್ಯರುಗಳು ಮಾತನಾಡಿ, ಕುಮಟಾದಲ್ಲಿ ಪುರಸಭೆ ವ್ಯಾಪ್ತಿಯಲ್ಲಿ ಸ್ಮಶಾನ ಭೂಮಿ ನೀಡುವಂತೆ, ಸಮುದಾಯ ಭವನಗಳಲ್ಲಿ ನಿಗಧಿಪಡಿಸಿರುವ ದರವನ್ನು ಕಡಿಮೆಗೊಳಿಸುವ ಬಗ್ಗೆ, ಪ.ಜಾತಿ ಮತ್ತು ಪಂಗಡದವರ ಅಭಿವೃದ್ಧಿಗೆ ಮೀಸಲಿಟ್ಟಿರುವ ಅನುದಾನವನ್ನು ಅನ್ಯ ಉದ್ದೇಶಗಳಿಗೆ ಬಳಕೆ ಮಾಡುವುದನು ತಡೆಯುವ ಬಗ್ಗೆ, ಬ್ಯಾಂಕ್‌ಗಳಲ್ಲಿ ಶೀಘ್ರದಲ್ಲಿ ಸಾಲ ವಿತರಿಸುವಂತೆ, ವಸತಿ ರಹಿತರಿಗೆ ನಿವೇಶನ ನೀಡುವುದು ಸೇರಿದಂತೆ ಮತ್ತಿತರ ಸಮಸ್ಯೆಗಳ ಬಗ್ಗೆ ವಿವರಿಸಿದರು. ಸಂಬಂಧಪಟ್ಟ ಇಲಾಖೆಗಳ ಮೂಲಕ ಪರಿಹಾರ ಒದಗಿಸುವಂತೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕೃಷ್ಣಮೂರ್ತಿ, ಸರ್ಕಾರಿ ಅಭಿಯೋಜಕಿ ಸುನೀತಾ ನಾಗೇಕರ್, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಉಮೇಶ್, ಜಿಲ್ಲಾ ಜಾಗೃತ ಮತ್ತು ಉಸ್ತುವಾರಿ ಸಮಿತಿಯ ಸದಸ್ಯರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

# ಸಿಲತ್ ಕ್ರೀಡೆಗೆ ಸರಕಾರದಿಂದ ಮಾನ್ಯತೆ ಸಚಿವ ತಂಗಡಗಿ ಭರವಸೆ

**ಕೊಪ್ಪಳ:** ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಸಂಸ್ಥೆಯನ್ನು ಹೊಂದಿರುವ ಪೆಂಕಾಕ್ ಸಿಲತ್ ಕ್ರೀಡೆಗೆ ಸಿಎಂ ಅವರ ಹಂತದಲ್ಲಿ ಬಾಕಿ ಇರುವ ಮಾನ್ಯತೆಯನ್ನು ಜಿಲ್ಲೆಯ ಶಾಸಕರೊಂದಿಗೆ ಸಿಎಂ ಬಳಿ ವಿವರಿಸಿ ಮಾನ್ಯತೆ ಕೊಡಿಸುವದಾಗಿ ಸಚಿವ ಶಿವರಾಜ ಎಸ್. ತಂಗಡಗಿ ಅವರು ಭರವಸೆ ನೀಡಿದರು.

ಅವರು ನಗರದಲ್ಲಿ ಇದೇ ಸೆಪ್ಟೆಂಬರ್ 26 ರಿಂದ ಮೂರು ದಿನಗಳ ಕಾಲ ನಡೆದ 13ನೇ ರಾಷ್ಟ್ರೀಯ ಪೆಂಕಾಕ್ ಸಿಲತ್ ಕ್ರೀಡಾಕೂಟದ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ತಾವೂ ಒಬ್ಬ ಕ್ರೀಡಾಪಟುವಾಗಿದ್ದು, ಬರುವ ದಿನಗಳಲ್ಲಿ ಕ್ರೀಡೆಗೆ ಇನ್ನಷ್ಟು ಒತ್ತು ನೀಡಿ ಸಹಕಾರ ಕೊಡುವದಾಗಿ ಮತ್ತು ಕ್ರೀಡೆಯಿಂದ ಮನುಷ್ಯ ಹೆಚ್ಚು ಬೆಳಗುತ್ತಾನೆ, ಆರೋಗ್ಯಕ್ಕೂ ಒಳ್ಳೆಯದು ಮತ್ತು ಅವಕಾಶಕ್ಕೂ ಒಳ್ಳೆಯದು, ಜಿಲ್ಲೆಯ ಕ್ರೀಡಾಪಟುಗಳು ಇನ್ನಷ್ಟು ಸಾಧನೆ ಮಾಡಲಿ ಎಂದರು.

ಮಾತನಾಡಿ, ಕರ್ನಾಟಕದ ಸಣ್ಣ ಜಿಲ್ಲೆಯಲ್ಲಿ ಇಂತಹ ಕ್ರೀಡಾಕೂಟ ನಡೆಯುತ್ತಿರುವದು ಸಂತಸ, ಬಹಳ ಅಚ್ಚುಕಟ್ಟಾಗಿ ಕ್ರೀಡಾಕೂಟ ಆಯೋಜನೆ ಮಾಡಿದ್ದಾರೆ, ಮುಂದಿನ ದಿನಗಳಲ್ಲಿ ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟ ಆಯೋಜನೆ ಮಾಡುವಷ್ಟು ಶಕ್ತಿ ಇಲ್ಲಿನ ಸಂಘಟಕರಿಗೆ ಇದೆ. ಇಲ್ಲಿನ ಪೂಜ್ಯ ಗವಿಮಠದ ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು ವಸತಿ ಹಾಗೂ ಊಟಕ್ಕೆ ಬಹಳ ಸಹಕಾರ ನೀಡಿದ್ದಾರೆ, ಕೊಪ್ಪಳ ನಮಗೆ ಸದಾ ನೆನಪಲ್ಲಿ ಇರುತ್ತದೆ ಎಂದರು.



ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್ ಅವರು ಮಾತನಾಡಿ, ರಾಷ್ಟ್ರದ 33 ರಾಜ್ಯಗಳ 1500 ಜನರು ಕೊಪ್ಪಳಕ್ಕೆ ಬಂದಿರುವದು ವಿಸ್ಮಯ ತಂದಿದೆ, ನಮ್ಮೂರಲ್ಲಿ ಇಂತಹ ಕಾರ್ಯಕ್ರಮ ಸಂಘಟಿಸುವ ಶಕ್ತಿ ಇರುವ ಯುವಕರು ಇರುವದು ಬಹಳ ಆನಂದವಾಗಿದೆ, ಮುಂದಿನ ದಿನಗಳಲ್ಲಿ ಇಂತಹ ಅನೇಕ ಕಾರ್ಯಕ್ರಮಗಳು ಇಲ್ಲಿ ನಡೆಯಲಿ ಎಂದರು.

ನಗರಾಭಿವೃದ್ಧಿ ಪ್ರಾಧಿಕಾರ ಮಾಜಿ ಅಧ್ಯಕ್ಷ ಮಹಾಂತೇಶ ಪಾಟೀಲ್ ಮಾತನಾಡಿ, ಇಡೀ ದೇಶವೇ ಇಂದು ಕೊಪ್ಪಳದಲ್ಲಿ ನಿಂತ ಹಾಗೆ ಭಾಸವಾಗುತ್ತಿದೆ, ಇಷ್ಟು ಜನರನ್ನು ಕರೆಸಿ ಕ್ರೀಡಾಕೂಟ ನಡೆಸಿರುವದು ಸಾಮಾನ್ಯವಲ್ಲ, ಬಹುಭಾಷೆ ಬಹುಸಂಸ್ಕೃತಿ ಬಹು ಆಯಾಮದ ಭಾರತಕ್ಕೆ ಕೊಪ್ಪಳವನ್ನು ಪರಿಚಯಿಸಿದ ಸಂಘಟಕರು ಅಭಿನಂದನಾರ್ಹರು ಎಂದರು.

ಜೆಡಿಎಸ್ ರಾಜ್ಯ ಕಾರ್ಯದರ್ಶಿ ವಿರೇಶ ಮಹಾಂತಯ್ಯನಮಠ ಮಾತನಾಡಿ, ಸ್ನೇಹಿತರೆಲ್ಲ ಸೇರಿ ಜಿಲ್ಲೆಯಲ್ಲಿ ಕ್ರೀಡೆಯನ್ನು ಬೆಳೆಸುತ್ತಿದ್ದಾರೆ, ನಮ್ಮ ಮಕ್ಕಳು ಸಹ ಸಾಧನೆ ಮಾಡಬೇಕು ಕ್ರೀಡೆಯಲ್ಲಿ ಮುಂದೆ ಬರಬೇಕು ಆ ನಿಟ್ಟಿನಲ್ಲಿ ಜಿಲ್ಲಾ ಅಥ್ಲೆಟಿಕ್ಸ್ ಅಸೋಸಿಯೇಷನ್ ಸಂಸದ ರಾಜಶೇಖರ ಹಿಟ್ನಾಳ ಅವರ ನೇತೃತ್ವದಲ್ಲಿ ಉತ್ತಮ ಕೆಲಸ ಮಾಡುತ್ತಿದೆ ಎಂದರು.

ಕ್ರೀಡಾಕೂಟವನ್ನು ಭಾರತೀಯ ಪೆಂಕಾಕ್ ಸಿಲತ್ ಮಾರ್ಗದರ್ಶನದಲ್ಲಿ ಕರ್ನಾಟಕ ರಾಜ್ಯ ಪೆಂಕಾಕ್ ಸಿಲತ್ ಅಸೋಸಿಯೇಷನ್, ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಷನ್ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಕಾರದಿಂದ ನಡೆಸಿದರು.

ಈ ಸಂದರ್ಭದಲ್ಲಿ ಶಾಸಕ ಕೆ. ರಾಘವೇಂದ್ರ ಹಿಟ್ನಾಳ, ಮಾಜಿ ಸಚಿವರು ಪೆಂಕಾಕ್ ಸಿಲತ್ ರಾಜ್ಯ ಗೌರವ ಅಧ್ಯಕ್ಷ ಅಮರೇಗೌಡ ಬಯ್ಯಾಪೂರ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ರಡ್ಡಿ ಶ್ರೀನಿವಾಸ, ಸಾಯಿ ಸಂಸ್ಥೆಯ ಕುಸ್ತಿ ತರಬೇತುದಾರರು ಸಿಲತ್ ರಾಷ್ಟ್ರೀಯ ಕ್ರೀಡಾಕೂಟದ ವೀಕ್ಷಕ ರಾಮ್ ಎಸ್. ಬುಡಕಿ, ಸಹಾಯಕ ಆಯುಕ್ತ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ತಹಶೀಲ್ದಾರ ವಿಠ್ಠಲ ಚೌಗಲಾ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮತ್ತು ರಾಜ್ಯ ಸಿಲತ್ ಸಂಸ್ಥೆ ಜಂಟಿ ಕಾರ್ಯದರ್ಶಿ ಮಂಜುನಾಥ ಜಿ. ಗೊಂಡಬಾಳ, ಸಿಲತ್ ಸಂಸ್ಥೆ ರಾಷ್ಟ್ರೀಯ ಹಿರಿಯ ಉಪಾಧ್ಯಕ್ಷೆ ಫಿಲಿಯಾ ಥಾಮಸ್, ರಾಷ್ಟ್ರೀಯ ಪೆಂಕಾಕ್ ಸಿಲತ್ ಫೆಡರೇಷನ್ ತಾಂತ್ರಿಕ ನಿರ್ದೇಶಕ ಅಬ್ದುಲ್ ರಜಾಕ್ ಟೈಲರ್, ರಾಷ್ಟ್ರೀಯ ಖಜಾಂಚಿ ತಾರಿಖ್ ಅಹ್ಮದ್ ಜರ್ಗಾರ್, ಕರ್ನಾಟಕ ರಾಜ್ಯ ಪಂಕಾಕ್ ಸಿಲತ್ ಸಂಸ್ಥೆಯ ಅಧ್ಯಕ್ಷ ಜಗನ್ನಾಥ ಅಲಂಪಲ್ಲಿ, ಜಿಲ್ಲಾ ಅಧ್ಯಕ್ಷ ಮೌನೇಶ ವಡ್ಡಟ್ಟಿ, ಪ್ರಧಾನ ಕಾರ್ಯದರ್ಶಿ ಈರಣ್ಣ ಬದಾಮಿ, ಹನುಮಸಾಗರ್ ಅರ್ಬನ್ ಬ್ಯಾಂಕ್ ಅಧ್ಯಕ್ಷ ಬಸವರಾಜ ಬಾಚಲಾಪೂರ, ಯುವ ಸಬಲೀಕರಣ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ, ಮುಖಂಡರಾದ ಪ್ರಲ್ಹಾದರಾವ್ ದೇಸಾಯಿ, ಬಿ. ಎಫ್. ಇಬ್ರಾಹಿಂ, ಮಹಮ್ಮದ್ ಅಬ್ದುಲ್ ಕರಿಮ್ ವಂಟೆಳಿ, ವಿಶ್ವನಾಥ್ ಕನ್ನೂರ, ಪ್ರಹ್ಲಾದ್ ಅಗಳಿ, ಕಾಂಗ್ರೆಸ್ ಮುಖಂಡರಾದ ರವಿ ಕುರಗೋಡ ಯಾದವ, ಗಂಗಾಧರಸ್ವಾಮಿ ಕನಕಗಿರಿ, ಜ್ಯೋತಿ ಎಂ. ಗೊಂಡಬಾಳ, ವಿಶಾಲಾಕ್ಷಿ ತಾವರಗೇರಿ, ಸಲೀಂ ಅಳವಂಡಿ, ಸುಮಂಗಲಾ ನಾಯಕ್, ಮಲ್ಲಿಕಾರ್ಜುನ ಪೂಜಾರ, ಅಥ್ಲೆಟಿಕ್ ಸಂಸ್ಥೆಯ ಶರಣಬಸವ ಬಂಡಿಹಾಳ, ರಿಯಾಜ್ ಮಂಗಲೂರ ಇತರರು ಇದ್ದರು.

## ಶಿಷ್ಯ ವೇತನ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಸರದೇಸಾಯಿ ನವಲಗುಂದ ಶಿರಸಂಗಿ ಚಾರಿಟೇಬಲ್ ಟ್ರಸ್ಟ ಫಂಡ ಕಾರ್ಯಾಲಯ, ಹಳೆ ಜಿಲ್ಲಾ ಪಂಚಾಯತ ಕಟ್ಟಡ ಡಿ.ಸಿ. ಕಂಪೌಡ ಬೆಳಗಾವಿ ಇವರಿಂದ ವೈದ್ಯಕೀಯ/ತಾಂತ್ರಿಕ ಶಿಕ್ಷಣದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ, ತಾಂತ್ರಿಕತೆಯಲ್ಲಿ ಡಿಪ್ಲೊಮಾ ಓದುತ್ತಿರುವ ಅರ್ಹ (ಲಿಂಗಾಯತ ಮಾತ್ರ) ವಿದ್ಯಾರ್ಥಿಗಳಿಗೆ 2025–26 ನೇ ಸಾಲಿನ ಸಾಲರೂಪದ ಶಿಷ್ಯ ವೇತನ ಮಂಜೂರಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. "ಜಿಲ್ಲಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು, ಸರದೇಸಾಯಿ ನವಲಗುಂದ ಶಿರಸಂಗಿ ಚಾರಿಟೇಬಲ್ ಟ್ರಸ್ಟ ಫಂಡ ಬೆಳಗಾವಿ" ಈ ಹೆಸರಲ್ಲಿ ರೂ.50/– ಒಔ ಮೂಲಕ ಟ್ರಸ್ಟ ಕಾರ್ಯಾಲಯದದಿಂದ ಅರ್ಜಿಗಳನ್ನು ಪಡೆದು, 30 ಅಕ್ಟೋಬರ್ 2025 ರ ಒಳಗಾಗಿ ಸಲ್ಲಿಸಬಹುದಾಗಿದೆ. ಸದರಿ ಸಾಲ ರೂಪದ ಶಿಷ್ಯವೇತನವನ್ನು ಪಡೆದ 10 ವರ್ಷಗಳಲ್ಲಿ ಒಂದುವರೆ ಪಟ್ಟು ಮರು ಪಾವತಿ ಮಾಡಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0831–2425841 ಅಥವಾ ಸರದೇಸಾಯಿ ನವಲಗುಂದ ಶಿರಸಂಗಿ ಚಾರಿಟೇಬಲ್ ಟ್ರಸ್ಟ ಫಂಡ ಕಾರ್ಯಾಲಯ, ಹಳೆ ಜಿಲ್ಲಾ ಪಂಚಾಯತ ಕಟ್ಟಡ ಡಿ.ಸಿ. ಕಂಪೌಡ ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ನಾಮ ನಿರ್ದೇಶಿತ ಸದಸ್ಯತ್ವಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ:** ಪಾಲಕರ ಪೋಷಣೆ ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣಾ ಕಾಯ್ದೆ–2007 ರನ್ವಯ ಅನುಷ್ಠಾನಗೊಳಿಸಲು ಜಿಲ್ಲಾ ಸಮಿತಿಯ ನಾಮ ನಿರ್ದೇಶಿತ ಸದಸ್ಯತ್ವಕ್ಕಾಗಿ ಹಿರಿಯ ನಾಗರಿಕರಿಗಾಗಿ ಇರುವ ಸ್ವಯಂ–ಸೇವಾ ಸಂಸ್ಥೆ ಮತ್ತು ಹಿರಿಯ ನಾಗರಿಕ ವ್ಯಕ್ತಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅರ್ಹ ಸಂಸ್ತೆ ಹಾಗೂ ಹಿರಿಯ ನಾಗರಿಕರು ದಿನಾಂಕ:24–10–2025ರೊಳಗಾಗಿ ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ನಾಳೆ ಗಾಂಧೀಜಿ 156ನೇ ಜಯಂತಿ

**ಕಾರವಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಉತ್ತರ ಕನ್ನಡ ಜಿಲ್ಲೆ ಹಾಗೂ ನಗರಸಭೆ ಕಾರವಾರ ಇವರ ಸಂಯುಕ್ತ ಆಶ್ರಯದಲ್ಲಿ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿ ಆಚರಣೆ ಕಾರ್ಯಕ್ರಮವು ಅ.2 ರಂದು ಬೆಳಗ್ಗೆ 8 ಗಂಟೆಗೆ ಕಾರವಾರದ ಮಹಾತ್ಮಗಾಂಧೀ ಉದ್ಯಾನವನದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉದ್ಘಾಟಿಸಲಿದ್ದು, ಕರ್ನಾಟಕ ಮಾರ್ಕೇಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ದಿನಕರ ಕೆ. ಶೆಟ್ಟಿ, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೆಕರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಗಾಂಧೀಜಿ ಅವರ ಕುರಿತು ಅಂಕೋಲಾದ ನಿವೃತ್ತ ಪ್ರಾಚಾರ್ಯರು ಹಾಗೂ ಸಾಹಿತಿಗಳಾದ ಪ್ರೊ.ಮೋಹನ್ ಹಬ್ಬು ಉಪನ್ಯಾಸ ನೀಡಲಿದ್ದು, ಮಹಾತ್ಮಗಾಂಧೀ ಕುರಿತು ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಕಾರ್ಯಕ್ರಮ ನಡೆಯಲಿದೆ.

## ದಾಂಡೇಲಪ್ಪ ಜಾತ್ರೆ: ವಾಹನ ನಿಲುಗಡೆ ನಿಷೇಧ

**ಕಾರವಾರ:** ದಾಂಡೇಲಿ ತಾಲೂಕಿನಲ್ಲಿ ನಡೆಯುವ ಶ್ರೀ ದಾಂಡೇಲಪ್ಪ ಜಾತ್ರೆಯ ಅಂಗವಾಗಿ ಭಕ್ತರು/ಸಾರ್ವಜನಿಕರ ಓಡಾಟಕ್ಕೆ ಅನುಕೂಲವಾಗುವಂತೆ ಅ.1 ರಂದು ಸಂಜೆ 4 ಗಂಟೆಯಿಂದ ಅ.3 ರಂದು ಬೆಳಗ್ಗೆ 6 ಗಂಟೆಯ ವರೆಗೆ ದಾಂಡೇಲಿ ಕೆ.ಸಿ ವೃತ್ತದಿಂದ ಹಾಲಮಡ್ಡಿಯವರೆಗೆ, ಹಳಿಯಾಳ ರಸ್ತೆಯ ಇಕ್ಕೆಲುಗಳಲ್ಲಿ ಹಾಗೂ ಹಾಲಮಟ್ಟಿ ಕಮಾನ್‌ನಿಂದ ದಾಂಡೇಲಪ್ಪ ದೇವಸ್ಥಾನದವರೆಗೆ ವಾಹನಗಳ ನಿಲುಗಡೆಯನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಆದೇಶ ಹೊರಡಿಸಿದ್ದಾರೆ. **ಮಾರ್ಗ ಬದಲಾವಣೆ** ದಾಂಡೇಲಿ ತಾಲೂಕಿನಲ್ಲಿ ನಡೆಯುವ ಶ್ರೀ ದಾಂಡೇಲಪ್ಪ ಜಾತ್ರೆಯ ಅಂಗವಾಗಿ ದಾಂಡೇಲಿ ಕೆ.ಸಿ.ವೃತ್ತ–ಕೆರವಾಡ ಮಾರ್ಗವಾಗಿ ಹಳಿಯಾಳ ಸಾಗುವ ವಾಹನಗಳನ್ನು ಅ.1 ರಂದು ಸಂಜೆ 4 ಗಂಟೆಯಿಂದ ಅ.3 ರಂದು ಬೆಳಗ್ಗೆ 6 ಗಂಟೆಯವರೆಗೆ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ನಿಷೇಧಿಸಿ ಆದೇಶ ಹೊರಡಿಸಿದ್ದಾರೆ. ಸದರಿ ಮಾರ್ಗದ ಪರ್ಯಾಯವಾಗಿ ದಾಂಡೇಲಿಯಿಂದ ಹಳಿಯಾಳಕ್ಕೆ ಸಾಗಲು ದಾಂಡೇಲಿ–ಸೋಮಾನಿ ವೃತ್ತ, ಬರ್ಚಿ ರಸ್ತೆ, ಬರ್ಚಿನಾಕಾ ಮೂಲಕ ಹಳಿಯಾಳ ಪಥ ಬದಲಾವಣೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ನೇರ ಸಾಲ ಯೋಜನೆಗೆ ಅರ್ಜಿ ಆಹ್ವಾನ

**ಕಾರವಾರ:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಹಲವು ವೃತ್ತಿಗಳಾದ ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೇಲ್ ಉದ್ಯಮ, ಟ್ಯಾಕ್ಸಿ ಇತ್ಯಾದಿ ವ್ಯಾಪರ ವಹಿವಾಟುಗಳಿಗಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ನೆರವು ಒದಗಿಸುವ ಸಲುವಾಗಿ ನೇರ ಸಾಲ ಯೋಜನೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅ.31 ರ ಸಂಜೆ 5 ಗಂಟೆಯವರೆಗೆ ಕೊನೆಯ ದಿನವಾಗಿದೆ. ಹಿಂದುಳಿದ ಬ್ರಾಹ್ಮಣ ಸಮುದಾಯದವರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ನ್ಯೂ ಕೆ.ಎಚ್.ಬಿ. ಕಾಲೋನಿ. ಹಬ್ಬುವಾಡಾ, ಕಾರವಾರ ಅಥವಾ ದೂರವಾಣಿ ಸಂಖ್ಯೆ: 7975633671ನ್ನು ಸಂಪರ್ಕಿಸುವಂತೆ ಜಿಲ್ಲಾ ಕೌಶ್ಯಲಾಭಿವೃದ್ಧಿ ಅಧಿಕಾರಿ ತಿಳಿಸಿದ್ದಾರೆ.

# ಬೆಳೆ ಹಾನಿಯ ಸಂಪೂರ್ಣ ವರದಿ ಶೀಘ್ರ ಸರ್ಕಾರಕ್ಕೆ ಸಲ್ಲಿಕೆ



**ಗದಗ:** ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಯಾಗಿದ್ದರ ಕುರಿತು ಈಗಾಗಲೇ ಜಂಟಿ ಸಮೀಕ್ಷೆ ಕಾರ್ಯ ನಡೆಸಲಾಗಿದೆ. ಕೃಷಿ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಒಟ್ಟಾರೆ 1,12,438 ಹೆಕ್ಟೇರ ಪ್ರದೇಶ ಬೆಳೆ ಹಾನಿಯಾಗಿದೆ. ಎನ್.ಡಿ.ಆರ್.ಎಫ್ ಪ್ರಕಾರ 121 .33 ಕೋಟಿ ರೂ ಪರಿಹಾರ ನೀಡಲು ಪ್ರಸ್ತಾವನೆ ಸಿದ್ಧಪಡಿಸಲಾಗಿದ್ದು ಶೀಘ್ರವೇ ಸರಕಾರಕ್ಕೆ ಸಲ್ಲಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಎಚ್. ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಬೆಳೆ ಹಾನಿ ಸಮೀಕ್ಷೆ ಹಾಗೂ ಜನತಾ ದರ್ಶನ , ಪ್ರಗತಿ ಪರಿಶೀಲನೆ ಸಭೆ ಜರುಗಿಸಿ ನಂತರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು

ತೋಟಗಾರಿಕೆ ಇಲಾಖೆಗೆ ಸಂಬಂಧಿಸಿದಂತೆ 11,348 ಹೆಕ್ಟೇರ್ ಪ್ರದೇಶ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಎನ್.ಡಿ.ಆರ್.ಎಫ್. ಪ್ರಕಾರ 10.36 ಕೋಟಿ ರೂ. ಪರಿಹಾರಕ್ಕಾಗಿ ಪ್ರಸ್ತಾವನೆ ಸಿದ್ಧಪಡಿಸಲಾಗಿದೆ. ಕೃಷಿ ಬೆಳೆ ಹಾನಿಗೆ ಸಂಬಂಧಿಸಿದಂತೆ 4337 ರೈತರಿಂದ ಆಕ್ಷೇಪಣೆಗಳು ಸಲ್ಲಿಕೆಯಾಗಿವೆ. ಅವುಗಳನ್ನು ಪರಿಶೀಲಿಸಿ ವರದಿಯಲ್ಲಿ ಅಳವಡಿಸಲಾಗುವುದು. ಕೃಷಿಗೆ ಸಂಬಂಧಿಸಿದಂತೆ 4.36 ಕೋಟಿ ರೂ ಹಾಗೂ ತೋಟಗಾರಿಕೆ ಸಂಬಂಧಿಸಿದಂತೆ ಹೆಚ್ಚುವರಿಯಾಗಿ 1 ಕೋಟಿ ರೂ. ಪರಿಹಾರ ನೀಡಲು ಪ್ರಸ್ತಾವನೆಯಲ್ಲಿ ಸೇರಿಸಿ ಸಲ್ಲಿಸಲಾಗುವುದು ಸಚಿವ ಎಚ್. ಕೆ.ಪಾಟೀಲ ಅವರು ತಿಳಿಸಿದರು.

**ಜನತಾ ದರ್ಶನ:** ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸುವ ಮಹಾತ್ವಾಕಾಂಕ್ಷಿ ಜನತಾ ದರ್ಶನ ಕಾರ್ಯಕ್ರಮ ಪರಿಣಾಮಕಾರಿಯಾಗಿ ಜರುಗಿಸಲಾಗಿದೆ. ಜನತಾ ದರ್ಶನದಲ್ಲಿ ಸ್ವೀಕೃತವಾದ ಅರ್ಜಿಗಳ ಶೀಘ್ರ ವಿಲೇವಾರಿಗೆ ಕ್ರಮ ವಹಿಸಲು ಸೂಚಿಸಲಾಗಿದೆ. ಜನತಾ ದರ್ಶನದಲ್ಲಿ ವಿಲೇವಾರಿಯಾಗದ ಅರ್ಜಿಗಳಲ್ಲಿ ಕೆಲವೊಂದು ಅರ್ಜಿಗಳು ಅನುದಾನದ ಲಭ್ಯತೆ ಇಲ್ಲದೇ ವಿಲೇವಾರಿಯಾಗಿರುವುದಿಲ್ಲ. ಸಂಬಂಧಿತ ಇಲಾಖೆಯ ಅಧಿಕಾರಿಗಳು ಮೇಲಾಧಿಕಾರಿಗಳೊಂದಿಗೆ ಸಂಪರ್ಕಿಸಿ ಅನುದಾನ ತರಿಸಿಕೊಂಡು ಅರ್ಜಿ ವಿಲೇವಾರಿಗೆ ಕ್ರಮ ವಹಿಸಬೇಕು. ಇನ್ನು ಕೆಲವು ಅರ್ಜಿಗಳ ವಿಲೇವಾರಿಗಾಗಿ ಆಯ್ಕೆ ಸಮಿತಿ ಸಭೆಗಳನ್ನು ಮಾಡಬೇಕಾಗಿದೆ. ಹೀಗೆ ವಿವಿಧ ಹಂತದಲ್ಲಿ ಬಾಕಿ ಇರುವ ಅರ್ಜಿಗಳ ವಿಲೇವಾರಿಗೆ ಇಲಾಖೆ ಅಧಿಕಾರಿಗಳು ಅಕ್ಟೋಬರ್ 10 ನೇ ತಾರಿಖಿನೊಳಗಾಗಿ ವಿಲೇವಾರಿ ಮಾಡಿ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಲು ತಿಳಿಸಲಾಗಿದೆ ಎಂದರು.

### ಪ್ರಭುವಿನೆಡೆಗೆ ಪ್ರಭುತ್ವ

ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ದಲ್ಲಿ ಒಟ್ಟು 21 ದೂರು ದಾಖಲಾಗಿವೆ.. 13 ದೂರುಗಳಿಗೆ ಸಂಪೂರ್ಣ ಪರಿಹಾರ ಒದಗಿಸಲಾಗಿದೆ. 2 ಮನವಿಗಳು ಯೋಜನೆ ಅಳವಡಿಕೆ ಕುರಿತಂತೆ ಹಾಗೂ 5 ಅರ್ಜಿಗಳು ಬಾಕಿ ಇವೆ. ಬಾಕಿ ಇರುವಂತಹ ದೂರುಗಳ ಕುರಿತು ಶೀಘ್ರ ಕ್ರಮ ವಹಿಸಲು ಸೂಚಿಸಲಾಗಿದೆ.

**ಅಮಾನತ್ತು:** ಗದಗ ತಹಶೀಲ್ದಾರರ ಕಚೇರಿಯಲ್ಲಿ ಸಂಧ್ಯಾ ಸುರಕ್ಷಾ, ವಿಧವಾ ವೇತನ, ವೃದ್ಧಾಪ್ಯ ವೇತನ ಕುರಿತಂತೆ ಸಾಮಾಜಿಕ ಭದ್ರತಾ ಯೋಜನೆಗಳಡಿ ಅನರ್ಹರಿಗೆ ಮಂಜೂರಾತಿ ಆರೋಪದಡಿ ಉಪ ತಹಶೀಲ್ದಾರ ಡಿ.ಟಿ.ವಾಲ್ಮೀಕಿ ಅವರನ್ನು ಅಮಾನತ್ತುಗೊಳಿಸಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

ಸಾರ್ವಜನಿಕರಿಂದ ದೂರು ಬಂದ ಹಿನ್ನಲೆಯಲ್ಲಿ ಇಂದು ನಾನೇ ಖುದ್ದಾಗಿ ಕಚೇರಿಗೆ ಹೋಗಿ ಪರಿಶೀಲನೆ ನಡೆಸಲಾಗಿ ಅನರ್ಹರಿಗೆ ಪಿಂಚಣಿ ಮಂಜೂರು ಮಾಡಿರುವ ಕುರಿತು ಕಂಡು ಬಂದ ಹಿನ್ನೆಲೆಯಲ್ಲಿ ಅಮಾನತ್ತು ಕ್ರಮ ವಹಿಸಲಾಗಿದೆ.

ಜಿಲ್ಲೆಯಲ್ಲಿ 17,997 ಅನರ್ಹರಿಗೆ ಪಿಂಚಣಿ ಮಂಜೂರಾತಿ ಆಗಿರುವುದು ತಿಳಿದು ಬಂದಿದ್ದು ಇದರ ಸತ್ಯಾಸತ್ಯತೆಗಾಗಿ ಸಂಪೂರ್ಣ ತನಿಖೆಗೆ ಸೂಚಿಸಲಾಗಿದೆ. ಅನರ್ಹರಿಗೆ ವಿತರಣೆಯಾಗುತ್ತಿರುವ ಪಿಂಚಣಿ ಹಣ ತಕ್ಷಣ ನಿಲ್ಲಿಸಬೇಕೆಂದು ಈಗಾಗಲೇ ಸೂಚನೆ ನೀಡಲಾಗಿದೆ. ಜಿಲ್ಲಾಧಿಕಾರಿಗಳು ಈ ಕುರಿತು ಸಾಕಷ್ಟು ವಿಚಾರಣೆ ನಡೆಸಿ ಅನರ್ಹರಿಗೆ ಕೊಡುವಂತಹ ಸೌಲಭ್ಯ ನಿಲ್ಲಿಸುವ ಕುರಿತು ಇಲಾಖೆಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಇದ್ದರು.

## ಬೆಂಬಲ ಬೆಲೆ ಯೋಜನೆ: ಖರೀದಿ ಕೇಂದ್ರಗಳು ಪ್ರಾರಂಭ

**ಬೆಳಗಾವಿ:** ಪ್ರಸಕ್ತ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಹೆಸರುಕಾಳು, ಉದ್ದಿನಕಾಳು ಹಾಗೂ ಸೂರ್ಯಕಾಂತಿ ಉತ್ಪನ್ನಗಳ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಹೆಸರುಕಾಳು ಬೆಂಬಲ ಬೆಲೆ ರೂ. 8,768–00, ಪ್ರತಿಯೊಬ್ಬ ರೈತರಿಂದ ಪ್ರತಿ ಎಕರೆಗೆ 03 (ಮೂರು) ಕ್ವಿಂಟಾಲ್ ಹಾಗೂ ಗರಿಷ್ಟ 15 (ಹದಿನೈದು) ಕ್ವಿಂಟಾಲ್, ಉದ್ದಿನಕಾಳು ಬೆಂಬಲ ಬೆಲೆ ರೂ. 7,800–00, ಪ್ರತಿಯೊಬ್ಬ ರೈತರಿಂದ ಪ್ರತಿ ಎಕರೆಗೆ 05 (ಐದು) ಕ್ವಿಂಟಾಲ್ ಹಾಗೂ ಗರಿಷ್ಟ 30 (ಮೂವತ್ತು ಕ್ವಿಂಟಾಲ್, ಸೂರ್ಯಕಾಂತಿ ಬೆಂಬಲ ಬೆಲೆ ರೂ. 7,721–00, ಪ್ರತಿಯೊಬ್ಬ ರೈತರಿಂದ ಪ್ರತಿ ಎಕರೆಗೆ 04 (ನಾಲ್ಕು ಕ್ವಿಂಟಾಲ್ ಹಾಗೂ ಗರಿಷ್ಟ 20 (ಇಪ್ಪತ್ತು) ಕ್ವಿಂಟಾಲ್ ವರೆಗೆ ಖರೀದಿಸಲಾಗವುದು. ನೋಂದಣಿ ದಿನಾಂಕ: 25–09–2025 ರಿಂದ 80 ದಿನಗಳು ರವರೆಗೆ ರೈತರ ನೋಂದಣಿ ಹಾಗೂ ದಿನಾಂಕ: 25–09–2025 ರಿಂದ 90 ದಿನಗಳವರೆಗೆ ಖರೀದಿ ಅವಧಿ ನಿಗದಿಪಡಿಸಲಾಗಿದೆ.

ಹೆಸರು ಕಾಳು ಹಾಗೂ ಉದ್ದಿನ ಕಾಳುಗಳ ನೋಂದಣಿ ಹಾಗೂ ಖರೀದಿಗೆ ಸಂಬಂಧಿಸಿದಂತೆ ಶಾಖಾ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ, ಬೆಳಗಾವಿ–9449864445, ಅಥಣಿ 9449864471 ಹಾಗೂ ಸೂರ್ಯಕಾಂತಿ ನೋಂದಣಿ ಹಾಗೂ ಖರೀದಿಗಾಗಿ ಶಾಖಾ ವ್ಯವಸ್ಥಾಪಕರು, ಕೆ.ಓ.ಎಫ್, ಬೆಳಗಾವಿ –9900553048 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

**ಹೆಸರುಕಾಳು ಖರೀದಿ ಕೇಂದ್ರಗಳು:** ಟಿ.ಎ.ಪಿ.ಸಿ.ಎಂ. ಎಸ್. ರಾಮದುರ್ಗ, ಪಿ.ಕೆ.ಪಿ.ಎಸ್. ಹುಲಕುಂದ, ಟಿ.ಎ.ಪಿ.ಸ.ಎಂ.ಎಸ್. ಸವದತ್ತಿ, ಕಲ್ಪತರು, ಪಿ.ಕೆ.ಪಿ.ಎಸ್. ಮುರಗೋಡ, ಪಿ.ಕೆ.ಪಿ.ಎಸ್. ಯರಗಟ್ಟಿ, ಟಿ.ಪಿ.ಪಿ.ಸಿ.ಎಂ.ಎಸ್. ಬೈಲಹೊಂಗಲ, ಪಿ.ಕೆ.ಪಿ.ಎಸ್. ದೊಡವಾಡ, ಟಿ.ಎ.ಪಿ.ಸಿ.ಎಂ.ಎಸ್. ಗೋಕಾಕ, ಪಿ.ಕೆ.ಪಿ.ಎಸ್. ಮೂಡಲಗಿ

**ಉದ್ದಿನ ಕಾಳು ಖರೀದಿ ಕೇಂದ್ರಗಳು:** ಪಿ.ಕೆ.ಪಿ.ಎಸ್ ಕನ್ನಾಳ, ಪಿ.ಕೆ.ಪಿ.ಎಸ್. ಕಟಗೇರಿ, ಅಥಣಿ ಎ.ಪಿ.ಎಂ.ಸಿ. ಯಾರ್ಡ, ಪಿ.ಕೆ.ಪಿ.ಎಸ್.ತೇಲಸಂಗ , ಟಿ.ಎ.ಪಿ.ಸಿ.ಎಂ.ಎಸ್. ಸವದತ್ತಿ, ಟಿ.ಪಿ.ಪಿ.ಸಿ.ಎಂ. ಎಸ್. ಬೈಲಹೊಂಗಲ , ಪಿ.ಕೆ.ಪಿ.ಎಸ್. ದೊಡವಾಡ, ಟಿ.ಎ.ಪಿ.ಸಿ.ಎಂ.ಎಸ್.ಗೋಕಾಕ , ಪಿ.ಕೆ.ಪಿ.ಎಸ್. ಮೂಡಲಗಿ, ಕಲ್ಪತರು ಪಿ.ಕೆ.ಪಿ.ಎಸ್. ಮುರಗೋಡ,

**ಸೂರ್ಯಕಾಂತಿ ಖರೀದಿ ಕೇಂದ್ರಗಳು:** ಟಿ.ಎ.ಪಿ.ಸಿ.ಎಂ. ಎಸ್ ರಾಮದುರ್ಗ, ಪಿ.ಕೆ.ಪಿ.ಎಸ್.ಹುಲಕುಂದ, ಟಿ.ಎ.ಪಿ.ಸಿ.ಎಂ.ಎಸ್. ಸವದತ್ತಿ, ಟಿ.ಎ.ಪಿ.ಸಿ.ಎಂ. ಎಸ್. ಗೋಕಾಕ, ಕೆ.ಪಿ.ಪಿ.ಎಸ್. ಮೂಡಲಗಿ,

## ಸಮೀಕ್ಷೆಗೆ ಆ್ಯಪ್ ಬಳಸಿ ಮಾಹಿತಿ ಭರ್ತಿ ಮಾಡಿ

**ಧಾರವಾಡ:** ಈಗಾಗಲೇ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯ ಜಾರಿಯಲ್ಲಿದ್ದು, ಸಾರ್ವಜನಿಕರು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆದಾರರನ್ನು ಕಾಯಬೇಕಾಗಿಲ್ಲ. ಆನ್‌ಲೈನ್‌ನಲ್ಲಿ ಸುಲಭ ವಿಧಾನದಲ್ಲಿ ಸ್ವತಃ ನಿಮ್ಮ ಮೊಬೈಲ್‌ನಲ್ಲಿ ಅರ್ಜಿ ಭರ್ತಿ ಮಾಡಬಹುದು. ಸಾರ್ವಜನಿಕರು https://kscbcselfdeclaratioin.karnataka.gov.in ವೆಬ್‌ಸೈಟಿಗೆ ಭೇಟಿ ನೀಡಿ, ನಾಗರಿಕ ಎಂದು ಆಯ್ಕೆ ಮಾಡಬೇಕು. ಮೊಬೈಲ್ ನಂಬರ್ ಹಾಕಿ ಓಟಿಪಿ ಪಡೆದು, ನಮೂದಿಸಬೇಕು. ತದನಂತರ ಹೊಸ ಸಮೀಕ್ಷೆ ಆರಂಭಿಸಿ ಎಂದು ಆಯ್ಕೆ ಮಾಡಿ ನಿಮಗೆ ಕೊಟ್ಟಿರುವ ಯುಎಚ್‌ಐಡಿ ಅನ್ನು ನಮೂದಿಸಿ ಪರಿಶೀಲನೆ ಮಾಡಬೇಕು.

ಒಂದು ವೇಳೆ ಯುಹೆಚ್‌ಐಡಿ ಇಲ್ಲದಿದ್ದರೆ ಐ ಡೋಂಟ್ ಹ್ಯಾವ್ ಯುಎಚ್‌ಐಡಿ ಎಂದು ಕ್ಲಿಕ್ ಮಾಡಬೇಕು. ನಂತರ ಹೆಸ್ಕಾಂ ಐಡಿ ಸಂಖ್ಯೆಯನ್ನು ನಮೂದಿಸಿದ ನಂತರ ಸಮೀಕ್ಷೆಯಲ್ಲಿ ಭಾಗವಹಿಸುವವರ ಭಾವಚಿತ್ರವನ್ನು ಅಪ್ಲೋಡ್ ಮಾಡಬೇಕು.

ತದನಂತರ ಪಡಿತರ ಚೀಟಿ ಅಥವಾ ಆಧಾರ್ ಕಾರ್ಡ್‌ನ್ನು ಆಯ್ಕೆ ಮಾಡಬೇಕು. ಒಂದು ವೇಳೆ ಆಧಾರ್ ಕಾರ್ಡ್ ಆಯ್ಕೆ ಮಾಡಿದರೆ ಓಟಿಪಿ ಬರುತ್ತೆ ಅಥವಾ ಕ್ಯೂಆರ್ ಕೋಡ್ ಮುಖಾಂತರ ಫೇಸ್ ಕ್ಯಾಪ್ಚರ್‌ನ್ನು ಬಳಸಬಹುದು ನಂತರ ಗೇಟ್ ಡಾಟಾ ಅನ್ನು ಕ್ಲಿಕ್ ಮಾಡಿ ಮುಂದುವರೆಯಬೇಕು.

ಮನೆಯ ಮುಖ್ಯಸ್ಥನು ಇ ಕೆವೈಸಿ ನಂತರ ಮನೆಯ ಕುಟುಂಬದ ಸದಸ್ಯರನ್ನು ಸೇರಿಸಬೇಕು. ಸದಸ್ಯರನ್ನು ಸೇರಿಸಿ ಇ ಕೆವೈಸಿ ಪೂರ್ಣಗೊಳಿಸಿ, ರೇಷನ್ ಕಾರ್ಡ್‌ನಲ್ಲಿ ಇರುವ ವ್ಯಕ್ತಿ ಮೃತಪಟ್ಟಿದ್ದರೆ, ಮೃತ ಎಂಬ ಆಯ್ಕೆಯನ್ನು ಕ್ಲಿಕ್ ಮಾಡಬೇಕು. ಇನ್ನುಳಿದ ಕುಟುಂಬದ ಸದಸ್ಯರನ್ನು ಸೇರಿಸಿದ ಮೇಲೆ ಕುಟುಂಬದ ಮುಖ್ಯಸ್ಥನನ್ನು ಆಯ್ಕೆ ಮಾಡಿ ಗುರುತಿಸಿ, ನಿಮ್ಮ ಸರ್ವೆಯನ್ನು ಪ್ರಾರಂಭ ಮಾಡಬೇಕು.

ಪ್ರತಿಯೊಬ್ಬರ ಮಾಹಿತಿಯನ್ನು ಪಡೆದ ನಂತರ ಕುಟುಂಬದ ದಾಖಲು ಮಾಡಬೇಕು. ಕೆಲವು ಪ್ರಶ್ನೆಗಳಿಗೆ ಉತ್ತರ ಸಲ್ಲಿಸಿ, ಮೇಲೆ ಕ್ಲಿಕ್ ಮಾಡಿ ನಂತರ ನೀವು ಸಲ್ಲಿಸಿದ ಮಾಹಿತಿಯನ್ನು ಮತ್ತೊಮ್ಮೆ ಪೂರ್ಣವಾಗಿ ನೋಡಬಹುದು. ಒಂದು ಹಾಳೆಯಲ್ಲಿ ನಾನು ಸ್ವಯಂ ಪ್ರೇರಣೆಯಿಂದ ಸಮೀಕ್ಷೆಯಲ್ಲಿ ಭಾಗವಹಿಸಿ ಎಲ್ಲಾ ನಿಖರವಾದ ಮಾಹಿತಿಯನ್ನು ನೀಡಿದ್ದೇನೆ ಎಂದು ಬರೆದು ಆ ಫೋಟೋವನ್ನು ತೆಗೆದು ಅಪ್ಲೋಡ್ ಮಾಡಬೇಕು. ಸಬ್‌ಮಿಟ್ ಮಾಡಿದ ನಂತರ ಅಪ್ಲಿಕೇಶನ್ ನಂಬರ್ ಸಿಗುತ್ತದೆ ಎಂದು ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ.

**ಬಾಡಗಂಡಿ ಮತ್ತು ರೊಳ್ಳಿ ಗ್ರಾಮಗಳಲ್ಲಿ ಮನೆ, ಬೆಳೆ ಹಾನಿ ವೀಕ್ಷಿಸಿದ ಶಾಸಕ ಜೆ.ಟಿ.ಪಾಟೀಲ**

# ಮಳೆಯಿಂದಾಗಿ ವಿವಿಧ ಬೆಳೆ, ಮನೆಗಳು ಕುಸಿತ



**ಬಾಗಲಕೋಟೆ:** ಅತೀಯಾದ ಮಳೆಯಿಂದಾಗ ಬೀಳಗಿ ಮತಕ್ಷೇತ್ರ ವ್ಯಾಪ್ತಿಯ ಬಾಡಗಂಡಿ ಮತ್ತು ರೊಳ್ಳಿ ಗ್ರಾಮಗಳಲ್ಲಿ ಹಾನಿಗೊಳಗಾದ ವಿವಿಧ ಬೆಳೆ ಹಾಗೂ ಕುಸಿದ ಮಣ್ಣಿನ ಮನೆಗಳನ್ನು ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಸೋಮವಾರ ವೀಕ್ಷಣೆ ಮಾಡಿದರು.

ಬಾಡಗಂಡಿ ಮತ್ತು ರೊಳ್ಳಿ ಗ್ರಾಮಗಳ ವ್ಯಾಪ್ತಿಯ ಹಾನಿಗೊಳಗಾದ ಈರುಳ್ಳಿ, ಮೆಕ್ಕೆಜೋಳ ಹಾಗೂ ಸೂರ್ಯಕಾಂತಿ ಸೇರಿದಂತೆ ಇತರೆ ಬೆಳೆಗಳನ್ನು ವೀಕ್ಷಣೆ ಮಾಡಿದರು. ಜಮೀನುಗಳಿಗೆ ಭೇಟಿ ನೀಡಿ ಬೆಳೆ ಹಾನಿಯ ಮಾಹಿತಿಯನ್ನು ಅಧಿಕಾರಿಗಳಿಂದ ಪಡೆದುಕೊಂಡರು. ಅತೀಯಾದ ಮಳೆಯಿಂದಾಗಿ ಸರಿಯಾಗಿ ಬೆಳೆ ಬಾರದೆ ರೈತ ಸಂಕಷ್ಟಕ್ಕೆ ಒಳಗಾಗಿದ್ದಾನೆ. ಆದ್ದರಿಂದ ಹಾನಿಗೆ ಸೂಕ್ತ ಪರಿಹಾರ ಒದಗಿಸಲು ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಹೊಸ ರೊಳ್ಳಿ ಗ್ರಾಮಕ್ಕೆ ಭೇಟಿ ನೀಡಿದ ಅವರು ಕುಸಿದ ಮಣ್ಣಿನ ಮನೆಗಳನ್ನು ವೀಕ್ಷಣೆ ಮಾಡಿ ತುರ್ತಾಗಿ 5 ಸಾವಿರ ರೂ.ಗಳನ್ನು ಒದಗಿಸುವ ಕೆಲಸವಾಗಬೇಕು. ಬಿದ್ದ ಮನೆಗಳ ಸರ್ವೆ ನಿಖರವಾಗಿರಬೇಕು. ಯಾವುದೇ ಮನೆಗಳು ಬಿಟ್ಟು ಹೋಗಬಾರದು. ಸರ್ವೆ ಕಾರ್ಯದಲ್ಲಿ ಮನೆ ಬಿದ್ದಿರುವ ಬಗ್ಗೆ ಶೇಕಡಾವಾರು ಪ್ರಮಾಣವನ್ನು ಪರಿಶೀಲಿಸಿ ಸೂಕ್ತ ಪರಿಹಾರ ದೊರೆಯುವ ನಿಟ್ಟಿನಲ್ಲಿ ಕೆಲಸ ಮಾಡಲು ಸೂಚಿಸಿದರು.

ನಂತರ ಹಾನಿ ವಿವರದ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು ಬೀಳಗಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟಾರೆಯಾಗಿ 203 ಮನೆಗಳನ್ನು ಹಾನಿಗೊಳಗಾಗಿವೆ. 5920 ಹೆಕ್ಟೆರ್ ತೋಟಗಾರಿಕೆ ಬೆಳೆ ಹಾಗೂ 7500 ಹೆಕ್ಟೆರ್ ಕೃಷಿ ಬೆಳೆ ಹಾನಿಯಾಗಿರುವುದನ್ನು ಅಂದಾಜಿಸಲಾಗಿದೆ.

ಮುಖ್ಯವಾಗಿ ಈರುಳ್ಳಿ, ಸೂರ್ಯಕಾಂತಿ, ಮೆಕ್ಕೆಜೋಳ ಸೇರಿದಂತೆ ಇತರೆ ಬೆಳೆಗಳು ಹಾನಿಗೊಳಗಾಗಿದ್ದು, ಇದರಿಂದ ರೈತರು ನಷ್ಟವನ್ನು ಅನುಭವಿಸುತ್ತಿದ್ದಾನೆ. ಹಾನಿಯ ಬಗ್ಗೆ ಸೂಕ್ತ ಸರ್ವೆ ಮಾಡಿ ರೈತರಿಗೆ ಸರಕಾರ ಮಾರ್ಗಸೂಚಿಯನ್ವಯ ಪರಿಹಾರಕ್ಕೆ ಒದಗಿಸಲು ಕ್ರಮಕೈಗೊಳ್ಳಲು ಸೂಚಿಸಿದರು.

ಮತಕ್ಷೇತ್ರ ವ್ಯಾಪ್ತಿಯಲ್ಲಿ 203 ಮನೆಗಳು ಹಾನಿಗೀಡಾಗಿದ್ದು, ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಪಂಚಾಯತ ಅಭಿವೃದ್ದಿ ಅಧಿಕಾರಿಗಳಿಂದ ನಿಖರವಾದ ಸಮೀಕ್ಷೆ ಮಾಡಿ ಸೂಕ್ತ ಪರಿಹಾರ ದೊರೆಯುವಂತೆ ಆಗಬೇಕು. ಹಾನಿಗೊಳಗಾದ ಕೆಲವು ಪ್ರದೇಶಗಳಿಗೆ ಸಾಂಕೇತಿಕವಾಗಿ ಭೇಟಿ ನೀಡಿ ವೀಕ್ಷಣೆ ಮಾಡಲಾಗಿದೆ.

ಅಧಿಕಾರಿಗಳು ಹಾನಿಗೊಳಗಾದ ಯಾವುದೇ ಜಮೀನು ಹಾಗೂ ಮನೆಗಳನ್ನು ಬಿಟ್ಟು ಹೋಗದ ರೀತಿಯಲ್ಲಿ ಜಂಟಿ ಸರ್ವೆ ನಡೆಸಿ ಸೂಕ್ತ ವರದಿಯನ್ನು ಸರಕಾರಕ್ಕೆ ಸಲ್ಲಿಸುವ ಕಾರ್ಯವಾಗಬೇಕೆಂದು ತಿಳಿಸಿದರು.

ಭೇಟಿ ಸಮಯದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ರವೀಂದ್ರ ಹಕಾಟಿ, ಬೀಳಗಿ ತಹಶೀಲ್ದಾರ ವಿನೋದ ಹತ್ತಳ್ಳಿ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಇದ್ದರು.

### ವಸತಿ ನಿಲಯಕ್ಕೆ ಭೇಟಿ

ಬೀಳಗಿಯಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯಕ್ಕೆ ಅನಿರೀಕ್ಷಿತವಾಗಿ ಭೇಟಿ ನೀಡಿದ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಅವರು ಗ್ರಂಥಾಲಯ, ಕಂಪ್ಯೂಟರ ಕೊಠಡಿ ಹಾಗೂ ವಿದ್ಯಾರ್ಥಿಗಳು ಕೋಣೆಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಗ್ರಂಥಾಲಯ ಸರಿಯಾಗಿ ಬಳಕೆಯಾಗಿರದನ್ನು ಕಂಡು ಇನ್ನು ಮುಂದೆ ಬಳಕೆಯಾಗುವಂತೆ ಕ್ರಮವಹಿಸಬೇಕು. ನಂತರ ಅಡಿಗೆ ಕೋಣೆಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಆಹಾರ ಪದಾರ್ಥಗಳನ್ನು ವೀಕ್ಷಿಸಿ ಊಟ ಸವಿದರು. ಆಹಾರ ಧಾನ್ಯವಿರುವ ಕೋಣೆಗೆ ಭೇಟಿ ನೀಡಿ ವೀಕ್ಷಣೆ ಮಾಡಿದರು. ತರಕಾರಿ ಯಾವುದೇ ತರಕಾರಿ ಇರದನ್ನು ಕಂಡರು. ಅಲ್ಲದೇ ರೆಫ್ರೀಜರೇಟರ್ ಇದ್ದರು ಅದು ಬಳಕೆಯಾಗದಿರುವದನ್ನು ನೋಡಿ ಮೇಲ್ವಚಾರಕರಿಗೆ ಹಾಗೂ ತಾಲೂಕಾ ಅಧಿಕಾರಿಗಳಿಗೆ ಕ್ರಮಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

## ಕಾರ್ಖಾನೆಯ ಪುನಶ್ಚೇತನ ಕುರಿತು ಚರ್ಚೆ




**ಎಂ.ಕೆ.ಹುಬ್ಬಳ್ಳಿ:** ಎಂ.ಕೆ. ಹುಬ್ಬಳ್ಳಿಯ ಶ್ರೀ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಗೆ ನೂತನವಾಗಿ ಆಯ್ಕೆಯಾದ ಪ್ಯಾನಲ್‌ನ ನಿರ್ದೇಶಕರು ಮಂಗಳವಾರ ಸಭೆ ಸೇರಿ ಕಾರ್ಖಾನೆಯ ಪ್ರಸ್ತುತ ಸ್ಥಿತಿ ಮತ್ತು ಪುನಶ್ಚೇತನ ಕುರಿತು ಚರ್ಚಿಸಿದರು. ನೂತನ ನಿರ್ದೇಶಕರೂ ಆಗಿರುವ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ನೇತೃತ್ವದಲ್ಲಿ ಸಭೆ ನಡೆಯಿತು.ಮೊದಲು ವಿಘ್ನ ವಿನಾಶಕ ಶ್ರೀ ಗಣಪತಿ ಹಾಗೂ ಈ ಭಾಗದ ಶಕ್ತಿದೇವತೆ ಶ್ರೀ ಬಂಡೆಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆಯಲಾಯಿತು. ನಂತರ ಕಾರ್ಖಾನೆಯ ಎಲ್ಲ ವಿಭಾಗಗಳಿಗೆ ತೆರಳಿ ಪ್ರಸ್ತುತ ಸ್ಥಿತಿಗತಿಗಳ ಕುರಿತು ಪರಿಶೀಲನೆ ನಡೆಸಲಾಯಿತು. ಮುಂದಿನ ಹಂಗಾಮಿಗೆ ಸಂಬಂಧಿಸಿದಂತೆ ಸಮಗ್ರ ಸಿದ್ಧತೆಗಳ ಕುರಿತು ಪೂರ್ವಭಾವಿ ಸಭೆ ನಡೆಸಿ, ಕಾರ್ಖಾನೆಯ ಪುನಶ್ಚೇತನದ ಕುರಿತಂತೆ ಚರ್ಚಿಸಲಾಯಿತು.

## ಸಚಿವೆ ಹೆಬ್ಬಾಳಕರ್‌ಗೆ ಅಭಿನಂದನೆಗಳ ಮಹಾಪೂರ



**ಬೆಳಗಾವಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ನೇತೃತ್ವದ ಪ್ಯಾನೆಲ್ ಮಲಪ್ರಭಾ ಸಕ್ಕರೆ ಕಾರ್ಖಾನೆ ಚುನಾವಣೆಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ರೈತರು, ಕಾರ್ಮಿಕ ಮುಖಂಡರು, ಸಹಕಾರಿ ಹಾಗೂ ಕಾರ್ಮಿಕ ಮುಖಂಡರು ನೂರಾರು ಸಂಖ್ಯೆಯಲ್ಲಿ ಮಂಗಳವಾರ ಸಚಿವರ ಮನೆಗೆ ಆಗಮಿಸಿ ಅಭಿನಂದಿಸಿದರು. ಬೆಳಗ್ಗೆಯಿಂದಲೇ ಆಗಮಿಸುತ್ತಿದ್ದ ಜನರು ಕಾರ್ಖಾನೆಯ ಜವಾಬ್ದಾರಿ ತೆಗೆದುಕೊಂಡಿದ್ದಕ್ಕೆ ಧನ್ಯವಾದ ಸಲ್ಲಿಸಿ, ನಿಮ್ಮ ನೇತೃತ್ವದಲ್ಲಿ ಕಾರ್ಖಾನೆಯ ಗತವೈಭವ ಮರುಕಳಿಸಲಿ ಎಂದು ಆಶಿಸಿದರು. ಎಲ್ಲರಿಗೂ ಧನ್ಯವಾದ ಸಲ್ಲಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಎಲ್ಲರ ಸಹಕಾರದೊಂದಿಗೆ ಕಾರ್ಖಾನೆಯ ಪುನಶ್ಚೇತನ ಮಾಡಲಾಗುವುದು. ರೈತರು, ಕಾರ್ಮಿಕರ ಹಿತ ಕಾಪಾಡಲಾಗುವುದು ಎಂದು ಭರವಸೆ ನೀಡಿದರು. ಇದೇ ವೇಳೆ ಸಚಿವರು ಗೃಹ ಕಚೇರಿಯಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದರು.



**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ನವರಾತ್ರಿಯ ಪ್ರಯುಕ್ತ ಮಂಗಳವಾರ ಕುಟುಂಬ ಸಮೇತ ಬೆಳಗಾವಿಯ ಶ್ರೀ ಮಿಲಿಟರಿ ದುರ್ಗಾದೇವಿ ಮಂದಿರಕ್ಕೆ ತೆರಳಿ, ವಿಶೇಷ ಪೂಜೆ ಸಲ್ಲಿಸಿ, ಆಶೀರ್ವಾದ ಪಡೆದು, ನಾಡಿನ ಸುಭೀಕ್ಷೆಗಾಗಿ ಪ್ರಾರ್ಥಿಸಿದರು.**

## ಸಾರ್ವಜನಿಕರ ಗಮನಕ್ಕೆ

**ಬೆಳಗಾವಿ:** ಜಿಲ್ಲೆಯ ಲಿಡಕರ್ ಮಾರಾಟ ಮಳಿಗೆಯಲ್ಲಿ ನಾಡ ಹಬ್ಬ ದಸರಾ ಮತ್ತು ದೀಪಾವಳಿ ಹಬ್ಬದ ಪ್ರಯುಕ್ತ ಗ್ರಾಹಕರು ಖರೀದಿಸಿದ ಎಲ್ಲಾ ದಾಸ್ತಾನುಗಳ ಮೇಲೆ ಶೇಕಡಾ 20ರಷ್ಟು ರಿಯಾಯಿತಿ ಮಾರಾಟವನ್ನು ಸೆಪ್ಟೆಂಬರ್, 29, 2025 ರಿಂದ ಅಕ್ಟೋಬರ್, 18, 2025 ರ ವರೆಗೆ ನೆಹರು ನಗರದಲ್ಲಿನ ಸಮಾಜ ಕಲ್ಯಾಣ ಇಲಾಖೆ ಆವರಣದಲ್ಲಿನ ಲಿಡಕರ ಮಾರಾಟ ಮಳಿಗೆಯಲ್ಲಿ ಹಮ್ಮಿಕೊಳ್ಳಲಾಗಿದೆ.ಮಾರಾಟ ಮಳಿಗೆಯಲ್ಲಿ ಅಪ್ಪಟ ಚರ್ಮದ ಗುಣಮಟ್ಟ ಹೊಂದಿದ ಮಹಿಳೆಯರ ಪಾದರಕ್ಷೆ, ವೆನಿಟಿ ಬ್ಯಾಗ್, ಪರ್ಸ ಮತ್ತು ಪುರುಷರಿಗೆ ಪಾದರಕ್ಷೆ, ಬೂಟು, ಸ್ಯಾಂಡಲ್ ಪಾದರಕ್ಷೆ ,ಬೆಲ್ಟ್, ಕಾರ್ಡ ಹೊಲ್ಡರ್, ಹಾಗೂ ಟ್ರಾವೆಲ್ ಬ್ಯಾಗ್, ಎಕ್ಸಿಕ್ಯೂಟಿವ್ ಬ್ಯಾಗ್, ಕೀ ಚೈನ್, ವೆಸ್ಟ ಪೋಚ್ ಇತ್ಯಾದಿ ಹಾಗೂ ಸರ್ಕಾರಿ/ಖಾಸಗಿ/ಅನುದಾನಿತ ಶಾಲಾ ಮಕ್ಕಳಿಗೆ ಮತ್ತು ಖಾಸಗಿ ವಸತಿ ಶಾಲೆಗಳಿಗೆ ಸಗಟು ಆದೇಶಗಳನ್ನು ನೀಡಿದ್ದಲ್ಲಿ ಕರಿ ಮತ್ತು ಬಿಳಿ ಬೂಟು ಹಾಗೂ ಸಾಕ್ಸಗಳನ್ನು, ಸರ್ಕಾರಿ/ಖಾಸಗಿ ಕಾರ್ಖಾನೆಗಳಿಗೆ ಸೇಫ್ಟಿ ಬೂಟುಗಳನ್ನು ಸರಬರಾಜು ಮಾಡಲಾಗುವುದು.

# ನಿಯಮಾನುಸಾರ ಶೀಘ್ರದಲ್ಲಿ ಸಾಲ ಮಂಜೂರ ಮಾಡಿ: ಶೆಟ್ಟರ್



**ಬೆಳಗಾವಿ:** ಜಿಲ್ಲೆಯ ವಿವಿಧ ಇಲಾಖೆಗಳ ಯೋಜನೆಗಳಡಿಯಲ್ಲಿ ಬ್ಯಾಂಕುಗಳಲ್ಲಿ ಸಲ್ಲಿಕೆಯಾದ ಸಾಲದ ಅರ್ಜಿಗಳನ್ನು ಶೀಘ್ರದಲ್ಲಿ ವಿಲೇವಾರಿಗೊಳಿಸಿ ಅರ್ಹರಿಗೆ ಸಾಲ ಮಂಜೂರು ಮಾಡಬೇಕು ಎಂದು ಜಿಲ್ಲಾ ಬ್ಯಾಂಕ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಲೋಕಸಭಾ ಸಂಸದರಾದ ಜಗದೀಶೆಟ್ಟರ ಅವರು ಸೋಮವಾರ ಜಿಲ್ಲಾಪಂಚಾಯತ ಸಭಾಭವನದಲ್ಲಿ ನಡೆದ ಲೀಡ ಬ್ಯಾಂಕ ಪ್ರಗತಿ ಶೀಲನಾ ಸಭೆಯಲ್ಲಿ ಭಾಗವಹಿಸಿ ನುಡಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಮೂಲಕ ಬ್ಯಾಂಕುಗಳಿಗೆ ಸಲ್ಲಿಕೆಯಾದ ಅರ್ಜಿಗಳನ್ನು ವಿನಾಕಾರಣ ವಿಳಂಬ ಮಾಡದೇ ಸಾಲವನ್ನು ಮಂಜೂರ ಮಾಡುವ ಮೂಲಕ ಸರ್ಕಾರಿ ಯೋಜನೆಯ ನೆರವನ್ನು ಒದಗಿಸುವಂತೆ ಸೂಚಿಸಿದರು.

PMJJBY, PMSBY &APY ಕಾರ್ಯಕ್ರಮಗಳನ್ನು ಹೆಚ್ಚಿನ ಮಟ್ಟದಲ್ಲಿ ಜನರಿಗೆ ತಲುಪುವಂತೆ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು ಮತ್ತು ರೈತರ ಬೆಳದಂತಹ ಫಸಲುಗಳನ್ನು ನೈಸರ್ಗಿಕ ವಿಕೋಪಕಗಳಿಂದ ಕಾಪಾಡಿಕೊಳ್ಳಲು ಕಡ್ಡಾಯವಾಗಿ ಎಲ್ಲ ರೈತರನ್ನು ಪ್ರಧಾನಮಂತ್ರಿ ಫಸಲು ವಿಮಾಯೋಜನೆಯಡಿ ಒಳಗೊಳ್ಳುವಂತೆ ಮಾಡಿ ರೈತರು ಎಲ್ಲ ಕಾರ್ಯಕ್ರಮಗಳ ಸುದುಪಯೋಗ ಪಡೆದುಕೊಳ್ಳುವಂತೆ ಅಧಿಕಾರಿಗಳು ನೋಡಿಕೊಳ್ಳಬೇಕೆಂದು ಸಂಸದ ಜಗದೀಶ್ಶೆಟ್ಟ ರ್ತಿಳಿಸಿದರು.

ಇದೇ ವೇಳೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ ಶಿಂಧೆ, ವಿವಿಧ ಇಲಾಖೆಗಳ ಅಡಿ ಸ್ವೀಕರಿಸಿದ ಸಾಲ ಮಂಜೂರಾತಿ ಅರ್ಜಿಗಳನ್ನು ನಿಯಮಾನುಸಾರ ತ್ವರೀತವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಮಟ್ಟದ ಎಲ್ಲ ಬ್ಯಾಂಕ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಅಲ್ಲದೇ ಇತ್ತೀಚಿನ ದಿನಗಳಲ್ಲಿ ಬ್ಯಾಂಕ ದರೋಡೆ ಹಾಗೂ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದ್ದು ಇವುಗಳನ್ನು ತಡೆಗಟ್ಟುವಲ್ಲಿ ಅಧಿಕಾರಿಗಳು ಬ್ಯಾಂಕ ಸುರಕ್ಷತೆ ಬಗ್ಗೆ ಕಾಳಜಿ ವಹಿಸತಕ್ಕದ್ದು. ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಎಲ್ಲ ಬ್ಯಾಂಕುಗಳಲ್ಲಿ ಸಿಬ್ಬಂದಿಗಳು ಜನ ಸಾಮಾನ್ಯರ ಅನುಕೂಲವಾಗುಂತೆ ಆದಷ್ಟು ಕನ್ನಡ ಭಾಷೆಯಲ್ಲಿ ವ್ಯವಹರಿಸುವಂತೆ ಜಿ.ಪಂ ರಾಹುಲ ಶಿಂಧೆ ತಿಳಿಸಿದರು.

ಲೀಡ್ಬ್ಯಾಂಕ್ಪ್ರಾದೇಶಿಕಮ್ಯಾನೇಜರ ಪ್ರಶಾಂತ ಘೋಡಕೆ ಮಾತನಾಡಿ ಜೂನ್ ಅಂತ್ಯದವರೆಗೆ ಜಿಲ್ಲೆಯ ಎಲ್ಲ ಬ್ಯಾಂಕಗಳು ಸೇರಿಕೃಷಿ ಕ್ಷೇತ್ರಕ್ಕೆ ರೂ.1406 ಕೋಟಿ, ಕೈಗಾರಿಕ ಕ್ಷೇತ್ರಕ್ಕೆ 2653.27 ಕೋಟಿ, ಶೈಕ್ಷಣಿಕ ಕ್ಷೇತ್ರಕ್ಕೆ ರೂ.13.57 ಕೋಟಿ, ಗೃಹಸಾಲ 75.03 ಕೊಟಿ ಸೇರಿದಂತೆ ಒಟ್ಟು 10801.80 ಕೋಟಿ ಸಾಲವನ್ನು ವಿತರಿಸಿರುವುದಾಗಿ ಸಭೆಗೆ ತಿಳಿಸಿದರು ಹಾಗೂ ಪ್ರಸಕ್ತ ವರ್ಷದಲ್ಲಿ 36237.48 ಕೋಟಿ ಸಾಲ ವಿತರಣೆ ಗುರಿ ಹೊಂದಲಾಗಿದೆ ಎಂದರು.

ಸಭೆಯ ಬಳಿಕ ರಾಷ್ಟ್ರೀಯ ಗ್ರಾಮೀಣ ಜಿವನೋಪಾಯ ಅಭಿಯಾನದಡಿಯಲ್ಲಿ ಮಹಿಳಾ ಸ್ವ–ಸಹಾಯ ಗುಂಪಿನ ಸದಸ್ಯರು ಉತ್ಪಾದಿಸುವ ಶಾವಿಗೆಯನ್ನ "ಬೆಳಗಾವಿ ಸಂಜೀವಿನಿ ಶಾವಿಗೆ" ಎಂಬ ಶೀರ್ಷಿಕೆಯಲ್ಲಿ ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರ ರವಿ ಎನ್ ಬಂಗಾರೆಪ್ಪನವರ, ಆರ್.ಬಿ.ಐ ಅಸಿಸ್ಟಂಟ್ಜ ಮ್ಯಾನೇಜರ್ ಆರ್.ಪ್ರಭಾಕರ, ನಬಾರ್ಡ ಅಧಿಕಾರಿ ಅಭಿನವ ಯಾಧವ ಹಾಗೂ ಎಲ್ಲಾ ಜಿಲ್ಲಾ ಬ್ಯಾಂಕ್ ಅಧಿಕಾರಿಗಳು ಮತ್ತು ಅನುಷ್ಠಾನ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅವಧಿ ವಿಸ್ತರಣೆ

**ಬೆಳಗಾವಿ:** ಪ್ರಸಕ್ತ ಸಾಲಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ 13 ವಿವಿಧ ಫಲಾನುಭವಿ ಆಧಾರಿತ ಯೋಜನೆಗಳಡಿ ಸೌಲಭ್ಯಕ್ಕಾಗಿ ಆನಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅವಧಿಯನ್ನು ದಿನಾಂಕ:15–10–2025ರ ವರೆಗೆ ವಿಸ್ತರಿಸಲಾಗಿದೆ. ಜಿಲ್ಲೆಯ ಆಸಕ್ತ ವಿಕಲಚೇತನರು https://sevasindhu.karnataka.gov.in/Sevasindhu/Kannada ಮೂಲಕ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಗಳನ್ನು ಆನಲೈನ್ ಮೂಲಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0831–2476096/7 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಅಧಿಕಾರಿಗಳಿಗೆ ರೆಡ್ಡಿ ಶ್ರೀನಿವಾಸ ಸೂಚನೆ

# ಗ್ಯಾರಂಟಿ ಫಲಾನುಭವಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕರೆತನ್ನಿ

**ಕೊಪ್ಪಳ:** ಅಕ್ಟೋಬರ್ 6 ರಂದು ಕೊಪ್ಪಳದಲ್ಲಿ ನಡೆಯಲಿರುವ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕರೆತರಲು ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಅಗತ್ಯ ಕ್ರಮವಹಿಸಿ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ರೆಡ್ಡಿ ಶ್ರೀನಿವಾಸ ಅವರು ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ನಡೆಯಲಿರುವ ಮುಖ್ಯಮಂತ್ರಿಗಳ ಕಾರ್ಯಕ್ರಮ ಯಶಸ್ವಿಯಾಗಿಸಲು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ನಿಮಗೆ ನೀಡಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳಿಗೆ ತಿಳಿಸಿದರು.

ಅದೇ ರೀತಿ ನಮ್ಮ ಜಿಲ್ಲಾ ಗ್ಯಾರಂಟಿ



ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಸಹ ತಮ್ಮ ವ್ಯಾಪ್ತಿಯಲ್ಲಿನ ಫಲಾನುಭವಿಗಳನ್ನು ಕರೆತರಲು ಅಧಿಕಾರಿಗಳಿಗೆ ಸಹಕರಿಸಿ ಈ ಕಾರ್ಯಕ್ರಮವನ್ನು ಎಲ್ಲರೂ ಒಟ್ಟಾಗಿ ಸೇರಿ ಯಶಸ್ವಿಗೊಳಿಸೋಣ ಎಂದು ಹೇಳಿದರು.

ಪ್ರತಿಯೊಂದು ಬೂತ್ ಮಟ್ಟದಲ್ಲಿ ಬಸ್ ವ್ಯವಸ್ಥೆ ಮಾಡಬೇಕು. ಆಯಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯಕ್ರಮಕ್ಕೆ ಬರುವ ಜನರನ್ನು ಸುರಕ್ಷಿತವಾಗಿ ಕರೆತರಬೇಕು. ವಿಶೇಷವಾಗಿ ಗೃಹಲಕ್ಷ್ಮೀ ಫಲಾನುಭವಿಗಳಾದ ಮಹಿಳೆಯರನ್ನು ಹೆಚ್ಚಿನ ಸಂಖ್ಯೆಯಲ್ಲಿ ಕರೆತರಬೇಕು. ಅನ್ನ ಭಾಗ್ಯ ಯೋಜನೆಯ ಫಲಾನುಭವಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕರೆತರುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಮಾತನಾಡಿ, ನಮ್ಮ ಜಿಲ್ಲೆಯಲ್ಲಿನ ಫಲಾನುಭವಿಗಳ ಪಟ್ಟಿಮಾಡಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಬಳಸಿಕೊಂಡು ಸಣ್ಣ ಉದ್ಯಮ ಪ್ರಾರಂಭಿಸಿದವರು, ಹೈನುಗಾರಿಕೆ ಮಾಡುತ್ತಿರುವವರು ಹಾಗೂ ಇತರೆ ಉತ್ತಮ ಕಾರ್ಯಕ್ಕೆ ಈ ಯೋಜನೆ ಬಳಸಿಕೊಂಡವರ ವಿಡಿಯೋ ಮತ್ತು ಫೋಟೋಗಳನ್ನು ಸಂಗ್ರಹಿಸಿ, ಅದನ್ನು ಒಂದು ಬುಕ್‌ಲೆಟ್ ತಯಾರಿಸಿ ಕಾರ್ಯಕ್ರಮದಲ್ಲಿ ಮಾನ್ಯ ಮುಖ್ಯಮಂತ್ರಿಗಳಿಂದ ಬಿಡುಗಡೆಗೊಳಿಸೋಣ ಎಂದರು.

ಜಿಲ್ಲೆಯಲ್ಲಿ ಕಾರ್ಯಕ್ರಮಕ್ಕೆ ಜನರನ್ನು ಕರೆ ತರಲು ಒಟ್ಟು 1,537 ಬಸ್‌ಗಳನ್ನು ವ್ಯವಸ್ಥೆ ಮಾಡಲಾಗಿದೆ. ಪ್ರತಿ ತಾಲ್ಲೂಕುವಾರು ಜನಸಂಖ್ಯೆಗೆ ಅನುಗುಣವಾಗಿ ಬಸ್ ಕಲ್ಪಿಸಲಾಗುವುದು. ಸಿಡಿಪಿಓ ಮತ್ತು ಅಂಗನವಾಡಿ ಕಾರ್ಯಕರ್ತರು ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ಕರೆತರಲು ಎಲ್ಲಾ ರೀತಿಯಲ್ಲಿ ತಯಾರಿ ಮಾಡಿಕೊಂಡಿದ್ದಾರೆ. ಅದಕ್ಕಾಗಿ ಜಿಲ್ಲೆಯ ಎಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ನಮ್ಮ ಅಧಿಕಾರಿಗಳಿಗೆ ಸಹಕರಿಸಬೇಕು ಎಂದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಐದು ಗ್ಯಾರಂಟಿ ಯೋಜನೆಗಳ ಪ್ರಗತಿ ವರದಿಯ ಕುರಿತು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ, ಅಮರೇಶಪ್ಪ ಎಸ್.ಜಿ., ಕಾಸಿಮ್ ಸಾಬ್ ಮರ್ದಾನ್ ಸಾಬ್, ಗ್ಯಾರಂಟಿ ಯೋಜನೆಗಳ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ ಸೇರಿದಂತೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು, ಜಿಲ್ಲೆಯ ವಿವಿಧ ತಾಲ್ಲೂಕುಗಳ ಅಧ್ಯಕ್ಷರು ಹಾಗೂ ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು, ಇತರರು ಉಪಸ್ಥಿತರಿದ್ದರು.

## ನಾಳೆ ಮಹಾತ್ಮಾ ಗಾಂಧೀಜಿಯವರ 156ನೇ ಜಯಂತ್ಯೋತ್ಸವ

**ಬೆಳಗಾವಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಮಹಾನಗರ ಪಾಲಿಕೆ, ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಮಹಾತ್ಮಾ ಗಾಂಧೀಜಿಯವರ 156 ನೇ ಜಯಂತಿ ಕಾರ್ಯಕ್ರಮವನ್ನು ಅಕ್ಟೊಬರ, 02, 2025 ರಂದು ಬೆಳಿಗ್ಗೆ 09 ಗಂಟೆಗೆ ವೀರಸೌಧ, ತಿಳಕವಾಡಿಯಲ್ಲಿ ಆಯೋಜಿಸಲಾಗಿದೆ. ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಶಾಸಕರಾದ ಅಭಯ ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದು, ಸಾಹಿತಿಗಳಾದ ಪ್ರಕಾಶ ಗಿರಿಮಲ್ಲನವರ ಅವರು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ 2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ. ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

## ಕಕ್ಕೇರಿ: ಮದ್ಯ ಮಾರಾಟ ನಿಷೇದ

**ಬೆಳಗಾವಿ:** ಜಿಲ್ಲೆಯ ಖಾನಾಪೂರ ತಾಲೂಕಿನ ಕಕ್ಕೇರಿ ಗ್ರಾಮದ ಶ್ರೀ ಭಿಷ್ಟಮ್ಮ ದೇವಿಯ ಜಾತ್ರೆಯ ನಿಮಿತ್ಯ 01. ಅಕ್ಟೋಬರ್. 2025 ರಂದು ಬೆಳಿಗ್ಗೆ 06 ಗಂಟೆಯಿಂದ 04. ಅಕ್ಟೋಬರ್, 2025 ರ ಬೆಳಿಗ್ಗೆ 06 ಗಂಟೆಯವರೆಗೆ ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲೂಕಿನ ಕಕ್ಕೇರಿ ಗ್ರಾಮದ ವ್ಯಾಪ್ತಿಯಲ್ಲಿರುವ ಎಲ್ಲ ಮದ್ಯ/ಬಾರ್ ಅಂಗಡಿಗಳನ್ನು ಬಂದ್ ಮಾಡಿ ಮದ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿರುತ್ತಾರೆ.

## ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಬೆಳಗಾವಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಪ್ರಸಕ್ತ ಸಾಲಿನ ಮಕ್ಕಳ ದಿನಾಚರಣೆ ಪ್ರಯುಕ್ತ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ, ಸಾಹಸ ಪ್ರದರ್ಶಿಸಿದ 06 ರಿಂದ 18 ವರ್ಷದೊಳಗಿನ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗೆ "ಕೆಳದಿ ಚೆನ್ನಮ್ಮ" ಶೌರ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗಾಗಿ ತಲಾ ರೂ.10,000 ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುತ್ತದೆ. ಆಸಕ್ತರು ಅಕ್ಟೋಬರ, 10, 2025 ರ ಒಳಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಛೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 05 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ. 25,000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ. 1,00,000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು. 2025ನೇ ಸಾಲಿನ ಪ್ರಶಸ್ತಿಗಾಗಿ ನಿಗಧಿಪಡಿಸಿರುವ ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿವಾಜಿ ನಗರ, ಬೆಳಗಾವಿ ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಹುಕ್ಕೇರಿ ವಿದ್ಯುತ್ ಸಂಘದ ಚುನಾವಣೆ ಹುಕ್ಕೇರಿಗಷ್ಟೇ ಸೀಮಿತ

**ಬೆಳಗಾವಿ:** ಸೋಲು–ಗೆಲುವು ಬದುಕಿನಲ್ಲಿ ಸಾಮಾನ್ಯ. ಈಗ ಸೋತ ನಮಗೆ ಮುಂದಿನ ಪ್ರಯತ್ನದಿಂದ ಗೆಲುವು ಕಟ್ಟಿಟ್ಟ ಬುತ್ತಿ ಎಂದು ಲೋಕೋಪಯೊಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹುಕ್ಕೇರಿ ವಿದ್ಯುತ್ ಸಹಕಾರಿ ಸಂಘದ ಚುನಾವಣೆಯಲ್ಲಿ ನಮ್ಮ ಪ್ರಯತ್ನ ನಾವು ಮಾಡಿದೇವೆ. ಆದರೆ ಬೇರೆ ಬೇರೆ ಕಾರಣಗಳಿಂದ ನಾವು ಸೋತಿದ್ದೇವೆ. ಸೋಲು ಸೋಲೆ. ನಮ್ಮ ಹತ್ತಿರ ಹೇಳಲಿಕ್ಕೆ ಸಾಕಷ್ಟು ಕಾರಣವಿದ್ದರೂ 1 ಮತದಿಂದ ಸೋತರು ಅದು ಸೋಲೆ ಎಂದು ಒಪ್ಪಿಕೊಳ್ಳಬೇಕಾಗುತ್ತಿದೆ ಎಂದು ತಿಳಿಸಿದರು.

ನಮ್ಮ ಸೋಲಿಗೆ ಪ್ರಮುಖ ಕಾರಣವೆನಂದರೆ ಕೆಲವು ಕಡೆ ನಮ್ಮ ಮತಗಳು ತಿರಸ್ಕಾರಗೊಂಡಿವೆ. 9 ಮತ ಹಾಕುವಲ್ಲಿ 10 ಮತ ಹಾಕಿದ್ದಾರೆ. ಕೆಲವು ಕಡೆ 5 ಸಾವಿರ ಹಾಗೂ ಇನ್ನೊಂದು ಕಡೆ 8 ಸಾವಿರ ಮತಗಳು ತಿರಸ್ಕಾರವಾಗಿವೆ. ನಾವು ಅನೇಕ ಜನರಲ್ ಚುನಾವಣೆ ಮಾಡಿದ್ದೇವೆ. ಈಗ ಹುಕ್ಕೇರಿಯಲ್ಲಿ ನಡೆದ ವಿದ್ಯುತ್ ಸಹಕಾರಿ ಚುನಾವಣೆ ನಮಗೆ ಹೊಸದಾಗಿದ್ದು, ಎಷ್ಟು ಪ್ರಯತ್ನ ಮಾಡಬೇಕೋ ಅಷ್ಟು ಪ್ರಯತ್ನ ನಮ್ಮ ಕಡೆಯಿಂದ ಮಾಡಿದ್ದೇವೆ. 12 ಸಾವಿರ ಮತಗಳನ್ನು ಪಡೆದಿದ್ದೇವೆ. ನಮ್ಮ ವಿರೋಧಿ ಬಣ 20 ಸಾವಿರ ಮತಗಳನ್ನು ಪಡೆದುಕೊಂಡಿದೆ



ಎಂದರು.ನಾವು ಗುರಿಯಿಟ್ಟ ಹಂತ ತಲುಪಿದ್ದೇವೆ. ಮತದಾರರು ತಪ್ಪು ಮತಗಳು ಹಾಕಿದ್ದರಿಂದ ನಮ್ಮಗೆ ಹಿನ್ನಡೆಯಾಗಿದೆ. ಅಲ್ಲದೇ ನಮ್ಮ ಕಣದಲ್ಲಿರುವ ಅಭ್ಯರ್ಥಿಗಳು ಹಾಗೂ ಕಾರ್ಯಕರ್ತರು ಸರಿಯಾದ ರೀತಿ ಮತದಾರರ ಮನ ಮುಟ್ಟಿ ಮನವೊಲಿಸಲು ಸಾಧ್ಯವಾಗದರಿಂದ ಈ ಚುನಾವಣೆಯಲ್ಲಿ ಸೋಲಾಗಿದೆ ಎಂದರು.

ಸೋಲಿನಿಂದ ಗೆಲುವು ಆಗೆ ಆಗುತ್ತಿದೆ, ನಮ್ಮ ವಿರೋಧಿಗಳ ಬಣ 30 ವರ್ಷಗಳಿಂದ ರಾಜಕಾರಣ ಮಾಡಿ 20 ಸಾವಿರ ಮತಗಳನ್ನು ಪಡೆದಿದ್ದಾರೆ. ಆದರೆ ನಾವು 3 ತಿಂಗಳಲ್ಲಿ ಪ್ರಚಾರ ಮಾಡಿ 12 ಸಾವಿರ ಮತಗಳನ್ನು ಪಡೆದಿದೇವೆ. ನಾವು ಎಷ್ಟು ಗುರಿ ಮುಟ್ಟಬೇಕು ಅಷ್ಟು ಹಂತದ ಗುರಿ ತಲುಪಿದ್ದೇವೆ. ಸೋಲು–ಗೆಲುವು ಅವುಗಳನ್ನು ಸಮನಾಗಿ ಸ್ವೀಕರಿಸುವ ಮನೋಭಾವ ನಮ್ಮದಾಗಬೇಕು. ಸೋಲು ಅನುಭಿಸಿದಾಗ ಕುಗ್ಗಬಾರದು. ಹಾಗೇಯೇ ಹಿಂಜರಿಯಬಾರದು. ಅದೇ ರೀತಿಯಾಗಿ ಸೋಲು ಗೆಲುವಿನ ಮೊದಲು ಮೆಟ್ಟಿಲಗಳೆಂದು ಮುನ್ನಡೆಯಬೇಕು ಎಂದು ಸಚಿವರು ಹೇಳಿದರು. ಈ ಚುನಾವಣೆ ಜಿಲ್ಲೆ, ರಾಜ್ಯಕ್ಕೆ ಸಂಬಂಧಿಸಿಲ್ಲ: ಹುಕ್ಕೇರಿಯಲ್ಲಿ ನಡೆದ ಈ ಚುನಾವಣೆ ಸೋಲು ಅನ್ನಬಹುದು ಅಷ್ಟೇ, ಬಿಟ್ಟರೆ ಇದು ಬೆಳಗಾವಿ ಜಿಲ್ಲೆ, ರಾಜ್ಯಕ್ಕೆ ಸಂಬಂಧಿಸಿಲ್ಲ. ನಾವು ನಮ್ಮ ಕಾರ್ಯಕರ್ತರ ರಕ್ಷಣೆಗೋಸ್ಕರ ಪ್ರಚಾರ ಮಾಡಿದ್ದೇವೆ ಅಷ್ಟೇ, ನಮಗೆ ಒಂದಿಷ್ಟು ಜನ ಕೈ ಜೋಡಿಸಬೇಕಾಗಿತ್ತು. ಜೋಡಿಸದ ಕಾರಣ ಚುನಾವಣೆ ಸೋಲಾಗಿದೆ. ಒಟ್ಟಾರೆ ನಮ್ಮ ಮತಗಳನ್ನು ನಾವು ಹಾಕಿಸಿಕೊಳ್ಳುವಲ್ಲಿ ವಿಫಲರಾಗಿದ್ದೇವೆ. ಕತ್ತಿಗೆ ಮಾತಿನಲ್ಲಿ ಗುಮ್ಮಿದ ಸಾಹುಕಾರ್: ಚುನಾವಣೆ ಪ್ರಚಾರದಲ್ಲಿ ಮಾತಿನ ಮೇಲೆ ಹಿಡಿತ ಇರಬೇಕು. ತಮ್ಮ ತಮ್ಮ ಘನತೆಗೆ ತಕ್ಕ ಹಾಗೇ ಮಾತನಾಡಬೇಕು. ರಮೇಶ ಕತ್ತಿ ಅವರು ಸಹ 1 ಬಾರಿ ಸಂಸದ ಆಗಿದ್ದಾರೆ. ಜನರ ಮುಂದೆ ಮಾತನಾಡುವಾಗ ಮಾತಿನಲ್ಲಿ ಹಿಡಿತ ಇರಬೇಕು ಎಂದ ಅವರು, ಯಮಕನಮರಡಿ ಹುಕ್ಕೇರಿಯ ಒಂದು ಭಾಗವಾಗಿದ್ದರಿಂದ ನಾವು ಯಾವಾಗಲೂ ಈ ಭಾಗದಲ್ಲಿ ಗಮನ ಹರಿಸಬೇಕಾಗುತ್ತದೆ ಎಂದರು. ಈ ವೇಳೆ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್, ಕಿತ್ತೂರು ಶಾಸಕ ಬಾಬಾ ಸಾಹೇಬ್ ಪಾಟೀಲ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ಕೆಪಿಸಿಸಿ ಕಾರ್ಯದರ್ಶಿ ಸುನೀಲ್ ಹಣಮನ್ನವರ್ ಸೇರಿದಂತೆ ಇತರರು ಇದ್ದರು.

## ನವರಾತ್ರಿ ಹಬ್ಬ: ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮ



**ಜಮಖಂಡಿ:** ನವರಾತ್ರಿ ಹಬ್ಬದ ಅಂಗವಾಗಿ ಛತ್ರಪತಿ ಶಿವಾಜಿ ರ್ಕಲ್‌ನ ಅಂಬಾಭವಾನಿ ತಾಯಿ ಆಯಿ ಸಂಸ್ಕೃತಿಕ ದೇವಸ್ಥಾನ ಎದುರು ರಾಷ್ಟ್ರಮಾತಾ ಜೀಜಾ ಮಹಿಳಾ ಮಂಡಳದ ವತಿಯಿಂದ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮಗಳು ಭವ್ಯವಾಗಿ ನಡೆಸಿದರು.

ಮಹಿಳಾ ಮಂಡಳದ ಅಧ್ಯಕ್ಷೆ ಗೀತಾ ಸರ್ಯವಂಶಿ ಮಾತನಾಡಿ, "ನಮ್ಮ ಸಂಸ್ಕೃತಿಯ ಶ್ರೇಷ್ಠತೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ನಮ್ಮ ರ್ತವ್ಯ. ನವರಾತ್ರಿ ಹಬ್ಬದ ಮೂಲಕ ದೇವಿಯ ಶಕ್ತಿ ಮತ್ತು ಸಾಂಸ್ಕೃತಿಕ ಪರಂಪರೆಯ ಮಹತ್ವವನ್ನು ಮಕ್ಕಳಿಗೆ ತಿಳಿಸುವ ಪ್ರಯತ್ನವಾಗಿದೆ," ಎಂದರು. ನವದರ್ಗೆಯರ ಅವತಾರಗಳನ್ನು ಮಕ್ಕಳ ನೃತ್ಯಗಳ ಮೂಲಕ ಅತ್ಯಂತ ಮನಮೋಹಕವಾಗಿ ಪ್ರ್ರಿಸಲಾಯಿತು. ವಿವಿಧ ವೇಷಭೂಷಣಗಳಲ್ಲಿ ಮಿಂಚಿದ ಮಕ್ಕಳು, ನವರಾತ್ರಿ ಹಬ್ಬದ ಪವಿತ್ರತೆಯನ್ನು ತಮ್ಮ ನೃತ್ಯಗಳ ಮೂಲಕ ಜೀವಂತಗೊಳಿಸಿದರು. ಪ್ರತಿ ಅವತಾರದ ಹಿನ್ನೆಲೆಯ ಕಥೆಯನ್ನು ನೃತ್ಯ ರೂಪದಲ್ಲಿ ವಿವರಿಸುವ ಮೂಲಕ, ಪ್ರೇಕ್ಷಕರಿಗೆ ಗಮನ ಸೆಳೆದರು

ಈ ಕಾರ್ಯಕ್ರಮದಲ್ಲಿ ವಾಸುದೇವ ಫರಾಸ ಮಂಜುಳ ಮಾನೆ, ಆಶಾ ಮಾನೆ, ಅರುಣ ಬೋಲೆ, ಅನಿಲ ಘಾಟಗೆ, ಭಾರತಿ ಗಂಗಾಧರ ಸಂಜು ಖರಾಡೆ, ರಾಹುಲ್ ಗಾಯಕ್ವಾಡ್,ಹಾಗೂ ಎಲ್ಲ ಯುವಕ, ಯುವತಿಯರು, ತಾಯಂದಿರು ಭಾಗವಹಿಸಿದರು.

## ಅ.4ರಂದು ಬಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನೆ

**ಬೆಳಗಾವಿ:** ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂಜಿನೀಯರಿಂಗ್ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ನಿರ್ಮಿಸಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ಉದ್ಘಾಟನೆ ಹಾಗೂ ಗೃಹ ವೈದ್ಯರ ವಸತಿ ನಿಲಯ ಕಟ್ಟಡ ನಿರ್ಮಾಣ ಕಾಮಗಾರಿಯ ಶಿಲಾನ್ಯಾಸ ಸಮಾರಂಭವನ್ನು ಅಕ್ಟೊಬರ, 04, 2025 ರಂದು ಮಧ್ಯಾಹ್ನ 02 ಗಂಟೆಗೆ ಬಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿ ಆಯೋಜಿಸಲಾಗಿದೆ.

ಮುಖ್ಯಮಂತ್ರಿಗಳಾದ ಸಿದ್ಧಾರಾಮಯ್ಯ ಅವರು ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ ಶಿವಕುಮಾರ ಅವರುಗಳು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಲ. ಜಾರಕಿಹೊಳಿ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷೀ ಹೆಬ್ಬಾಳಕರ ಹಾಗೂ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಶರಣ ಪ್ರಕಾಶ ಪಾಟೀಲ ಅವರುಗಳು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಶಾಸಕರಾದ ಆಸೀಫ್ (ರಾಜು) ಸೇಠ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ 2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ. ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಅತಿಥಿಗಳಾಗಿ ಆಗಮಿಸಲಿದ್ದಾರೆ. ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

## ಯುಕ್ತದಾರ ತಂತ್ರಾಂಶ ಕುರಿತು ತರಬೇತಿ ಕಾರ್ಯಾಗಾರ

**ಬಾಗಲಕೋಟೆ:** ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಹಮ್ಮಿಕೊಂಡ ಯುಕ್ತದಾರ ತಂತ್ರಾಂಶ ಕುರಿತ ಒಂದು ದಿನದ ಕಾರ್ಯಾಗಾರಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಹಮ್ಮಿಕೊಂಡ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಕೇಂದ್ರ ಗ್ರಾಮೀಣ ಅಭಿವೃದ್ಧಿ ಮಂತ್ರಾಲಯ ಹಾಗೂ ಕರ್ನಾಟಕ ಅಬಿವೃದ್ಧಿ ಆಯುಕ್ತಾಲಯದ ನಿರ್ದೇಶನದಂತೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಜಿಐಎಸ್ ಆಧಾರಿತ ಕಾಮಗಾರಿಗಳನ್ನು ಯುಕ್ತದಾರ ತಂತ್ರಾಂಶದಲ್ಲಿ ವೈಜ್ಞಾನಿಕವಾಗಿ ತಯಾರಿಸ ಬೇಕಾಗಿರುವದರಿಂದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಅದರಂತೆ 2026–27ನೇ ಸಾಲಿನಲ್ಲಿ ಯುಕ್ತದಾರ ತಂತ್ರಾಂಶದ ಮೂಲಕ ಯೋಜನೆಯನ್ನು ಸಿದ್ಧಪಡಿಸಲು, ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಯುಕ್ತದಾರ ತಂತ್ರಾಂಶ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.



ಯುಕ್ತದಾರ ತಂತ್ರಾಂಶವನ್ನು ಈಗಾಗಲೇ ಹಲವು ರಾಜ್ಯಗಳು ಅಳವಡಿಸಿಕೊಂಡು ಕಾರ್ಯ ನಿರ್ವಹಿಸುತ್ತಿವೆ. ಸರ್ಕಾರದ ಅನುದಾನ ಪೋಲಾಗದಂತೆ ನೋಡಿಕೊಳ್ಳುವ ಜೊತೆಗೆ ಕಾರ್ಯ ಪೂರ್ಣಗೊಳಿಸುವ ಸಾಮರ್ಥ್ಯಕ್ಕನುಗುಣವಾಗಿ ಕಾಮಗಾರಿ ಕೈಗೊಳ್ಳಲು ತಿಳಿಸಿದರು.

ಜಿ.ಪಂ ಉಪಕಾರ್ಯದರ್ಶಿ ಎನ್. ವೈ.ಬಸರಿಗಿಡದ ಮಾತನಾಡಿ ಪಿಡಿಓ ಮತ್ತು ತಾಂತ್ರಿಕ ಸಿಬ್ಬಂದಿಗಳು ಇ–ಸಕ್ಷಮ ಮೂಲಕ ನೊಂದಣಿಯಾಗಿ ಯುಕ್ತದಾರ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಳ್ಳಲು ಸೂಚಿಸಿದರು. ಅಲ್ಲದೇ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಕಾರ್ಮಿಕರ, ಜಾಬ್ ಕಾರ್ಡ್ ಹೊಂದಿದ, ಸಕ್ರಿಯ ಕಾರ್ಮಿಕ ಕುಟುಂಬಗಳ ಮೂರು ವರ್ಷಗಳ ಸರಾಸರಿ ಗಮನಿಸಿ ಮುಂದಿನ ಕಾಮಗಾರಿಗಳ ರೂಪುರೇಷೆ ತಯಾರಿಸುವಂತೆ ಆಯಾ ಗ್ರಾಮ ಸಭೆಗಳಲ್ಲಿ ಚರ್ಚಿಸಲು ತಿಳಿಸಿದರು.

ಯುಕ್ತದಾರ ತಂತ್ರಾಂಶ ಕುರಿತು ಜಿಲ್ಲಾ ಪಂಚಾಯತಿ ನರೇಗಾ ಸಿಬ್ಬಂದಿಯಾದ ರಾಜೇಶ್ವರಿ ಗಡೇದ ಹಾಗೂ ಉಜ್ವಲ ಸಕ್ರಿ, ತಾಲೂಕ ಮಟ್ಟದ ನರೇಗಾ ಸಿಬ್ಬಂದಿಯಾದ ಬಾಹುಬಲಿ ಮುರಗುಂಡಿ ಹಾಗೂ ನವೀನ ಹಂಚಾಟೆ ತರಬೇತಿ ನೀಡಿದರು.

ತರಬೇತಿಯಲ್ಲಿ ಸಾಮಾಜಿಕ ಅರಣ್ಯ, ಪ್ರಾದೇಶಿಕ ಅರಣ್ಯ, ಕೃಷಿ, ತೋಟಗಾರಿಕೆ, ರೇಷ್ಮೆ ಹಾಗೂ ಪಂಚಾಯತ ರಾಜ್ ಇಲಾಖೆಯ ಜಿಲ್ಲಾ ಹಾಗೂ ತಾಲೂಕು, ಹೋಬಳಿ ಮಟ್ಟದ ಅಧಿಕಾರಿಗಳು, ಜಿಲ್ಲೆಯ ಎಲ್ಲ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಜಿಲ್ಲೆಯ ಎಲ್ಲ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಜಿಲ್ಲೆಯ ಎಲ್ಲ ತಾಂತ್ರಿಕ ಸಂಯೋಜಕರು ತಾಂತ್ರಿಕ ಸಹಾಯಕರು ಹಾಜರಿದ್ದರು.

## ಅರ್ಜಿ ಆಹ್ವಾನ

**ಗದಗ:** 2025–26 ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಪೋಲಿಸ ಕಾನಸ್ಟೇಬಲ್ ನೇಮಕಾತಿ ಪರೀಕ್ಷಾ ಪೂರ್ವ ತರಬೇತಿ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಸದರಿ ತರಬೇತಿಗೆ ವಿದ್ಯಾರ್ಥಿಗಳಿಂದ https://dom.karntaka.gov.in ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 3 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ https://dom.karntaka.gov.in ಮತ್ತು ಸಹಾಯವಾಣಿ ಸಂ.: 8277799990 ಇವರನ್ನು ಸಂಪರ್ಕಿಸಬಹುದಾಗಿದೆ.

### ಜಿಲ್ಲಾ ಮಟ್ಟದ ದೌರ್ಜನ್ಯ ನಿಯಂತ್ರಣ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ

# ಸ್ಮಶಾನ ಭೂಮಿ ಖರೀದಿಗೆ ಕ್ರಮ: ಜಿಲ್ಲಾಧಿಕಾರಿ

**ಬೆಳಗಾವಿ:** ಜಿಲ್ಲೆಯಲ್ಲಿ ಈಗಾಗಲೇ ಪರಿಶಿಷ್ಟ ಸಮುದಾಯದವರಿಗೆ ಸ್ಮಶಾನ ಭೂಮಿ ಮಂಜೂರು ಮಾಡಲಾಗಿದ್ದು, ಅಗತ್ಯವಿರುವ ಗ್ರಾಮಗಳಿಗೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸ್ಮಶಾನ ಭೂಮಿ ಖರೀದಿಗೆ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ದೌರ್ಜನ್ಯ ನಿಯಂತ್ರಣ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲೋಂಡಾದಲ್ಲಿ ಪರಿಶಿಷ್ಟ ಜಾತಿ /ಪ.ಪಂಗಡದ ಸಮುದಾಯದವರಿಗೆ ಸ್ಮಶಾನ ಭೂಮಿ ಗುರುತಿಸಲು ಕಂದಾಯ ಹಾಗೂ ಅರಣ್ಯ ಇಲಾಖೆಗಳು ಜಂಟಿ ಸಮೀಕ್ಷೆ ನಡೆಸಿ ವರದಿ ತಯಾರಿಸಿ ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು.

ಖಾನಾಪುರದಲ್ಲಿ ಸ್ಮಶಾನ ಭೂಮಿಗೆ ಅಗತ್ಯ ಭೂಮಿ ನೀಡಲು ಸಾರ್ವಜನಿಕರು ಮುಂದಾದರೆ ಅಂತಹ ಜಮೀನು ಖರೀದಿಗೆ ಪ್ರಕ್ರಿಯೆ ಪ್ರಾರಂಭಿಸಲು ತಿಳಿಸಿದರು. ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಎಸ್.ಎಸಿ–ಎಸ್.ಟಿ ವರ್ಗದವರು ಆಸ್ಪತ್ರೆಗೆ ಬರುವ ಸಮಯದಲ್ಲಿ ಜಾತಿ ಪ್ರಮಾಣ ಪತ್ರ ಬಿಟ್ಟು ಬಂದಲ್ಲಿ ತಾತ್ಕಾಲಿಕವಾಗಿ ಚಿಕಿತ್ಸೆ ಒದಗಿಸಬೇಕು ಬಳಿಕ ಜಾತಿ ಪ್ರಮಾಣ ಪತ್ರ ಸಲ್ಲಿಸಲು ಅವಕಾಶ ಕಲ್ಪಿಸಬೇಕು.

ಜಿಲ್ಲಾ ಆಸ್ಪತ್ರೆಯಲ್ಲಿ ದಾಖಲಾಗುವ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ರೋಗಿಗಳು ಚಿಕಿತ್ಸೆಗಾಗಿ ಭರಿಸಿದ ಮೊತ್ತವನ್ನು 48 ಗಂಟೆಯೊಳಗಾಗಿ ಜಾತಿ ಪ್ರಮಾಣಪತ್ರ ಒದಗಿಸದ್ದಲ್ಲಿ ಮೊತ್ತವನ್ನು ಮರಳಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಬಿಮ್ಸ್ ಆಸ್ಪತ್ರೆಯಲ್ಲಿ ಜರುಗಿದ ತರಬೇತಿಗೆ ವಿಭಾಗದ ಮುಖ್ಯಸ್ಥರುಗಳು ಹಾಜರಾಗಿರುವುದಿಲ್ಲ. ಮುಂದಿನ ಸಭೆಯೊಳಗಾಗಿ ಮತ್ತೊಮ್ಮೆ ಸಭೆ ಜರುಗಿಸಿ ಆಯಾ



ವಿಭಾಗದ ಮುಖ್ಯಸ್ಥರುಗಳು ಕಡ್ಡಾಯವಾಗಿ ಹಾಜರಾಗುವಂತೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದರು.

ದೌರ್ಜನ್ಯ ನಿಯಂತ್ರಣ ಸಮಿತಿಯ ಸದಸ್ಯ ಕರೆಪ್ಪ ಗುಡೆನ್ನವರ ಮಾತನಾಡಿ ಅರಣ್ಯ ಇಲಾಖೆಯಲ್ಲಿ ಬ್ಯಾಕ್ ಲಾಗ್ ಹುದ್ದೆಗಳ ಭರ್ತಿ ಮತ್ತು ಈಗಾಗಲೇ ಕಾರ್ಯ ನಿರ್ವಹಿಸುತ್ತಿರುವ ಎಸ್. ಸಿ–ಎಸ್.ಟಿ ನೌಕರರಿಗೆ ನಿಯಮಾನುಸಾರ ಮುಂಬಡ್ತಿ ತಡವಾಗುತ್ತಿದೆ. ಈಗಾಗಲೇ ಸಾಕಷ್ಟು ಬಾರಿ ಈ ವಿಷಯದ ಕುರಿತು ಸಭೆಯಲ್ಲಿ ಚರ್ಚೆ ಮಾಡಲಾಗುತ್ತಿದೆ. ಕೂಡಲೇ ಜಿಲ್ಲಾಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ನಿಯಮಾನುಸಾರ ಮುಂಬಡ್ತಿ ಆದೇಶಿಸಬೇಕು ಎಂದು ಕರೆಪ್ಪ ಗುಡೆನ್ನವರ ಅವರು ತಿಳಿಸಿದರು.

ಪರಿಶಿಷ್ಟ ಸಮುದಾಯದವರಿಗೆ ಈಗಾಗಲೇ ಅಗತ್ಯ ಸ್ಥಳಗಳಲ್ಲಿ ಸ್ಮಶಾನಭೂಮಿ ಮಂಜೂರು ಮಾಡಲಾಗಿದೆ. ಮಂಜೂರು ಆಗಿರುವ ಭೂಮಿಗಳ ಅರಣ್ಯ ಪ್ರದೇಶದ ಭಾಗದಲ್ಲಿರುವ ಕಾರಣ ಅಂತಹ ಸ್ಥಳಗಳ ಬದಲಿಗೆ ಗ್ರಾಮಗಳ ಹತ್ತಿರದ ಉಳುಭೂಮಿಯಾದಲ್ಲಿ ಅನುಕೂಲವಾಗಲಿದೆ ಎಂದು ತಿಳಿಸಿದರು. ಈಗಾಗಲೇ ನಗರದ ಆರ್.ಪಿ.ಡಿ ವೃತ್ತಕ್ಕೆ ವೀರ ಮದಕರಿ ನಾಯಕ ಎಂದು ನಾಮಕರಣ ಮಾಡಲು ಸಭೆಯಲ್ಲಿ ಸಾಕಷ್ಟು ಬಾರಿ ಚರ್ಚಿಸಲಾಗಿದೆ ಆದರೆ ಮದಕರಿ ನಾಯಕರ ಹೆಸರು ನಾಮಕರಣ ಬದಲಿಗೆ ಇತರೆ ಹೆಸರು ನಾಮಕರಣಕ್ಕೆ ಪಾಲಿಕೆ ಪರಿಷತ್ ನಲ್ಲಿ ತೀರ್ಮಾನಿಸಲಾಗಿದೆ.

ಮದಕರಿ ನಾಯಕರ ಹೆಸರು ನಾಮಕರಣಕ್ಕೆ 2020 ರಿಂದ ಈ ಕುರಿತು ನಿರಂತರ ವಿಷಯ ಪ್ರಸ್ತಾಪಿಸಲಾಗಿದೆ. ಕೂಡಲೇ ಇದನ್ನು ಕೈ ಬಿಟ್ಟು ಮದಕರಿ ನಾಯಕರ ಹೆಸರು ನಾಮಕರಣಕ್ಕೆ ಸೂಚಿಸಬೇಕು ಎಂದು ಕರೆಪ್ಪ ಗುಡೆನ್ನವರ ಒತ್ತಾಯಿಸಿದರು.

ಕಳೆದ ಮೂರು ತಿಂಗಳಲ್ಲಿ ದಾಖಲಾಗಿರುವ ದೌರ್ಜನ್ಯ ಪ್ರಕರಣಗಳು ನ್ಯಾಯಾಲಯದ ಹಂತದಲ್ಲಿ ಇತ್ಯರ್ಥ ಪಡಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆಯಿಂದ ಪರಿಹಾರ ವಿತರಣೆಯಲ್ಲಿ ಯಾವುದೇ ಪ್ರಕರಣಗಳು ಬಾಕಿ ಇರುವದಿಲ್ಲ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ ಅವರು ತಿಳಿಸಿದರು.

ನಗರ ಪೊಲೀಸ್ ಆಯುಕ್ತ ಭೂಷಣ್ ಗುಲಾಬರಾವ ಬೊರಸೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಮಹಾನಗರ ಪಾಲಿಕೆ ಆಯುಕ್ತೆ ಶುಭ ಬಿ, ಮುಖಂಡರಾದ ಮಲ್ಲೇಶ ಚೌಗಲಾ, ಜಿಲ್ಲಾ ಮಟ್ಟದ ದೌರ್ಜನ್ಯ ನಿಯಂತ್ರಣ ಸಮಿತಿಯ ನಾಮನಿರ್ದೇಶಿತ ಸದಸ್ಯರಾದ ಬಸವರಾಜ ಆಯಟ್ಟಿ, ವಿಜಯ ತಳವಾರ, ಸಿದ್ಧರಾಯ ಮೇತ್ರಿ, ಆಹಾರ ಇಲಾಖೆ ಉಪ ನಿರ್ದೇಶಕ ಮಲ್ಲಿಕಾರ್ಜುನ್ ನಾಯಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಈಶ್ವರ ಗಡಾದಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಸವರಾಜ ಕುರಿಹುಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



ತೇರದಾಳ ಕಲ್ಲಟ್ಟಿ ಗಲ್ಲಿಯಲ್ಲಿ ಆದಿಶಕ್ತಿ ತರುಣ ಮಂಡಳಿ ದಸಾರ ನಿಮಿತ್ತ ಪ್ರತಿಷ್ಠಾಪಿಸಿರುವ ಆದಿಶಕ್ತಿ ದೇವಿ ಮೂರ್ತಿಗೆ ಉಡಿ ತುಂಬುವುದು ಹೋಮ–ಹವನ ಕಾರ್ಯಕ್ರಮ ಜರುಗಿದವು. ಹಾಗೂ ಗೌರಿ ಗಣೇಶ ಮಹಿಳಾ ಸಂಘದ ಆಶ್ರಯದಲ್ಲಿ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಿತು.

## ಆರ್‌ಟಿಓ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಒತ್ತಾಯ

**ಜಮಖಂಡಿ:** ತಾಲೂಕಿನ ಆರ್‌ಟಿಓ ಅಧಿಕಾರಿಗಳು ರ್‍ನಾಟಕ ಪಾಸಿಂಗ್ ಇಲ್ಲದ ವಾಹನಗಳಿಗೆ ದಂಡ ವಿಧಿಸುತ್ತಿರುವ ಹಾಗೂ ವಾಹನ ಮಾಲಕರಿಗೆ ಕಿರುಕುಳ ನೀಡುತ್ತಿರುವ ಕ್ರಮವನ್ನು ರ್‍ನಾಟಕ ರಾಜ್ಯ ದಲಿತ ಸಂರ್‍ಷ ಸಮಿತಿ ತೀವ್ರವಾಗಿ ಖಂಡಿಸಿದರು. ಯಾವುದೇ ರ್‍ವಪರ ಮಾಹಿತಿ ನೀಡದೆ ಅಧಿಕಾರಿಗಳು ವಾಹನಗಳನ್ನು ತಡೆದು ನಿಲ್ಲಿಸಿ, ಮನಸ್ಸಿಗೆ ಬಂದಂತೆ ದಂಡ ವಿಧಿಸುತ್ತಿರುವುದು ನ್ಯಾಯಸಮ್ಮತವಲ್ಲ. ಈ ಕ್ರಮವು ರ್‍ವಜನಿಕರಿಗೆ



ಅನಾವಶ್ಯಕ ತೊಂದರೆ ಉಂಟುಮಾಡುತ್ತಿದೆ ಈ ಕುರಿತು ಮಾನ್ಯ ಸಾರಿಗೆ ಸಚಿವ ರಾಮಲಿಂಗಾರಡ್ಡಿ ಅವರು ತಕ್ಷಣ ಗಮನ ಹರಿಸಬೇಕೆಂದು ಸಮಿತಿ ಒತ್ತಾಯಿಸಿದರು . ದಲಿತ ಸಂರ್‍ಷ ಸಮಿತಿಯ ರಾಜ್ಯ ಸಂಘಟನಾ ಸಂಚಾಲಕ ಶಾಮರಾವ್ ಘಾಟಗೆ, ಜಿಲ್ಲಾ ಸಂಚಾಲಕ ಹನಮಂತ ಚಿಮ್ಮಲಗಿ, ಮುತ್ತಣ್ಣ ಮೇತ್ರಿ, ಕೃಷ್ಣಮರ್ತಿ ನಾಯ್ಕರ್, ಆನಂದ ದೊಡಮನಿ, ಸಂಗಣ್ಣ ಮಡ್ಡಿ, ಚಂದ್ರು ಹರಿಜನ ಹಾಗೂ ಲಕ್ಷ್ಮಣ ಹರಿಜನ ಅವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :202, Postal Reg No. PMG/KA/NK/BM/135/25-27 / POST AT Vantamury Colony Post Office


ಮೈಸೂರು ದಸರಾ
ಕ್ರಿ.ಶ. 1610 ರಿಂದ ಆಚರಣೆ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಗಾಂಧಿ ಭಾರತ
ಲಾಲ್ ಬಹದ್ದೂರ್ ಶಾಸ್ತ್ರಿಯವರ
121ನೇ ಜನ್ಮದಿನಾಚರಣೆ
ದಸರಾ
ಅಂದರೆ
ಅಸತ್ಯದ ಮೇಲೆ
ಸತ್ಯದ
ಜಯ
ವಿಶ್ವ ವಿಖ್ಯಾತ ಮೈಸೂರು ದಸರಾ
ನಾಡ ಹಬ್ಬ - 2025
ರಾಷ್ಟ್ರಪಿತ
ಮಹಾತ್ಮ ಗಾಂಧೀಜಿ
ಅವರ 156ನೇ ಜನ್ಮದಿನಾಚರಣೆ
2ನೇ ಅಕ್ಟೋಬರ್ 2025
ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ
156ನೇ ಜನ್ಮದಿನದ ಅಂಗವಾಗಿ
ಅವರ ಪ್ರತಿಮೆಗೆ ಗೌರವ ಸಮರ್ಪಣೆ
ದಿನಾಂಕ: 02-10-2025, ಗುರುವಾರ
ಬೆಳಿಗ್ಗೆ 8:30 ಕ್ಕೆ | ಗಾಂಧಿ ಚೌಕ, ಮೈಸೂರು
ನಂದಿಧ್ವಜ ಪೂಜೆ
(ಬಲರಾಮ ದ್ವಾರ, ಅರಮನೆ ಆವರಣ)
ದಿನಾಂಕ: 02-10-2025, ಗುರುವಾರ
ಮಧ್ಯಾಹ್ನ 1:00 ರಿಂದ 1:18 ರವರೆಗೆ
ಸಲ್ಲುವ ಶುಭ ಧನುರ್ ಲಗ್ನದಲ್ಲಿ
ವಿಜಯದಶಮಿ ಮೆರವಣಿಗೆ
(ಅರಮನೆ ಒಳಾಂಗಣ)
ದಿನಾಂಕ: 02-10-2025, ಗುರುವಾರ
ಸಂಜೆ: 4:42 ರಿಂದ 5:06 ರವರೆಗೆ
ಸಲ್ಲುವ ಶುಭ ಕುಂಭ ಲಗ್ನದಲ್ಲಿ
ಪಂಜಿನ ಕವಾಯತು
(ಟಾರ್ಚ್ ಲೈಟ್ ಪೆರೇಡ್)
ದಿನಾಂಕ: 02-10-2025, ಗುರುವಾರ | ಸಮಯ: ಸಂಜೆ 7:00 ಗಂಟೆಗೆ
ಸ್ಥಳ: ಬನ್ನಿ ಮಂಟಪ ಮೈದಾನ
ನಾಡಹಬ್ಬ ದಸರಾದ
ಶುಭಾಶಯಗಳು
ಕರ್ನಾಟಕದ ನವ ನಿರ್ಮಾಣಕ್ಕೆ
ಗ್ಯಾರಂಟಿ ಸರ್ಕಾರ
ಶಕ್ತಿ
ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ
ಅನ್ನಭಾಗ್ಯ
ಬಡವರಿಗೆ ಪ್ರತಿ ತಿಂಗಳು 10 kg ಅಕ್ಕಿ
ಗೃಹಜ್ಯೋತಿ
ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಗೃಹಲಕ್ಷ್ಮಿ
ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000
ಯುವನಿಧಿ
ಪ್ರತಿ ತಿಂಗಳು ನಿರುದ್ಯೋಗ ಭತ್ಯೆ
₹3000 ಪದವೀಧರರಿಗೆ | ₹1500 ಡಿಪ್ಲೊಮಾ ಪದವೀಧರರಿಗೆ
ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು
– ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ
CMofKarnataka
https://dipr.karnataka.gov.in/
ಕರ್ನಾಟಕ ವಾರ್ತೆ